ಸಂಪುಟ: 14 Volume ಸಂಚಿಕೆ: 91 Issue ಪುಟಗಳು 08 Pages ಮಂಗಳವಾರ 14 ಜುಲೈ 2026 ₹4 PRGINO.120927 (RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ
Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ
ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಕಾಲದ ಮರಳಿನಲ್ಲಿ ಹೆಜ್ಜೆಗುರುತುಗಳನ್ನು ಬಿಡು. ಕಾಲನ್ನೆಳೆಯುತ್ತಾ ನಡೆಯಬೇಡ.

–ಎ.ಪಿ.ಜೆ.ಅಬ್ದುಲ್ ಕಲಾಂ



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಚಿತ್ರದುರ್ಗದಲ್ಲಿ ಸೋಮವಾರ ರಾಜ್ಯಸಭೆ ಮಾಜಿ ಸದಸ್ಯ ಹೆಚ್. ಹನುಮಂತಪ್ಪ ಅವರ ಪಾರ್ಥಿವ ಶರೀರಕ್ಕೆ ಪುಷ್ಪ ನಮನ ಸಲ್ಲಿಸಿದರು. ನಂತರ ಮಾಧ್ಯಮಗಳ ಜತೆ ಮಾತನಾಡಿದರು.



ವಿವಿಧ ಸಮುದಾಯಗಳ ಪೂಜ್ಯ ಮಠಾಧೀಶರುಗಳು ಇಂದು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿವಾಸಕ್ಕೆ ಭೇಟಿ ನೀಡಿ, ಆಶೀರ್ವದಿಸಿದರು.

## KPSC ಅಧ್ಯಕ್ಷನ ಅಮಾನತಿಗೆ ಆದೇಶ

**ಬೆಂಗಳೂರು:** ತನ್ನ ಇಬ್ಬರು ಪುತ್ರಿಯರು ಕೈಗಾರಿಕಾ ವಿಸ್ತರಣಾಧಿಕಾರಿಯಾಗಿ ನೇಮಕವಾಗಲು ಸಹಕರಿಸಿದ್ದಾರೆ ಎಂಬ ಆರೋಪದ ಹಿನ್ನೆಲೆಯಲ್ಲಿ KPSC ಅಧ್ಯಕ್ಷ ಶಿವಶಂಕರಪ್ಪ ಸಾಹುಕಾರ ಅವರನ್ನು ಕೂಡಲೇ ಜಾರಿಗೆ ಬರುವಂತೆ ಅಮಾನತುಗೊಳಿಸಿ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ಶಿವಶಂಕರಪ್ಪ ವಿರುದ್ಧದ ಆರೋಪಗಳ ಬಗ್ಗೆ ತನಿಖೆಗೆ ಶಿಫಾರಸು ಮಾಡಲಾಗಿದೆ ಸುಪ್ರೀಂಕೋರ್ಟ್‌ಗೆ ಉಲ್ಲೇಖಿಸಲು ರಾಷ್ಟ್ರಪತಿಗಳಿಗೆ ರಾಜ್ಯಪಾಲರು ಶಿಫಾರಸು ಮಾಡಿದ್ದಾರೆ. ಮುಂದಿನ ಆದೇಶದವರೆಗೆ ಹಿರಿಯ ಸದಸ್ಯರು ಕೆಪಿಎಸ್ ಸಿ ಹಂಗಾಮಿ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುವಂತೆ ರಾಜ್ಯಪಾಲರ ಆದೇಶದಲ್ಲಿ ತಿಳಿಸಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗದ ಅಧ್ಯಕ್ಷರಾದ ಶಿವಶಂಕರಪ್ಪ ಎಸ್. ಸಾಹುಕಾರ ಅವರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡಿರುವ ಗಂಭೀರ ಆರೋಪ ಕೇಳಿಬಂದಿದೆ. ತಮ್ಮ ಪುತ್ರಿಗೆ ಸರ್ಕಾರಿ ಹುದ್ದೆ ಕೊಡುವ ಸಲುವಾಗಿ, ಕುಟುಂಬದ ವಾರ್ಷಿಕ ಆದಾಯ ಪ್ರಮಾಣಪತ್ರದಲ್ಲಿ ಸುಳ್ಳು ಮಾಹಿತಿ ಹಾಕಲು ಅವರು ಸಹಕರಿಸಿದ್ದಾರೆ ಎಂಬುದು ಮೇಲ್ನೋಟಕ್ಕೆ ಸಾಬೀತಾಗಿದೆ.



ಬೆಂಗಳೂರಿನ ದೊಮ್ಮಲೂರಿನಲ್ಲಿರುವ ಸಚಿವ ಕೆ ಜೆ ಜಾರ್ಜ್ ಅವರ ನಿವಾಸಕ್ಕೆ ಸಿಎಂ ಡಿ ಕೆ ಶಿವಕುಮಾರ್ ಅವರು ಶನಿವಾರ ರಾತ್ರಿ ಭೇಟಿ ನೀಡಿದ್ದರು. ಪತ್ನಿ ಸುಜಾ ಜಾರ್ಜ್, ಪುತ್ರ ರಾಣಾ ಜಾರ್ಜ್ ಅವರು ಉಪಸ್ಥಿತರಿದ್ದರು.

## ಟ್ರಾಫಿಕ್ ನಿರ್ವಹಣೆಗೆ ಅಧಿಕಾರಿಗಳೊಂದಿಗೆ ಸಭೆ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಬೆಂಗಳೂರಿನ ಟ್ರಾಫಿಕ್ ನಿರ್ವಹಣೆಯಲ್ಲಿ ಕೈಗೊಳ್ಳಬಹುದಾದ ಸುಧಾರಣೆಗಳ ಕುರಿತು ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಬೆಂಗಳೂರಿನಲ್ಲಿ ಸಭೆ ನಡೆಸಿದರು.

ಜಾಗತಿಕ ಮಟ್ಟದಲ್ಲಿ ಟೆಕ್ನಾಲಜಿ ಹಬ್ ಎಂದು ಗುರುತಿಸಿಕೊಂಡಿರುವ ಬೆಂಗಳೂರು ಸರ್ವ ರೀತಿಯಲ್ಲೂ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ನಗರವಾಗಿದೆ. ಜಾಗತಿಕ ಕಂಪೆನಿಗಳು ಬೆಂಗಳೂರನ್ನು ತಮ್ಮ ಆದ್ಯತೆಯ ಆಯ್ಕೆಯಾಗಿ ಮಾಡಿಕೊಳ್ಳುತ್ತಿರುವ ಈ ಹೊತ್ತಿನಲ್ಲಿ ಮತ್ತು ಬೆಂಗಳೂರಿನ ಬಹು ಆಯಾಮದ ಬೆಳವಣಿಗೆಯಲ್ಲಿ ವಾಹನ ದಟ್ಟಣೆಯ ಬೆಳವಣಿಯೂ ಒಂದು. ಬೇರೆಲ್ಲ ವಲಯದ ಬೆಳವಣಿಗೆಯು ಹೆಮ್ಮೆಪಡುವಂತಿದ್ದರೆ, ವಾಹನ ದಟ್ಟಣೆಯ ಬೆಳವಣಿಗೆ ಆತಂಕಪಡುವಂತಹದ್ದು.



ಟ್ರಾಫಿಕ್ ಸಮಸ್ಯೆಯ ಮೂಲಭೂತ ಕಾರಣಗಳನ್ನು ಗುರುತಿಸುವುದರೊಂದಿಗೆ ಕಾಲಕಾಲಕ್ಕೆ ಸುಧಾರಣಾ ಕ್ರಮಗಳ ಉನ್ನತಿಕರಣವೂ ಅತ್ಯಗತ್ಯ.

ದೇಶದ ಇತರ ನಗರಗಳಲ್ಲಿನ ಟ್ರಾಫಿಕ್ ನಿರ್ವಹಣೆಯ ಮಾದರಿಗಳನ್ನು ಅಧ್ಯಯನ ಮಾಡುವುದರೊಂದಿಗೆ, ಇತರ ದೇಶಗಳಲ್ಲಿನ ಟ್ರಾಫಿಕ್ ನಿರ್ವಹಣೆಯ ಮಾದರಿಗಳನ್ನೂ ಸಹ ಅಧ್ಯಯನ ನಡೆಸಿ ಅಳವಡಿಸಿಕೊಳ್ಳುವ ಕುರಿತು ಸಭೆಯಲ್ಲಿ ಚಿಂತನೆ ನಡೆಸಲಾಯಿತು.

## ಹುಮನಾಬಾದ್‌ಗೆ ಸಚಿವ ಯತೀಂದ್ರ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ನಗರದ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಗೃಹ ಕಚೇರಿಗೆ ಸೋಮವಾರ ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ಭೇಟಿ ನೀಡಿದರು.

ಈ ವೇಳೆ ಸಚಿವ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಮಾಜಿ ಸಚಿವ ರಾಜಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್, ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಅಭಿಷೇಕ ಪಾಟೀಲ್ ಸನ್ಮಾನಿಸಿ, ಗೌರವಿಸಿದರು.

ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ವಾಡಿಕೆಗಿಂತ ಕಡಿಮೆ ಪ್ರಮಾಣದಲ್ಲಿ ಮಳೆಯಾಗಿದ್ದ ಪರಿಣಾಮ ಮುಂಗಾರು ಬಿತ್ತನೆಗೆ ಹಿನ್ನಡೆಯಾಗಿದೆ. ಪ್ರಸ್ತುತ ಸಾಲಿನಲ್ಲಿ ರೈತರು ತೀವ್ರ ಸಂಕಷ್ಟ ಎದುರಿಸುತ್ತಿದ್ದಾರೆ. ಹೀಗಾಗಿ ಬೀದರ ಜಿಲ್ಲೆ



ಬರಪೀಡಿತ ಜಿಲ್ಲೆ ಎಂದು ಘೋಷಣೆ ಮಾಡಬೇಕೆಂದು ಒತ್ತಾಸಬೇಕು ಎಂದು ಆಗ್ರಹಿಸಿದರು.

ಬೀದರ ಜಿಲ್ಲೆಯಲ್ಲಿ ಸಹಕಾರ ಸಕ್ಕರೆ ಕಾರ್ಖಾನೆ ಮುಚ್ಚಿರುವ ಕಾರಣದಿಂದಾಗಿ ಕಬ್ಬು ಬೆಳೆಗಾರರು ಹಾಗೂ ಕಾರ್ಖಾನೆ ಕಾರ್ಮಿಕರು ಅನೇಕ ಸಮಸ್ಯೆಗಳು ಎದುರಿಸುತ್ತಿದ್ದಾರೆ. ಈ ಭಾಗದ ಕಬ್ಬು ಬೆಳೆಗಾರರ ಹಾಗೂ ಕಾರ್ಖಾನೆ ಕಾರ್ಮಿಕರ ಹಿತದೃಷ್ಟಿಯಿಂದ ಶೀಘ್ರದಲ್ಲೇ ಕಾರ್ಖಾನೆ ಪುನಶ್ಚೇತನ ಮಾಡಬೇಕು. ಇದರ ಹೊರತಾಗಿ ಕಾರ್ಖಾನೆ ಲೀಜ್ ಕೊಡುವಂತೆ ಸರ್ಕಾರದ ಮೇಲೆ ಒತ್ತಡ ಹಾಕಬೇಕೆಂದು ಸಚಿವರ ಗಮನಕ್ಕೆ ತಂದರು.

# ಸಂಪುಟ ವಿಸ್ತರಣೆ ಫಿಕ್ಸ್

## ರಾಹುಲ್ ದೆಹಲಿಗೆ ಬಂದ ಬಳಿಕ ಅಂತಿಮ ತೀರ್ಮಾನ | ಮುಂಗಾರು ಅಧಿವೇಶನ 6ರಿಂದ: ಸಿಎಂ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಸಚಿವ ಸಂಪುಟ ವಿಸ್ತರಣೆಯನ್ನು ಶೀಘ್ರದಲ್ಲೇ ಮಾಡಲಾಗುವುದು ಎಂದು ಸಿಎಂ ಡಿಕೆ ಶಿವಕುಮಾರ್ ಸುಳಿವು ನೀಡಿದ್ದಾರೆ. ಮುಂಗಾರು ಅಧಿವೇಶನ 6ರಿಂದ ನಡೆಯಲಿದೆ ಎಂದ ಅವರು ಇದೇ ಸಂದರ್ಭದಲ್ಲಿ ಸುಳಿವು ನೀಡಿದ್ದಾರೆ.



**ಆಗಸ್ಟ್ 6ರಿಂದ ಅಧಿವೇಶನ:** ಸಚಿವ ಸಂಪುಟ ವಿಸ್ತರಣೆ ಯಾವಾಗ, ದೆಹಲಿಗೆ ಹೋಗುವುದು ಯಾವಾಗ ಎಂಬ ಪ್ರಶ್ನೆಗೆ, ಆಗಸ್ಟ್ 6ರಿಂದ ಅಧಿವೇಶನ ಕರೆಯಲು ತೀರ್ಮಾನಿಸಲಾಗಿದೆ. ಒಂದು ದಿನದ ಮಟ್ಟಿಗೆ ದೆಹಲಿಗೆ ಹೋಗಿ ಬರುವೆ. ಬಳಿಕ ನಮ್ಮ ನಾಯಕರು ದಿನಾಂಕ ನಿಗದಿ ಮಾಡುತ್ತಾರೆ ಎಂದಿದ್ದಾರೆ.

**ಅಂತಿಮ ತೀರ್ಮಾನ ಅವರದು:** ಸಚಿವ ಸಂಪುಟ ವಿಸ್ತರಣೆ ಹಿನ್ನೆಲೆಯಲ್ಲಿ ಡಿಕೆ ಶಿ ನೀಡಿರುವ ಹೇಳಿಕೆ ಮಹತ್ವ ಪಡೆದುಕೊಂಡಿದೆ. ದೆಹಲಿಗೆ ತೆರಳುವ ಬಗ್ಗೆಯೂ ಮಾಹಿತಿಯನ್ನು ನೀಡಿದ್ದು, ರಾಹುಲ್ ದೆಹಲಿಗೆ ಬಂದ ಬಳಿಕ ಸಚಿವ ಸಂಪುಟ ವಿಸ್ತರಣೆಯ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇದೆ.









**ರಾಗಾ ಕಡೆ ಮುಖ..!** ಲೋಕಸಭೆಯ ಪ್ರತಿ ಪಕ್ಷದ ನಾಯಕ ರಾಹುಲ್ ಗಾಂಧಿ ಸ್ವದೇಶಕ್ಕೆ ಮರಳಿದ ಬೆನ್ನಲ್ಲೇ ಸಚಿವ ಪದವಿ ಆಕಾಂಕ್ಷಿಗಳ ಚಟುವಟಿಕೆಗಳು ಗರಿಗೆದರಿವೆ. ರಾಹುಲ್ ಗಾಂಧಿ ಇಂದು ಅಥವಾ ನಾಳೆ ರಾಜ್ಯದ ನಾಯಕರನ್ನು ದೆಹಲಿಗೆ ಕರೆಸಬಹುದು ಎಂಬ ಅಂದಾಜಿನಲ್ಲಿ ರಾಜ್ಯದ ಕೆಲ ಶಾಸಕರು ದೆಹಲಿಯತ್ತ ಮುಖ ಮಾಡಿರುವುದು ಗಮನ ಸೆಳೆದಿದೆ.

**ದಿಲ್ಲಿಗೆ ಶಾಸಕರ ದೌಡು** ಕರ್ನಾಟಕ ಭವನದಲ್ಲಿ ಕೊಠಡಿಗಳಿಗೆ ಬೇಡಿಕೆ ಹೆಚ್ಚಾಗಿದೆ. ರಾಜ್ಯದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರು ಯಾವುದೇ ಕ್ಷಣದಲ್ಲಿ ದೆಹಲಿಗೆ ಭೇಟಿ ನೀಡಬಹುದಾದ ಸಾಧ್ಯತೆ ಇರುವುದರಿಂದ ಅವರನ್ನು ಭೇಟಿ ಮಾಡಲು ಹಲವು ಶಾಸಕರು ದೆಹಲಿಗೆ ತೆರಳುತ್ತಿದ್ದಾರೆ.

**20ಕ್ಕೆ 60ಕ್ಕೂ ಹೆಚ್ಚು ಬೇಡಿಕೆ** ಸಂಪುಟದಲ್ಲಿ 20 ಸ್ಥಾನಗಳು ಖಾಲಿಯಿದ್ದು, 60 ಕ್ಕೂ ಹೆಚ್ಚು ಶಾಸಕರು ಆಕಾಂಕ್ಷಿಗ:ಳು..! 20ಕ್ಕೂ ಹೆಚ್ಚು ಮಂದಿ ಹೊಸ ಶಾಸಕರು, 40ಕ್ಕೂ ಹೆಚ್ಚು ಹಿರಿಯ ಶಾಸಕರು ಹಾಗೂ 5 ವಿಧಾನಪರಿಷತ್ ಸದಸ್ಯರು ಸಂಪುಟ ಸೇರಲು ಲಾಬಿ ನಡೆಸುತ್ತಿದ್ದಾರೆ. ಮೊದಲ ಹಂತದಲ್ಲಿ ಡಾ.ಯತೀಂದ್ರ ಅವರನ್ನು ಹೊರತು ಪಡಿಸಿದರೆ, ಉಳಿದೆಲ್ಲರೂ ಮರಳಿ ಅವಕಾಶ ಪಡೆದವರೇ ಆಗಿದ್ದಾರೆ.

**ಎಲ್ಲಿದೆ ಭರವಸೆ..?** ಈ ಹಿಂದೆ ಸಿದ್ದರಾಮಯ್ಯ ಅವರ ಸಂಪುಟ ರಚನೆಯಾಗುವ ವೇಳೆ ಎರಡೂವರೆ ವರ್ಷದ ಬಳಿಕ ಹಳಬರನ್ನು ಬದಿಗಿಟ್ಟು ಹೊಸಬರಿಗೂ ಅವಕಾಶ ಕಲ್ಪಿಸುವುದಾಗಿ ಹೈಕಮಾಂಡ್ ಭರವಸೆ ನೀಡಿತ್ತು. ಆದರೆ ಕೊಟ್ಟ ಮಾತಿನಂತೆ ನಡೆದುಕೊಂಡಿಲ್ಲ, ಪಕ್ಷಕ್ಕಾಗಿ ನಿಷ್ಠೆಯಿಂದ ಕೆಲಸ ಮಾಡಿದವರು ಅಂಗಲಾಚುವ ಪರಿಸ್ಥಿತಿ ಬಂದಿದೆ ಎಂದು ಸಿಡಿಮಿಡಿ ಸಾಮಾನ್ಯವಾಗಿದೆ.

## ಸುಳ್ಳು ಹೇಳಿ ಜನರಿಗೆ ದಾರಿ ತಪ್ಪಿಸುವ ಹುನ್ನಾರ: ಸಚಿವ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ಮತಕ್ಷೇತ್ರದಲ್ಲಿ ಶಾಸಕ ಡಾ. ಸಿದ್ದಲಿಂಗಪ್ಪ ಪಾಟೀಲ್ ಜನರಿಗೆ ದಾರಿ ತಪ್ಪಿಸುವ ಹುನ್ನಾರ ನಡೆಸಿದ್ದಾರೆ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಆರೋಪಿಸಿದರು.

ನಗರದಲ್ಲಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ಸರ್ಕಾರದ ನಾನಾ ಇಲಾಖೆಗಳಿಂದ ವಿವಿಧ ಯೋಜನೆ ಅಡಿಯಲ್ಲಿ ಕಾಮಗಾರಿಗಳ ಉದ್ಘಾಟನೆ ಕಾರ್ಯಕ್ರಗಳು ಸೇರಿದಂತೆ ಕೆಡಿಪಿ ಸಭೆಯಲ್ಲಿ ಶಾಸಕರು ಸುಳ್ಳು ಹೇಳಿಕೆಗಳನ್ನು ನೀಡಿ ಕ್ಷೇತ್ರದ ಜನರನ್ನು ದಾರಿ ತಪ್ಪಿಸುವ ಮೂಲಕ ಸುವ್ಯವಸ್ಥಿತ ರಾಜಕಾರಣ ಮಾಡುತ್ತಿದ್ದಾರೆ ಎದು ಕಿಡಿಕಾರಿದರು.

ಹುಮನಾಬಾದ್ ಕ್ಷೇತ್ರದಿಂದ ನಾಲ್ಕು ಬಾರಿ ಶಾಸಕನಾಗಿ ಆಯ್ಕೆಯಾದ ನಾನು ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಅನೇಕ ಯೋಜನೆಗಳನ್ನು ಅನುಷ್ಠಾನ ಮಾಡುವ ಮೂಲಕ ಜನರ ಕಲ್ಯಾಣಕ್ಕೆ ಶ್ರಮ ವಹಿಸಿದ್ದೇನೆ. ವಿರೋಧ ಪಕ್ಷದಲ್ಲಿ ಇದ್ದರು ಸಹಃ ಆಡಳಿತ ಬಿಜೆಪಿ ಸರಕಾರದ ಮೇಲೆ ಒತ್ತಡ ಹಾಕುವ ಮೂಲಕ ಬಿ.ಎಸ್.



ಎಸ್.ಕೆ. ಪುನಶ್ಚೇತನಗೊಳಿಸುವ ಕಾರ್ಯ ಮಾಡಲಾಗಿತ್ತು.

ಆದರೆ ಈಗಿನ ಶಾಸಕರು ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಆಡಳಿತದಲ್ಲಿದೆ ಹೆಚ್ಚಿನ ಅನುದಾನ ಬರುತ್ತಿಲ್ಲ ಎಂದು ಒಂದು ಕಡೆ ಹೇಳುತ್ತಿದ್ದಾರೆ. ಮತ್ತೊಂದು ಕಡೆ ನಾನು ಶಾಸಕನಾದ ಮೇಲೆ ಹುಮನಾಬಾದ್ ಕ್ಷೇತ್ರ ಅಭಿವೃದ್ಧಿ ಹೊಂದುತ್ತಿದೆ ಎಂದು ಹೇಳುತ್ತಿದ್ದಾರೆ. ಅಂದ ಮೇಲೆ ಅನುದಾನ ಸರಕಾರ ಸರಿಯಾಗಿ ಅನುದಾನ ನೀಡಿಲ್ಲ, ಅಂದ ಮೇಲೆ ಕ್ಷೇತ್ರ ಹೇಗೆ ಅಭಿವೃದ್ಧಿಯಾಯಿತು ಎಂದು ಪ್ರಶ್ನಿದರು.

ಕ್ಷೇತ್ರದ ಜನರು ಜಾಗೃತರಾಗಬೇಕು. ಸರಕಾರದ ಯಾವ ಯೋಜನೆಯಲ್ಲಿ ಎಷ್ಟು ಅನುದಾನ ಬಂದು ಯಾವ ಕಾಮಗಾರಿ ಪ್ರಗತಿಯಲ್ಲಿದೆ. ಎಲ್ಲಿ ಅವ್ಯವಹಾರ ನಡೆಯುತ್ತಿದೆ ಎನ್ನುವ ವಿಚಾರ ಎಲ್ಲರೂ ಗಮನಿಸಬೇಕು ಎಂದರು.

# ಶೌಚಾಲಯಕ್ಕಾಗಿ ತಬರನ ಕತೆಯಾದ ವೃದ್ಧರು..!


• ಎಂ. ಜಂಬುನಾಥ, ಜಿಲ್ಲಾ ವರದಿಗಾರ ಬಳ್ಳಾರಿ


ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಡಬೇಕೆಂದು ಹಲವು ವರ್ಷಗಳಿಂದ ಮನವಿ ಸಲ್ಲಿಸುತ್ತಿದ್ದರೂ ಯಾವುದೇ ಪ್ರಯೋಜನವಾಗದ ವಿಚಿತ್ರ ಘಟನೆ ಇದಾಗಿದೆ. ಬಳ್ಳಾರಿ ನಗರದ ಬಂಡಿಹಟ್ಟಿಯ ಬೊವಿ ಸಮಾಜದ ವೃದ್ಧ ದಂಪತಿಗಳು ಈ ಕುರಿತು ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ತಮ್ಮ ಅಳಲನ್ನು ವ್ಯಕ್ತಪಡಿಸಿದ್ದಾರೆ. ಬಂಡಿಹಟ್ಟಿಯ ನಿವಾಸಿಗಳಾದ ಕೆ.ಮಂಜುನಾಥಪ್ಪ ಮತ್ತು ಅವರ ಪತ್ನಿ ನಾಗವೇಣಿ, ಸ್ವಚ್ಛ ಭಾರತ್ ಮೀಷನ್ ಯೋಜನೆಯಡಿಯಲ್ಲಿ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಅವಕಾಶ ಕಲ್ಪಿಸುವಂತೆ 2013ರಿಂದಲೇ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದೇವೆ ಆದರೂ ಪ್ರಯೋಜನ ಇಲ್ಲ ಎಂದು ಅಲವತ್ತುಕೊಳ್ಳುತ್ತಿದ್ದಾರೆ.


**ವೈಯಕ್ತಿಕ ಶೌಚಾಲಯಕ್ಕಾಗಿ ದಂಪತಿಯ ಪರದಾಟ**

**ಜನತಾದರ್ಶನದಲ್ಲೂ ಅರ್ಜಿ:** 5/1/2024ರಲ್ಲಿ ನಗರದ ಹೊಸ ಜಿಲ್ಲಾಧಿಕಾರಿಗಳ ಕಚೇರಿ ಅವರರಣದಲ್ಲಿ ಜನತಾದರ್ಶನ ಕಾರ್ಯಕ್ರಮದಲ್ಲಿ ಸಹ ಅರ್ಜಿಯನ್ನು ಕೊಟ್ಟಿದ್ದೇವೆ ಆದರೆ ಉಪಯೋಗ ಇಲ್ಲ. ಆಗಿನ ಬಳ್ಳಾರಿ ಗ್ರಾಮಾಂತರ ಶಾಸಕ ಬಿ. ನಾಗೇಂದ್ರ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಹಾಗೂ ಬಳ್ಳಾರಿ ಮಹಾನಗರ ಪಾಲಿಕೆ ಅಧಿಕಾರಿಗಳಿಗೆ ಅನೇಕ ಬಾರಿ ಅರ್ಜಿ ಸಲ್ಲಿಸಿದ್ದರೂ ಕ್ರಮ ಕೈಗೊಳ್ಳಲಾಗಿಲ್ಲ ಎನ್ನುವುದು ಅವರ ಆರೋಪ.

**ನಮಗೆ ಆರ್ಥಿಕ ನೆರವು ಬೇಡ:** ವೃದ್ಧ ದಂಪತಿಯ ಮಾತಿನ ಪ್ರಕಾರ, "ನಮಗೆ ಸರ್ಕಾರದಿಂದ ಬೇರೆ ಯಾವುದೇ ಸೌಲಭ್ಯ ಅಥವಾ ಆರ್ಥಿಕ ನೆರವು ಬೇಡ. ವಯಸ್ಸಿನ ಈ ಹಂತದಲ್ಲಿ ಅತ್ಯಗತ್ಯವಾಗಿರುವ ವೈಯಕ್ತಿಕ ಶೌಚಾಲಯ ನಿರ್ಮಿಸಿಕೊಟ್ಟರೆ ಸಾಕು ಎಂದು ಮನವಿ ಮಾಡಿದ್ದಾರೆ.







### ಸಿಇಒ ಶಿಫಾರಸಿಗೂ ಕಿಮ್ಮತ್ತಿಲ್ಲ..!

ಹಲವು ವರ್ಷಗಳಿಂದ ಕಚೇರಿಯಿಂದ ಕಚೇರಿಗೆ ಅಲೆದಾಡುತ್ತಿದ್ದರೂ ಸಮಸ್ಯೆ ಮಾತ್ರ ಹಾಗೆಯೇ ಉಳಿದಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಸಿಇಒ ಸಂಬಂಧಪಟ್ಟ ಇಲಾಖೆಗೆ ವೃದ್ಧ ದಂಪತಿಗೆ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಅಗತ್ಯ ಕ್ರಮ ಕೈಗೊಳ್ಳುವಂತೆ ಶಿಫಾರಸು ಪತ್ರ ನೀಡಿದ್ದರೂ, ಸಂಬಂಧಿಸಿದ ಅಧಿಕಾರಿಗಳು ಇದುವರೆಗೂ ಯಾವುದೇ ಸ್ಪಂದನೆ ನೀಡಿಲ್ಲ ಎಂದು ದಂಪತಿ ಆರೋಪಿಸಿದ್ದಾರೆ.



**ಪಂಚಾಯಿತಿ ಫಜೀತಿ**

### ಅಧಿಕಾರಿಗಳ ನಿರ್ಲಕ್ಷ್ಯ: ಆರೋಪ

ಸ್ವಾತಂತ್ರ್ಯ ಬಂದು ಇಷ್ಟು ವರ್ಷ ಕಳೆದರೂ ನಾಗರಿಕರ ಸಮಸ್ಯೆಗಳು ಹಾಗೆ ಉಳಿದಿವೆ. ಈ ವಯೋವೃದ್ಧರ ಸಮಸ್ಯೆಯನ್ನು ಆದ್ಯತೆಯಾಗಿ ಪರಿಗಣಿಸಿ ಶೀಘ್ರದಲ್ಲೇ ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಅನುಮೋದನೆ ನೀಡಬೇಕು ಹಾಗೂ ಅಧಿಕಾರಿಗಳ ನಿರ್ಲಕ್ಷ್ಯದ ಬಗ್ಗೆ ಜಿಲ್ಲಾಡಳಿತ ಪರಿಶೀಲನೆ ನಡೆಸಬೇಕು. ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

## 2004ರಲ್ಲಿ ನಾನು ಮುಖ್ಯಮಂತ್ರಿಯಾಗಬೇಕೆಂದು ಎಂ.ಪಿ ಪ್ರಕಾಶ್ ನನ್ನ ಹೆಸರನ್ನು ಸೂಚಿಸಿದ್ದರು: ಸಿದ್ದರಾಮಯ್ಯ

# ಎಸ್‌ಐಆರ್ ಬಗ್ಗೆ ಜನ ಜಾಗೃತರಾಗಲಿ–ಅರ್ಜಿ ಭರ್ತಿ ಮಾಡಿ ಮತದಾನದ ಹಕ್ಕು ಕಾಪಾಡಿಕೊಳ್ಳಿ

ಪ್ರಜಾಪ್ರಭುತ್ವದಲ್ಲಿ ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಅಮೂಲ್ಯ ಹಕ್ಕು. ಈ ಹಕ್ಕಿನ ರಕ್ಷಣೆಗಾಗಿ ಮತದಾರರ ಪಟ್ಟಿಯನ್ನು ನಿಖರವಾಗಿ ನಿರ್ವಹಿಸುವ ಪ್ರಕ್ರಿಯೆಗಳು ಮಹತ್ವದ್ದಾಗಿವೆ. ಎಸ್‌ಐಆರ್ (Special Intensive Revision) ಪ್ರಕ್ರಿಯೆಯ ಉದ್ದೇಶವೂ ಮತದಾರರ ಪಟ್ಟಿಯನ್ನು ಪರಿಶುದ್ಧ ಹಾಗೂ ನವೀಕೃತವಾಗಿಡುವುದಾಗಿದೆ.

## ಸಂಪಾದಕೀಯ

**ಮಾಣಿಕರೆಡ್ಡಿ ಕೌಡಾಳೆ**
**ಪ್ರಧಾನ ಸಂಪಾದಕರು**
**ಮೊ: 9845028349**



ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಎಸ್‌ಐಆರ್ ಬಗ್ಗೆ ಸಂಪೂರ್ಣ ಅರಿವು ಹೊಂದಬೇಕು. ಅಗತ್ಯವಿದ್ದಲ್ಲಿ ಚುನಾವಣಾ ಅಧಿಕಾರಿಗಳ ಮಾರ್ಗದರ್ಶನದಂತೆ ಅರ್ಜಿಗಳನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳನ್ನು ಸಮಯಕ್ಕೆ ಸರಿಯಾಗಿ ಸಲ್ಲಿಸಬೇಕು. ಅಜ್ಞಾನ, ನಿರ್ಲಕ್ಷ್ಯ ಅಥವಾ ವದಂತಿಗಳ ಆಧಾರದ ಮೇಲೆ ನಿರ್ಧಾರ ಕೈಗೊಳ್ಳುವುದರಿಂದ ತಮ್ಮ ಮತದಾನದ ಹಕ್ಕಿಗೆ ತೊಂದರೆ ಉಂಟಾಗುವ ಸಾಧ್ಯತೆಯನ್ನು ನಿರ್ಲಕ್ಷಿಸಬಾರದು.

ಇದೇ ವೇಳೆ, ಎಸ್‌ಐಆರ್ ಪ್ರಕ್ರಿಯೆ ಪಾರದರ್ಶಕವಾಗಿ, ನ್ಯಾಯಸಮ್ಮತವಾಗಿ ಹಾಗೂ ಯಾವುದೇ ಅರ್ಹ ಮತದಾರರಿಗೆ ಅನ್ಯಾಯವಾಗದಂತೆ ನಡೆಯುವುದು ಚುನಾವಣಾ ಅಧಿಕಾರಿಗಳ ಜವಾಬ್ದಾರಿಯಾಗಿದೆ. ಜನರಲ್ಲಿ ಗೊಂದಲ ಉಂಟಾಗದಂತೆ ವ್ಯಾಪಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಮತ್ತು ಅರ್ಜಿ ಸಲ್ಲಿಕೆಗೆ ಅಗತ್ಯ ನೆರವು ಒದಗಿಸಬೇಕು.

ಪ್ರಜಾಪ್ರಭುತ್ವದ ಶಕ್ತಿ ಜಾಗೃತ ಮತದಾರರಲ್ಲಿ ಅಡಗಿದೆ. ಆದ್ದರಿಂದ ಪ್ರತಿಯೊಬ್ಬ ನಾಗರಿಕರು ಎಸ್‌ಐಆರ್ ಕುರಿತು ಮಾಹಿತಿ ಪಡೆದು, ಅಗತ್ಯವಿದ್ದರೆ ಅರ್ಜಿ ಭರ್ತಿ ಮಾಡಿ ತಮ್ಮ ಮತದಾನದ ಹಕ್ಕನ್ನು ಕಾಪಾಡಿಕೊಳ್ಳಬೇಕು. ಜಾಗೃತ ಸಮಾಜವೇ ಬಲಿಷ್ಠ ಪ್ರಜಾಪ್ರಭುತ್ವದ ಭದ್ರ ಬುನಾದಿಯಾಗಿದೆ.

# ಪ್ರತಿಕಾ ದಿನಾಚರಣೆಗೆ ಸ್ವಾಗತ ಸಮಿತಿ ರಚನೆ

**ಬೀದರ್:** ಜಿಲ್ಲೆಯ ರಾಜ್ಯಮಟ್ಟದ ಪತ್ರಿಕೆ, ಪ್ರಾದೇಶಿಕ ಪತ್ರಿಕೆ, ಜಿಲ್ಲಾ ಮಟ್ಟದ ಪತ್ರಿಕೆ, ಎಲೆಕ್ಟ್ರಾನಿಕ ಮಾಧ್ಯಮ, ಛಾಯಾಗ್ರಾಹಕರ, ಒಳಗೊಂಡು 2026ರ ಪತ್ರಿಕಾ ದಿನಾಚರಣೆಯನ್ನು ಅದ್ದೂರಿಯಿಂದ ಆಚರಿಸಲು ತೀರ್ಮಾನಿಸಿ, ಈ ಕೆಳಕಂಡ ಸ್ವಾಗತ ಸಮಿತಿ ರಚಿಸಲಾಗಿದೆ.



ಅಧ್ಯಕ್ಷರಾಗಿ: ಶಿವಶರಣಪ್ಪ ವಾಲಿ– ಉತ್ತರ ಕರ್ನಾಟಕ ಪತ್ರಿಕೆ

ಕಾರ್ಯಾಧ್ಯಕ್ಷ: ಬಾಬು ವಾಲಿ– ಅಧ್ಯಕ್ಷರು ಪ್ರಾದೇಶಿಕ ಪತ್ರಿಕೆಗಳ ಸಂಪಾದಕರ ಸಂಘ, ವಿಜಯಕುಮಾರ್ ಪಾಟೀಲ– ಅಧ್ಯಕ್ಷರು ಕಾರ್ಯನಿರತ ಪತ್ರಕರ್ತರ ಸಂಪಾದಕರ ಸಂಘ, ಸುರೇಶ್ ನಾಯಕ– ಅಧ್ಯಕ್ಷರು ಎಲೆಕ್ಟ್ರಾನಿಕ್ ಮಾಧ್ಯಮ ಸಂಘ.

ಉಪಾಧ್ಯಕ್ಷರು: ದೀಪಕ್ ವಾಲಿ – ಬೀದರ್ ಜಂಗ್ ಪತ್ರಿಕೆ
ಮಲ್ಲಿಕಾರ್ಜುನ್ ಬಿರಾದರ್– ಪರಿಹಾರ ಪತ್ರಿಕೆ
ಸದಾನಂದ ಜೋಶಿ – ಸಂಯುಕ್ತ ಕರ್ನಾಟಕ ಪತ್ರಿಕೆ
ಭೀಮರಾವ ಬುರಾನಪುರೆ – ವಿಜಯ ಕರ್ನಾಟಕ ಪತ್ರಿಕೆ
ಸಿದ್ದು ಪಾಟೀಲ್– ವಿಜಯವಾಣಿ ಪತ್ರಿಕೆ
ಶಶಿಕಾಂತ ಬೊಂಬಳಗಿ – ಉದಯವಾಣಿ ಪತ್ರಿಕೆ
ಮಲ್ಲಿಕಾರ್ಜುನ್ ಮರ್ಕಲೆ – ಆರ್ ಕನ್ನಡ ನ್ಯೂಸ್
ದುರ್ಗಪ್ಪ ಹೊಸಮನಿ – ನ್ಯೂಸ್ 18 ಕನ್ನಡ
ರಾಜಕುಮಾರ ಸ್ವಾಮಿ – ಪವರ್ ಟಿ.ವಿ.
ವಿಶ್ವ ವಡಗಾಂವ – ಪಿ.ಟಿ.ಐ ನ್ಯೂಸ್
ಸೈಯದ್ ಹುಸೇನ್ ಖಾದ್ರಿ – ಅದಬೀ ಅಕ್ಕಾಸ್ ಪತ್ರಿಕೆ
ಅಲಿಬಾಬಾ – ಬೀದರ ಕೀ ಆವಾಜ್ ಪತ್ರಿಕೆ
ಅಬ್ದುಲ್ ಅಲಿ – ಹೈದ್ರಾಬಾದ ಕರ್ನಾಟಕ ಪತ್ರಿಕೆ
ಮಾಳಪ್ಪ ಅಡಸಾರೆ – ಸಂಜೆ ಅಂತರಂಗ ಸುದ್ದಿ ಪತ್ರಿಕೆ
ಗಣಪತಿ ಡಿಕೆ – ಬೀದರ ರಹಸ್ಯ ಪತ್ರಿಕೆ
ಶಶಿಕುಮಾರ ಪಾಟೀಲ– ಯುವರಂಗ ಪತ್ರಿಕೆ
ಶ್ರೀನಿವಾಸ ಚೌಧರಿ – ಬೀದರ ಜಾಗೃತಿ ಪತ್ರಿಕೆ
ಅಜಯ ಭೋಸ್ಲೆ – ಕಾರಾಂಜಾ ಎಕ್ಸ್‌ಪ್ರೆಸ್ ಪತ್ರಿಕೆ
ಚಂದ್ರಕಾಂತ್ ಪಾಟೀಲ್ – ದೃಷ್ಟಿ ಪತ್ರಿಕೆ
ಶಶಿಕಾಂತ್ ದೀಕ್ಷಿತ – ಬೀದರ ಸಂದೇಶ ಪತ್ರಿಕೆ
ಅಬ್ದುಲ ಖದಿರ – ಪಬ್ಲಿಕ್ ಕಾನ್ಫರೆನ್ಸ್ ಪತ್ರಿಕೆ
ರಾಮಚಂದ್ರ ಬೋಸ್ಲೆ – ಮಹಾಕಾಯಾಸ ಪತ್ರಿಕೆ
ರಮೇಶ ರೆಡ್ಡಿ – ಮಲ್ಲಮ್ಮ ನುಡಿ ಪತ್ರಿಕೆ
ಪ್ರಧಾನ ಕಾರ್ಯದರ್ಶಿ: ಸಿದ್ದರಾಮಯ್ಯ ಸ್ವಾಮಿ – ದಮನ್ ಪತ್ರಿಕೆ
ಕಾರ್ಯದರ್ಶಿಗಳು : ವಿರುಪಾಕ್ಷ ಗಾದಗಿ – ಬಸವ ದನಿ ಪತ್ರಿಕೆ
ಜಾರ್ಜ್ ಫರ್ನಾಂಡಿಸ್ – ಬೀದರ್ ಟೈಮ್ಸ್ ಪತ್ರಿಕೆ
ಜಗನ್ನಾಥ್ ಜೀರಿಗೆ – ಬೀದರ್ ಹುಲಿ
ವಿಜಯ ಕುಮಾರ ಸೋನಾರೆ – ಸುನಾರೆ ಎಕ್ಸ್‌ಪ್ರೆಸ್ ಪತ್ರಿಕೆ
ಬಸವರಾಜ್ ಪವಾರ್ – ಬಂಜಾರ ಗರ್ಜನೆ
ರಾಜು ಕಡಿಯಾಳ – ಓ ದಯಾಸಾಗರ್ ಪತ್ರಿಕೆ
ಎಂ ಪಿ ಮುಧಾಳೆ – ಬೀದರ್ ಮಿರರ್
ನಂದಕುಮಾರ ಕರಂಜಿ – ಹಾಯ್ ಬೀದರ್ ಪತ್ರಿಕೆ
ಪ್ರದೀಪ ಬಿರಾದರ್– ದೂರ ದೃಷ್ಟಿ
ಶರದ ಘಂಟೆ – ಕಲಿಯುಗದ ಕೂಗು ಪತ್ರಿಕೆ
ಅನಿಲಕುಮಾರ ಕಮ್ ಠಾಣೆ– ಬೀದರ್ ಕೋಟೆ ಪತ್ರಿಕೆ
ವಿಜಯ ಕುಮಾರ ಅಷ್ಟೂರೆ – ಕೌಲ್ವರಿ ಎಕ್ಸ್‌ಪ್ರೆಸ್ ಪತ್ರಿಕೆ
ದೇವಿಂದ್ರ ಸೋನಿ – ಕರ್ನಾಟಕ ಸೇವಾ ಪತ್ರಿಕೆ

ಇವರೆಲ್ಲರನ್ನು ಪತ್ರಿಕಾ ದಿನಾಚರಣೆ ಸ್ವಾಗತ್ ಸಮಿತಿಯ ಪದಾಧಿಕಾರಿಗಳಾಗಿ ಆಯ್ಕೆ ಮಾಡಲಾಗಿದೆ ಎಂದು ಸ್ವಾಗತ್ ಸಮಿತಿಯ ಕಾರ್ಯಾಧ್ಯಕ್ಷ ವಿಜಯಕುಮಾರ್ ಪಾಟೀಲ – ಅಧ್ಯಕ್ಷರು ಕಾರ್ಯನಿರತ ಪತ್ರಕರ್ತರ ಸಂಪಾದಕರ ಸಂಘ ಮತ್ತು ಪ್ರಧಾನ ಕಾರ್ಯದರ್ಶಿ, ಸಿದ್ದರಾಮಯ್ಯ ಸ್ವಾಮಿ ರವರು ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

# ₹1.80 ಕೋಟಿ ವೆಚ್ಚದ ಸೇತುವೆ ಹಾಗೂ ರಸ್ತೆ ಕಾಮಗಾರಿಗೆ ಶಾಸಕ: ಡಾ. ಶೈಲೇಂದ್ರ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತೊಂದು ಮಹತ್ವದ ಹೆಜ್ಜೆಯಾಗಿ, ಅಷ್ಟೂರದಿಂದ ಮಲ್ಕಾಪುರ (ವಾಯಾ ದೇವದೇವ ವನ) ಮಾರ್ಗದಲ್ಲಿ ₹1 ಕೋಟಿ ವೆಚ್ಚದ ಸೇತುವೆ ನಿರ್ಮಾಣ ಹಾಗೂ ₹80 ಲಕ್ಷ ವೆಚ್ಚದ ರಸ್ತೆ ಡಾಂಬರೀಕರಣ ಸೇರಿದಂತೆ ಒಟ್ಟು ₹1.80 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಬೀದರ್ ದಕ್ಷಿಣ ಕ್ಷೇತ್ರದ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಭೂಮಿಪೂಜೆ ನೆರವೇರಿಸಿ ಚಾಲನೆ ನೀಡಿದರು.



ಈ ಕಾಮಗಾರಿಯಿಂದ ಕೃಷಿ ಉತ್ಪನ್ನಗಳ ಸಾಗಣೆ ಇನ್ನಷ್ಟು ವೇಗವಾಗಲಿದ್ದು, ತುರ್ತು ಆರೋಗ್ಯ ಸೇವೆಗಳಿಗಾಗಿ ಆಂಬುಲೆನ್ಸ್ ಸಂಚಾರ ಸುಲಭವಾಗಲಿದೆ. ಶಾಲಾ–ಕಾಲೇಜು ವಿದ್ಯಾರ್ಥಿಗಳು, ಉದ್ಯೋಗಸ್ಥರು ಹಾಗೂ ವ್ಯಾಪಾರಸ್ಥರಿಗೆ ಸಮಯ ಉಳಿತಾಯವಾಗುವುದರ ಜೊತೆಗೆ ಗ್ರಾಮೀಣ ಆರ್ಥಿಕ ಚಟುವಟಿಕೆಗಳಿಗೂ ಹೊಸ ಚೈತನ್ಯ ದೊರೆಯಲಿದೆ ಎಂದು ತಿಳಿಸಿದರು.

ಬೀದರ್ ದಕ್ಷಿಣ ಕ್ಷೇತ್ರದಲ್ಲಿ ರಸ್ತೆ, ಸೇತುವೆ, ಕುಡಿಯುವ ನೀರು, ಶಿಕ್ಷಣ, ಆರೋಗ್ಯ, ಚರಂಡಿ ಸೇರಿದಂತೆ ವಿವಿಧ ಮೂಲಸೌಕರ್ಯ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ಅನುಷ್ಠಾನಗೊಳಿಸಲಾಗುತ್ತಿದೆ. ಸರ್ಕಾರದಿಂದ ದೊರೆಯುವ ಅನುದಾನವನ್ನು ಸಮರ್ಪಕವಾಗಿ ಬಳಸಿಕೊಂಡು ಜನರ ಬಹುಕಾಲದ ಬೇಡಿಕೆಗಳನ್ನು ಈಡೇರಿಸುವ ಕಾರ್ಯ ನಿರಂತರವಾಗಿ ನಡೆ–ಯುತ್ತಿದೆ ಎಂದು ಅವರು ಹೇಳಿದರು.

ಅಭಿವೃದ್ಧಿ ಕಾಮಗಾರಿಗಳ ಗುಣಮಟ್ಟದಲ್ಲಿ ಯಾವುದೇ ರೀತಿಯ ರಾಜಿ ಮಾಡುವುದಿಲ್ಲ. ಸಾರ್ವಜನಿಕರ ಪ್ರತಿಯೊಂದು ಕಾಮಗಾರಿಯೂ ತಾಂತ್ರಿಕ ಮಾನದಂಡಗಳಿಗೆ ಅನುಗುಣವಾಗಿ ಅತ್ಯುತ್ತಮ ಗುಣಮಟ್ಟದಲ್ಲಿ ಪೂರ್ಣಗೊಳ್ಳಬೇಕು. ನಿಗದಿತ ಅವಧಿಯೊಳಗೆ ಕಾಮಗಾರಿ ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಕಾಮಗಾರಿಯ ಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸಿ ಗುಣಮಟ್ಟವನ್ನು ಖಚಿತಪಡಿಸಿಕೊಳ್ಳಲಾಗುವುದು ಎಂದು ಶಾಸಕರು ಸ್ಪಷ್ಟಪಡಿಸಿದರು.

ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಬಾಬುರಾವ ಮಲ್ಕಾಪುರ ಮಾತನಾಡಿ, ಅಷ್ಟೂರ–ಮಲ್ಕಾಪುರ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ದೊರೆತಿರುವುದು ಈ ಭಾಗದ ಜನರ ಬಹುಕಾಲದ ಕನಸು ನನಸಾದಂತಾಗಿದೆ. ಹಲವು ವರ್ಷಗಳಿಂದ ಎದುರಿಸುತ್ತಿದ್ದ ಸಂಚಾರದ ಸಮಸ್ಯೆಗೆ ಶಾಶ್ವತ ಪರಿಹಾರ ಸಿಗುತ್ತಿರುವುದು ಸಂತಸದ ಸಂಗತಿಯಾಗಿದೆ. ಈ ಅಭಿವೃದ್ಧಿ ಕಾಮಗಾರಿಯನ್ನು ಸ್ವಾಗತಿಸುತ್ತೇವೆ," ಎಂದು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರಾದ ಬಾಬುರಾವ ಮಲ್ಕಾಪುರ, ಮುಖಂಡರಾದ ನಾಗಶೆಟ್ಟಿ, ಶಿವರಾಜ ಬುಧೇರಾ, ಸಂಜುಕುಮಾರ ಭಂಡೆ, ಶಾಮರಾವ್ ಮಲ್ಕಾಪುರ, ಅನೀಲ ತಿಪರ್ಗಿ, ಸಂತೋಷ ಶರಣಗೊಂಡ, ಗುಂಡಪ್ಪ ಶರಣಗೊಂಡ, ಕಲ್ಲಪ್ಪ ಕೇರಿ, ಬಾಬು ಬರಿದಾಬುರ, ಕುಪೇಂದ್ರ ಸುಲ್ತಾನಪುರ, ಬಸು ಹೇಡೆ, ಶಿವಕುಮಾರ ಅಷ್ಟೂರ, ರಾಜಕುಮಾರ ಪಾಟೀಲ್, ಸುಧಾಕರ, ನಾಗಮ್ಮ ಮಲ್ಕಾಪುರ ಮತ್ತಿತರರು ಉಪಸ್ಥಿತರಿದ್ದರು.

> ಅಷ್ಟೂರ–ಮಲ್ಕಾಪುರ ರಸ್ತೆ ಸುತ್ತಮುತ್ತಲಿನ ಹಲವು ಗ್ರಾಮಗಳ ಜನರು ಪ್ರತಿದಿನ ಸಂಚಾರಕ್ಕಾಗಿ ಬಳಸುವ ಪ್ರಮುಖ ಸಂಪರ್ಕ ಮಾರ್ಗವಾಗಿದೆ. ರಸ್ತೆ ಹದಗೆಟ್ಟಿರುವುದು ಹಾಗೂ ಸೇತುವೆಯ ಕೊರತೆಯಿಂದ ವಿಶೇಷವಾಗಿ ಮಳೆಗಾಲದಲ್ಲಿ ಸಾರ್ವಜನಿಕರು, ರೈತರು, ವಿದ್ಯಾರ್ಥಿಗಳು ಹಾಗೂ ವಾಹನ ಸವಾರರು ತೀವ್ರ ತೊಂದರೆ ಅನುಭವಿಸುತ್ತಿದ್ದರು. ಇದೀಗ ನಿರ್ಮಾಣವಾಗಲಿರುವ ಹೊಸ ಸೇತುವೆ ಮತ್ತು ಗುಣಮಟ್ಟದ ಡಾಂಬರ ರಸ್ತೆಯಿಂದ ಈ ಸಮಸ್ಯೆಗೆ ಶಾಶ್ವತ ಪರಿಹಾರ ದೊರೆಯಲಿದ್ದು, ವರ್ಷಪೂರ್ತಿ ಸುರಕ್ಷಿತ ಹಾಗೂ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲಿದೆ
> –ಡಾ.ಶೈಲೇಂದ್ರ ಬೆಲ್ದಾಳೆ
> ಬೀದರ್ ದಕ್ಷಿಣ ಕ್ಷೇತ್ರದ ಶಾಸಕ

# ಏಳು ವರ್ಷಗಳಲ್ಲಿ 3000 ಉಚಿತ ಹೆಲ್ಮೆಟ್ ವಿತರಣೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಗ್ರಾಮೀಣ ಭಾಗದಲ್ಲಿನ ವಾಹನ ಚಾಲಕರಿರು ಸಂಚಾರ ನಿಯಮಗಳ ಅರಿವು ಹೊಂದಿರದ ಕಾರಣ ಅಪಘಾತಗಳು ನಡೆಯುತ್ತಿದೆ. ಹಲವಾರು ಜನ ಪ್ರತಿ ವರ್ಷ ಸಾಯುತ್ತಿದ್ದಾರೆ. ಇದನ್ನು ಕಂಡು ಚಿಟಗುಪ್ಪ ತಾಲೂಕಿನ ಮನ್ನಾಎಖ್ಖೆಳ್ಳಿ ಪಟ್ಟಣದ ಗುರುಬಸವ ಮೋಟರ್ಸ್‌ನವರು ಬೈಕ್ ಖರೀದಿಸುವ ಪ್ರತಿಯೊಬ್ಬರಿಗೆ ಉಚಿತವಾಗಿ ಹೆಲ್ಮೆಟ ವಿತರಿಸುತ್ತಿದ್ದಾರೆ. 2019ರಿಂದ ಇಲ್ಲಿಯವರೆಗೆ 07 ವರ್ಷಗಳಲ್ಲಿ ಒಟ್ಟಾರೆ 3000 ಬೈಕ ಮಾರಾಟ ಮಾಡಿರುವ ಅವರು, ಎಲ್ಲ ಬೈಕ ಖರೀದಿದಾರರಿಗೆ ತಲಾ ಒಂದೊಂದು ಸೇರಿದಂತೆ 3000 ಉಚಿತ ಹೆಲ್ಮೆಟಗಳನ್ನು ವಿತರಣೆ ಮಾಡಿರುವುದಾಗಿ ತಿಳಿಸಿದ್ದಾರೆ.

ಉಚಿತ ಹೆಲ್ಮೆಟ ನೀಡಿರುವ ಪ್ರಯುಕ್ತ ಈ ವರೆಗೆ ಹಲವರ ಜೀವ ಉಳಿದಿದೆ ಎಂದು ಬೈಕ ಖರೀದಿಸಿರುವ ಹಲವು ಗ್ರಾಹಕರು ತಿಳಿಸಿದ್ದಾರೆ. ಗ್ರಾಹಕರ ಜೀವ ಉಳಿಸಿರುವ ಖುಷಿ ನಮಗೂ ಇದೆ ಎಂದು ಮಾಲೀಕರಾದ ಕುಪೇಂದ್ರ ವಿ ನಿಡಗುಂದೆ ಮರಕುಂದಾ ಹೇಳಿದ್ದಾರೆ.





ಅಲ್ಲದೆ ಮನ್ನಾಎಖ್ಖೆಳ್ಳಿಯ ಗುರುಬಸವ ಮೋಟರ್ಸ ನಲ್ಲಿ ಜುಲೈ 11 ರಂದು ಹಿರೊ ಕಂಪೆನಿಯ ಬೈಕ ಖರೀದಿಸಿರುವ ಗ್ರಾಹಕರನ್ನು ಆಹ್ವಾನಿಸಿ ಮೈಲೇಜ ಪರಿಶೀಲನೆ ಮಾಡಲಾಗಿದೆ. ಬೈಕ ಅನ್ನು ಅತ್ಯಂತ ಜವಾಬ್ದಾರಿಯುತವಾಗಿ ಚಲಾಯಿಸಿ, ಉತ್ತಮ ಮೈಲೇಜ ಹೊಂದಿರುವ ಗ್ರಾಹಕರಿಗೆ ಬಹುಮಾನ ನೀಡಲಾಯಿತು. ಮೊದಲ ಬಹುಮಾನವನ್ನು ಬೀದರ ತಾಲೂಕಿನ ಬಗದಲ ತಾಂಡಾದ ಗಂಗಾಧರ ಅವರಿಗೆ ನೀಡಿದರು. ಎರಡನೇ ಬಹುಮಾನ ಮನ್ನಾಎಖ್ಖೆಳ್ಳಿಯ ಎಕಲಾರದೇವಿ ಚಂದ್ರಶೇಖರ ಅವರಿಗೆ ನೀಡಲಾಯಿತು. ಇದೇ ರೀತಿ ಮೈಲೇಜ ಕಾಪಾಡಿಕೊಳ್ಳುವಂತೆ ಅವರಿಗೆ ತಿಳಿಸಲಾಯಿತು.

ಕಾರ್ಯಕ್ರಮದಲ್ಲಿ ಮಾರ್ಕೆಟಿಂಗ ಮ್ಯಾನೇಜರ ಮನೋಜ ಆಳಂದಕರ. ಬೀದರ ಕೈಲಾಶ ಶೋರೂಮ ಮ್ಯಾನೇಜರ ವೈಜನಾಥ ರತ್ನಾಪುರೆ. ಗುರುಬಸವ ಮೋಟರ್ಸ ಮಾಲೀಕರು ಮನ್ನಾಎಖ್ಖೆಳ್ಳಿ ಕುಪೇಂದ್ರ ವಿ ನಿಡಗುಂದೆ ಮರಕುಂದಾ ಮತ್ತು ಸಿಬ್ಬಂದಿ, ಗ್ರಾಹಕರು ಈ ವೇಳೆ ಹಾಜರಿದ್ದರು.

> ನಮ್ಮ ಬಳಿ ಬೈಕ ಖರೀದಿರುವ ಗ್ರಾಹಕರಿಗೆ ಮೋಟರ್ಸವತಿಯಿಂದ ಉಚಿತ ಹೆಲ್ಮೆಟ ನೀಡುತ್ತಿದ್ದೇವೆ. 07 ವರ್ಷಗಳಲ್ಲಿ 3000ಕ್ಕೂ ಅಕ ಬೈಕ ಮಾರಾಟ ಮಾಡಿದ್ದೇವೆ. ಪ್ರತಿಯೊಬ್ಬರಿಗು ಉಚಿತ ಹೆಲ್ಮೆಟ ನೀಡಿದ್ದೇವೆ. ಹಲವರು ಇದರಿಂದ ಅಪಘಾತವಾದಾಗ ಜೀವ ಉಳಿಸಿಕೊಂಡಿದ್ದಾರೆ. ಗ್ರಾಹಕರ ಜೀವ ಉಳಿಸುವುದೇ ನಮ್ಮ ಉದ್ದೇಶವಾಗಿದೆ. ಇದೇ ರೀತಿ ಮುಂದೆಯೂ ಬೈಕ ಖರೀದಿಸುವ ಎಲ್ಲರಿಗೂ ಉಚಿತ ಹೆಲ್ಮೆಟ ನೀಡುತ್ತೇವೆ.
> –ಕುಪೇಂದ್ರ ವಿ ನಿಡಗುಂದೆ ಮರಕುಂದಾ
> ಮಾಲೀಕರು ಗುರುಬಸವ ಮೋಟರ್ಸ ಮನ್ನಾಎಖ್ಖೆಳ್ಳಿ

# ಅಪರಾಧ ಕೃತ್ಯದಲ್ಲಿ ಭಾಗಿ ಇಬ್ಬರು ರೌಡಿಶೀಟರ್‌ಗಳ ಗಡಿಪಾರು

• ಮಲ್ಲಮ್ಮ ನುಡಿ ವಾರ್ತೆ ಬೀದರ್

ಜಿಲ್ಲೆಯಲ್ಲಿ ಮಟ್ಕಾ ಜೂಜಾಟ ಹಾಗೂ ಅಕ್ರಮ ಮಾದಕ ಗಾಂಜಾ ಮಾರಾಟ ದಂಧೆಯಲ್ಲಿ ಭಾಗಿಯಾಗಿ ಸಾರ್ವಜನಿಕರ ಶಾಂತಿ, ನೆಮ್ಮದಿಗೆ ಕಂಟಕವಾಗಿದ್ದ ಇಬ್ಬರು ರೌಡಿಶೀಟರ್‌ಗಳನ್ನು ರಾಜ್ಯದ ಪ್ರತ್ಯೇಕ ಜಿಲ್ಲೆಗಳಿಗೆ ಗಡಿಪಾರು ಮಾಡಿ ಬೀದರ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಆದೇಶ ಹೊರಡಿಸಿದ್ದಾರೆ.

ಬೀದರ್ ಜಿಲ್ಲೆಯ ಚಿಟಗುಪ್ಪ ಪಟ್ಟಣದ ವೀರಣ್ಣಾ ಅಡೆಪ್ಪಾ ಬರ್ಲಾ ಮತ್ತು ಬೀದರ್ ನಗರದ ಇರಾನಿ ಕಾಲೋನಿಯ ಜಾಫರ್ ಅಲಿ ಅಲಿಯಾಸ್ ಆಸೀಕ್ ಅಲಿ ಗಡಿಪಾರಾದ ರೌಡಿಶೀಟರ್‌ಗಳು. ವೀರಣ್ಣಾ ಬರ್ಲಾ ಚಾಮರಾಜನಗರ ಜಿಲ್ಲೆ ಹಾಗೂ ಜಾಫರ್ ಅಲಿಗೆ ಹಾಸನ ಜಿಲ್ಲೆಗೆ ಗಡಿಪಾರು ಮಾಡಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.





ಚಿಟಗುಪ್ಪ ಪೊಲೀಸ್ ಠಾಣೆ ವ್ಯಾಪ್ತಿಯ ನಿವಾಸಿಯಾದ ರೌಡಿಶೀಟರ್ ವೀರಣ್ಣಾ ಬರ್ಲಾ ಈತ ಚಿಟಗುಪ್ಪಾ ಪಟ್ಟಣ ಹಾಗೂ ಸುತ್ತಮುತ್ತಲಿನ ಗ್ರಾಮದಲ್ಲಿ ಮಟ್ಕಾ ಜೂಜಾಟ ನಡೆಸುತ್ತಿದ್ದನು. ಇದರಿಂದ ಬಡ ಕೂಲಿ ಕಾರ್ಮಿಕರು, ಸಣ್ಣಪುಟ್ಟ ವ್ಯಾಪಾರಿಗಳು ಈ ಜೂಜಾಟದಿಂದ ಹೆಚ್ಚಿನ ಹಣ ಬರುತ್ತದೆ ಎಂಬ ಆಸೆಯಿಂದ ತಮ್ಮ ದಿನನಿತ್ಯದ ಸಂಪಾದನೆಯ ಹಣ ಓಸಿ, ಮಟ್ಕಾ ಜೂಜಾಟವೆಂಬ ಮೋಸದಾಟದಲ್ಲಿ ಹಾಕಿ ತಮ್ಮ ಹಣವನ್ನು ಕಳೆದುಕೊಳ್ಳುತ್ತಿದ್ದು ಈ ಬಗ್ಗೆ ರೌಡಿ ವೀರಣ್ಣಾ ಬರ್ಲಾ ಮೇಲೆ ಸುಮಾರು 20 ಪ್ರಕರಣಗಳು ದಾಖಲಾಗಿದ್ದರೂ ಅಪರಾಧಿಕ ಕೃತ್ಯಗಳು ಮುಂದುವರೆಸಿದನು. ಸಮಾಜದಲ್ಲಿ ಶಾಂತಿ ಪಾಲನೆ ಮತ್ತು ಕಾನೂನು ಸುವ್ಯವಸ್ಥೆಗಾಗಿ ಸದರಿ ರೌಡಿಶೀಟರ್‌ಗೆ ಬೀದರ ಜಿಲ್ಲೆಯಿಂದ ಚಾಮರಾಜನಗರ ಜಿಲ್ಲೆಗೆ ಗಡಿಪಾರು ಮಾಡಲಾಗಿದೆ.

ಬೀದರ್ ನಗರದ ಗಾಂಧಿ ಗಂಜ ಪೊಲೀಸ್ ಠಾಣೆ ವ್ಯಾಪ್ತಿಯ, ಇರಾನಿ ಕಾಲೋನಿಯ ನಿವಾಸಿ ರೌಡಿಶೀಟರ್ ಜಾಫರ ಅಲಿ @ ಆಸೀಕ್ ಈತನು ಜಿಲ್ಲೆಯಲ್ಲಿ ಸುಲಿಗೆ ಮಾಡುವುದು, ಸಾರ್ವಜನಿಕ ಸ್ಥಳಗಳಲ್ಲಿ ಜೀವ ಬೆದರಿಕೆ ಹಾಕುವುದು, ಅಕ್ರಮವಾಗಿ ಗಾಂಜಾ ಸಾಗಾಟ ಮತ್ತು ಮಾರಾಟ ಮಾಡುವುದನ್ನು ತನ್ನ ವೃತ್ತಿ ಮಾಡಿಕೊಂಡಿದ್ದು, ಇದರಿಂದ ಜಿಲ್ಲೆಯಲ್ಲಿ ಸಾಮಾಜಿಕ ಸ್ವಾಸ್ಥ್ಯ ಹಾಳುಮಾಡಿ ಯುವ ಜನರನ್ನು ಸೆಳೆದು ದುಶ್ಚಟಕ್ಕೆ ಬಲಿ ಮಾಡುತ್ತಿದ್ದನು. ಈತನ ವಿರುದ್ಧ ಸುಮಾರು 8 ಪ್ರಕರಣಗಳು ದಾಖಲಾಗಿದ್ದರೂ ಅಪರಾಧಿಕ ಕೃತ್ಯಗಳಿಂದ ದೂರವಾಗದೆ ತನ್ನ ಪ್ರವೃತಿಯನ್ನು ಮುಂದುವರೆಸಿಕೊಂಡಿದ್ದನು.

ಜಿಲ್ಲೆಯಲ್ಲಿ ಕಾನೂನು ವಿರುದ್ಧ ಚಟುವಟಿಕೆಯಲ್ಲಿ ಭಾಗಿಯಾಗಿ, ಕಾನೂನು ಮತ್ತು ಸುವ್ಯವಸ್ಥೆಯಲ್ಲಿ ಅಡೆತಡೆಯನ್ನುಂಟು ಮಾಡುವವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು ಹಾಗೂ ಗಡಿಪಾರು ಮಾಡಲಾಗುವುದು. ಜಿಲ್ಲೆಯ ನಾಗರಿಕರು ಯಾವುದೇ ಕಾನೂನು ವಿರುದ್ಧ ಚಟುವಟಿಕೆಯಲ್ಲಿ ಭಾಗಿಯಾಗಿ ಕಾನೂನು ಸಂಘರ್ಷದಲ್ಲಿ ಅಮೂಲ್ಯವಾದ ತನ್ನ ಹಾಗೂ ತನ್ನ ಕುಟುಂಬದ ಜೀವನವನ್ನು ಹಾಳುಮಾಡಿಕೊಳ್ಳಬೇಡಿ ಎಂದು ಸಾರ್ವಜನಿಕರಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ ಅವರು ಕೋರಿದ್ದಾರೆ.

# ಬೆಳೆಸಾಲ ಪಡೆದವರಿಗೆ ಬೆಳೆ ವಿಮೆ ಕಡ್ಡಾಯ




• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಜಿಲ್ಲೆಯ ಹೆಚ್ಚಿನ ಸಂಖ್ಯೆಯ ರೈತರು ಬೆಳೆ ವಿಮೆ ಯೋಜನೆಯ ಪ್ರಯೋಜನ ಪಡೆಯುವಂತೆ ಗ್ರಾಮ ಮಟ್ಟದಲ್ಲಿ ಜಾಗೃತಿ ಮೂಡಿಸಿ, ರೈತರನ್ನು ಮನವೊಲಿಸಿ ಬೆಳೆವಿಮೆ ವ್ಯಾಪ್ತಿಗೆ ಒಳಡಿಸಬೇಕೆಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಗಜಾನನ ಬಾಲೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ ಸಭಾಭವನದಲ್ಲಿ ಸೋಮವಾರ ಬೆಳೆ ವಿಮೆ ಯೋಜನೆ ಅನುಷ್ಠಾನ ಕುರಿತು ಜರುಗಿದ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬೆಳೆ ಸಾಲ ಪಡೆದ ರೈತರಿಗೆ ಬೆಳೆ ವಿಮೆ ಕಡ್ಡಾಯವಾಗಿರುವ ಹಿನ್ನಲೆಯಲ್ಲಿ ಯಾವುದೇ ಅರ್ಹ ರೈತರು ವಿಮೆಯಿಂದ ವಂಚಿತರಾಗದಂತೆ ಬ್ಯಾಂಕುಗಳು, ಕೃಷಿ ಹಾಗೂ ತೋಟಗಾರಿ–ಕೆ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಗ್ರಾಮ ಮಟ್ಟದಲ್ಲಿ ರೈತರಿಗೆ ಬೆಳೆ ವಿಮೆಯ ಮಹತ್ವ, ನೋಂದಣಿ ವಿಧಾನ, ಕೊನೆಯ ದಿನಾಂಕ ಹಾಗೂ ಯೋಜನೆಯ ಪ್ರಯೋಜನಗಳ ಕುರಿತು ಸಮರ್ಪಕ ಮಾಹಿತಿ ನೀಡಬೇಕು. ಬ್ಯಾಂಕುಗಳು ಬೆಳೆಸಾಲ ಮಂಜೂರು ಮಾಡುವ ಸಂದರ್ಭದಲ್ಲಿ ವಿಮೆ ನೋಂದಣಿ ಪ್ರಕ್ರಿಯೆಯನ್ನು ನಿಯಮಾನುಸಾರ ಪೂರ್ಣಗೊಳಿಸಬೇಕು. ಯೋಜನೆಯ ಪ್ರಗತಿಯನ್ನು ನಿರಂತರವಾಗಿ ಪರಿಶೀಲಿಸಿ, ಜಿಲ್ಲೆಯಲ್ಲಿ ಶೇ.100 ರಷ್ಟು ಅರ್ಹ ರೈತರನ್ನು ಬೆಳೆ ವಿಮೆ ವ್ಯಾಪ್ತಿಗೆ ತರುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದರು.

ಬಾಗಲಕೋಟೆ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ಹಾಗೂ ಕೃಷಿ ಪತ್ತಿನ ಸಹಕಾರ ಸಂಘಗಳು ನೀಡಿದ ಬೆಳೆಸಾಲ ಪಡೆದ ರೈತರನ್ನು ವಿಮೆ ವ್ಯಾಪ್ತಿಗೆ ಒಳಪಡಿಸುವ ಕಾರ್ಯವಾಗಬೇಕು. ಕಳೆದ ಸಾಲಿನ ಹಂಗಾಮಿನಲ್ಲಿ 22 ಸಾವಿರಕ್ಕೂ ಹೆಚ್ಚು ರೈತರು ಬೆಳೆ ವಿಮೆಗೆ ಒಳಪಡಿಸಿದ್ದರು. ಈ ಹಂಗಾಮಿನಲ್ಲಿ ಅದಕ್ಕೂ ಹೆಚ್ಚು ವಿಮೆಗೆ ನೋಂದಣಿಗೆ ಕ್ರಮವಹಿಸಲು ಸೂಕ್ತ ನಿರ್ದೇಶನ ನೀಡಿದರು. ಪ್ರತಿಯೊಂದು ಬ್ಯಾಂಕ್‌ಗಳು ಸಾಲ ಪಡೆದಿರುವ ರೈತರನ್ನು ಮನವೊಲಿಸಿ ಬೆಳೆವಿಮೆ ನೋಂದಣಿಗೆ ಕ್ರಮವಹಿಸಲು ತಿಳಿಸಿದರು. ಈ ಬಗ್ಗೆ ಪ್ರತಿದಿನ ಪ್ರಗತಿಯ ಬಗ್ಗೆ ಗಮನ ಹರಿಸಲಾಗುವುದೆಂದು ತಿಳಿಸಿದರು.

ಕೃಷಿ ಜಂಟಿ ನಿರ್ದೇಶಕ ಟಿ.ಎಸ್.ರುದ್ರೇಶಪ್ಪ ಮಾತನಾಡಿ, ಹೆಸರು, ಸೋಯಾ ಅವರೆ ಹಾಗೂ ಉದ್ದು ಬೆಳೆಗೆ ವಿಮೆ ಕಂತು ಪಾವತಿಗೆ ಜುಲೈ 15 ಕೊನೆಯ ದಿನವಾದರೆ, ಅರಿಶಿಣ, ಸೂರ್ಯಕಾಂತಿ, ಸಜ್ಜೆ, ಮುಸುಕಿನ ಜೋಳ, ಜೋಳ, ತೊಗರಿ, ಶೇಂಗಾ, ಎಳ್ಳು (ಮ.ಆ), ಕೆಂಪು ಮೆಣಸಿನಕಾಯಿ, ಮುಸುಕಿನ ಜೋಳ, ಸಜ್ಜೆ, ತೊಗರಿ, ಶೇಂಗಾ (ನೀರಾವರಿ) ಬೆಳೆಗಳಿಗೆ ಜುಲೈ 31 ಹಾಗೂ ಸೂರ್ಯಕಾಂತಿ, ಈರುಳ್ಳಿ (ನೀರಾವರಿ), ಈರುಳ್ಳಿ, ಕೆಂಪು ಮೆಣಸಿನಕಾಯಿ (ಮ.ಆ) ಬೆಳೆಗಳಿಗೆ ವಿಮೆ ಕಂತು ಪಾವತಿಗೆ ಆಗಸ್ಟ 14 ಆಗಿರುತ್ತದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿವಿಧ ಬೆಳೆ ವಿಮೆಯ ಪ್ರಚಾರದ ಪೋಸ್ಟರಗಳನ್ನು ಬಿಡುಗಡೆಗೊಳಿಸಲಾಯಿತು. ಸಭೆಯಲ್ಲಿ ಬಿಡಿಸಿಸಿ ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಸಿದ್ದನಗೌಡ ನೀಲಪ್ಪನವರ, ಜಿಲ್ಲಾ ಅಗ್ರಣಿ ಬ್ಯಾಂಕ್‌ನ ವ್ಯವಸ್ಥಾಪಕ ರಾಜಕುಮಾರ ಹೂಗಾರ, ಸಹಕಾರ ಇಲಾಖೆಯ ಉಪನಿಬಂಧಕ ದಾನಯ್ಯ ಹಿರೇಮಠ ಸೇರಿದಂತೆ ವಿವಿಧ ಬ್ಯಾಂಕ್ ಶಾಖಾ ವ್ಯವಸ್ಥಾಪಕರು ಉಪಸ್ಥಿತರಿದ್ದರು.

**DRAFT PROCLAMTION**
**IN THE COURT OF THE SENIOR CIVIL JUDGE AT BASAVAKALYAN**
**G & WC NO. 06/2026**

**Between:**
Basamma w/o Late Suresh Hegade,
Age: 29 years, Occu; Agriculture & Household, R/o village Mallikarjun wadi, Tq: Basavakalyan, Dist: Bidar
**....... Petitioner**
And To Whomsoever It amy Concern.
**........ Respondent**

**Claim:** Petition for permission of selling the land properties by the minor Prajwal s/o late Suresh Hegade under guardianship of petitioner being his natural mother U/ Sec. 8(2), of Hindu Minority and Guardianship Act. 195 and Sec. 29 of Guardians and Wards Act. 1890.

**GUADRIANSHIP AND WARDS ACT.**

Whereas the petitioner through Sri. Amrutpfp D. Chinkere, Advocate, BAsavakalyan had filed a petition U/Sec. 8(2), of Hindu Minority and Guardianship Act. 1956 and Sec. 29 of Guardians and Wards Act. 1890, the Petitioner being the mother of the minor Prajwal, she has filed this application for permission to sell the lands sy. No. 34/6. Measuring 01 acre 08 gts, R.A. of RS. 0.42 paise, and sy. No. 38/6. Measuring 00 acres 16 gts, R.A. of Rs. 0.14 paise, both situated at village Rajeshwar, Tq: Bavasakalyan, Dist: BIdar by the minor Prajwal s/o late Suresh Hegade minor under guardianship of his natural mother i.e. the petitioner, and father of the minor and husband of petitioner namely Suresh hegade is no more, so under such circumstances, the petitioner is having no other option filed this petition before the Honble, court for appointment of petitioner as a guardian and being the mother of the minor son namely Prajwal s/o Suresh Hegade, age; 07 yrs, R/o Village Mallikarjunwadi, Tq: Basavakalyan, The competent authorities have intimated the petitioner that, you should get the order from the court and be appointed as a guardian of the minor for selling the above said lands. Whomsoever having any objection for the sme, he/she can file his/her objection before the Honble Senior civil Judge court, at Basavakalyan in file bearing G.& W.C. No. 06/2026 on or before 14/08/2026.

**Hence this draft proclamation.**
**Date; 01/07/2026**

**Chief Ministerial Officer,**
**Senior Civil Judge court,**
**At Basavakalyan, Dist; Bidar.**

# ರೈತ ಮುಖಂಡ ಸತೀಷ ನನ್ನೂರೆ ಪಿ.ಎಲ್.ಡಿ ಬ್ಯಾಂಕ್ ಸದಸ್ಯರಾಗಿ ನೇಮಕ

• **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ**

ರೈತ ಮುಖಂಡ ಸತೀಷ ನನ್ನೂರೆ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣಾಭಿವೃದ್ಧಿ ಬ್ಯಾಂಕಿಗೆ ನಾಮನಿರ್ದೇಶನ ಸದಸ್ಯರಾಗಿ ಆಯ್ಕೆಯಾದ ನಿಮಿತ್ತ ನಗರದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಸೋಮವಾರ ಸತೀಷ ನನ್ನೂರೆಗೆ ಮಾಜಿ ಸಚಿವ ರಾಜಶೇಖರ ಪಾಟೀಲ್ ಸನ್ಮಾನಿ, ಆದೇಶ ಪತ್ರ ವಿತರಿಸಿದರು.ಮಾಜಿ ಸಚಿವ ರಾಜಶೇಖರ ಪಾಟೀಲ್ ಮಾತನಾಡಿ, ರೈತರ ಹಿತದೃಷ್ಟಿಯಿಂದ ರೈತ ಸಂಘಟನೆಯ ಮುಖಂಡ ಸತೀಷ ನನ್ನೂರೆಗೆ ಪ್ರಾಥಮಿಕ ಸಹಕಾರ ಕೃಷಿ ಬ್ಯಾಂಕಿನ ನಾಮನಿರ್ದೇಶನ ಸದಸ್ಯರಾಗಿ ನೇಮಕ ಮಾಡಲಾಗಿದೆ. ಈ ಅವಕಾಶದ ಸದುಪಯೋಗ



ಪಡೆದುಕೊಂಡು ಸತೀಷ ನನ್ನೂರೆ ಅವರು ರೈತರ ಸಮಸ್ಯೆಗೆ ಸ್ಪಂದಿಸುವ ಮೂಲಕ ಬ್ಯಾಂಕಿನಿಂದ ಸಿಗುವ ಸೌಲಭ್ಯಗಳನ್ನು ಒದಗಿಸಿಕೊಡುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ರೈತ ಸಂಘದ ಜಿಲ್ಲಾ ಉಪಾಧ್ಯಕ್ಷ ಕರಬಸಪ್ಪ ಹುಡಗಿ, ಗುರುಲಿಂಗಪ್ಪ ಮೇಲ್ದೊಡ್ಡಿ, ಸಿದ್ದಣ್ಣ ಭೂಶಟ್ಟಿ, ರಾಮರಾವ ಕೇರೂರೆ, ರಿಯಾಜ್ ಪಟೇಲ್, ಅಣ್ಣರಾವ ಪಾಟೀಲ್ ನಿಂಬೂರ್, ಗೋವಿಂದರಾವ ಹಂದಿಕೇರಾವಾಡಿ, ರಾಮಣ್ಣ ಚೀನಕೇರಾ, ಗಣಪತಿರಾವ ಶೇಡೋಳ, ಶಿವಕುಮಾರ ಮದರಗಾಂವ, ದಿಲೀಪ ಕುಲಕರ್ಣಿ, ದಾದರಾವ ಸುಲ್ತಾನಬಾದವಾಡಿ, ರಾಜಪ್ಪ ಓತಗಿ, ಅಡೇಪ್ಪ ಓತಗಿ, ವಿಠಲ್ ನಂದಗಾಂವ, ದತ್ತುರಾವ ಪಾಟೀಲ್ ಸೇರಿ ಅನೇಕರಿದ್ದರು.

# ಏಣಕೂರ ಮತಗಟ್ಟೆ 241ರಲ್ಲಿ ಶೇ.100 ರಷ್ಟು ಎಸ್ಐಆರ್ ಪ್ರಕ್ರಿಯೆ ಪೂರ್ಣ
# ಬಿಎಲ್ಒ, ಮೇಲ್ವಿಚಾರಕರಿಗೆ ಪ್ರಶಂಸನಾ ಪ್ರಮಾಣ ಪತ್ರ ವಿತರಣೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಜು.13: ಭಾಲ್ಕಿ ವಿಧಾನಸಭಾ ಕ್ಷೇತ್ರ 51ರಲ್ಲಿ ಕಡಿಮೆ ಅವಧಿಯಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ (ಎಸ್ಐಆರ್) ಪ್ರಕ್ರಿಯೆಯನ್ನು ಶೇ.100ರಷ್ಟು ಪೂರ್ಣಗೊಳಿಸಿದ ಬಿಎಲ್ಒ ಹಾಗೂ ಮೇಲ್ವಿಚಾರಕರನ್ನು ಜಿಲ್ಲಾಡಳಿತದ ವತಿಯಿಂದ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

ಬೀದರ್ ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ತಾಲೂಕಿನ ಏಣಕೂರ ಗ್ರಾಮದ 241ರ ಮತಗಟ್ಟೆ ಅಧಿಕಾರಿಗಳ ಮೇಲ್ವಿಚಾರಕ, ಗ್ರಾಮ ಆಡಳಿತಾಧಿಕಾರಿ ಸಂತೋಷ ಚಿನ್ನಾ ರಾಠೋಡ, ಮತಗಟ್ಟೆ ಅಧಿಕಾರಿ, ಸರಕಾರಿ ಪ್ರಾಥಮಿಕ ಶಾಲೆಯ ಪದವೀಧರ ಸಹ ಶಿಕ್ಷಕಿ ಕುಮಾರಿ ಬಸಮ್ಮ ಮತ್ತು 6ರ ಮತಗಟ್ಟೆ ಅಧಿಕಾರಿ ಇಮಾಮ್ ಪಟೇಲ್ ಅವರನ್ನು ಬೆಂಗಳೂರಿನ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಪ್ರಶಂಸನಾ ಪತ್ರ ನೀಡಿ ಗೌರವಿಸಿದರು.

ನಂತರ ಮಾತನಾಡಿದ ಅವರು, ಚುನಾವಣಾ ಆಯೋಗದ ಮಹತ್ವದ ಕಾರ್ಯವನ್ನು ಕಡಿಮೆ ಅವಧಿಯಲ್ಲಿ ಸಮರ್ಪಕವಾಗಿ ಪೂರ್ಣಗೊಳಿಸಿರುವ ಅಧಿಕಾರಿಗಳ ಕರ್ತವ್ಯನಿಷ್ಠೆ ಹಾಗೂ ಕಾರ್ಯಕ್ಷಮತೆ ಶ್ಲಾಘನೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ಭಾಲ್ಕಿ ವಿಧಾನಸಭಾ ಕ್ಷೇತ್ರದಲ್ಲಿ ಎಸ್ಐಆರ್ ಬಗ್ಗೆ ವ್ಯಾಪಕ ಜಾಗೃತಿ ಮೂಡಿಸಲಾಗಿದೆ. ಜತೆಗೆ ಮತಗಟ್ಟೆ ಮೇಲ್ವಿಚಾರಕ, ಮತಗಟ್ಟೆ ಅಧಿಕಾರಿಗಳ ಪರಿಶ್ರಮ ಮತ್ತು ಜನಪ್ರತಿನಿಧಿ, ಸಾರ್ವಜನಿಕರ ಸಹಕಾರದಿಂದ ತಾಲೂಕಿನ ವಿಧಾನಸಭಾ ಕ್ಷೇತ್ರದಲ್ಲಿ ಎನ್ಯುಮರೇಷನ್ ಪಾರ್ಮ್ ವಿತರಣೆ ಮತ್ತು ಡಿಜಿಟಲ್ ಪ್ರಕ್ರಿಯೆ ಅತ್ಯಂತ ವೇಗವಾಗಿ ನಡೆಯುತ್ತಿದೆ. ಎಸ್ಐಆರ್ ಪ್ರಕ್ರಿಯೆಯಲ್ಲಿ ಶೇ.100 ರಷ್ಟು ಸಾಧನೆ ಮಾಡಿದ ಮತಗಟ್ಟೆ ಮೇಲ್ವಿಚಾರಕ, ಮತಗಟ್ಟೆ ಅಧಿಕಾರಿಗಳಿಗೆ ಅಭಿನಂದನೆಗಳು.
> **– ಮಲ್ಲಿಕಾರ್ಜುನ ವಡ್ಡನಕೇರಿ ತಹಸೀಲ್ದಾರರು ಭಾಲ್ಕಿ**

ಅಧಿಕಾರಿಗಳ ಕರ್ತವ್ಯನಿಷ್ಠೆ, ಸಮಯಪಾಲನೆ, ಪರಿಶ್ರಮ ಹಾಗೂ ಕಾರ್ಯಕ್ಷಮತೆ ಶ್ಲಾಘನೀಯವಾಗಿದೆ. ಚುನಾವಣಾ ಆಯೋಗದ ನಿರ್ದೇಶನಗಳನ್ನು ಜವಾಬ್ದಾರಿ ಮತ್ತು ಸಮರ್ಪಣಾ ಮನೋಭಾವದಿಂದ ಸಮಯೋಚಿತವಾಗಿ ಅನುಷ್ಠಾನಗೊಳಿಸಿರುವ ನಿಮ್ಮ ಸೇವೆ ಇತರರಿಗೆ ಮಾದರಿಯಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಪ್ರಶಂಸಿಸಿ, ಮುಂದಿನ ಕಾರ್ಯಗಳಿಗೂ ಶುಭ ಹಾರೈಸಿದರು.ಈ ಸಂದರ್ಭದಲ್ಲಿ ಮತದಾರ ನೋಂದಣಾಧಿಕಾರಿ ಶಂಕರ ಖಾದಿ, ಜಿಪಂ ಸಿಇಒ ಡಾ.ಗಿರೀಶ ಬದೋಲೆ, ಭಾಲ್ಕಿಯ ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ಹಾಜರಿದ್ದರು.

# ಸಮಾಜ ಸೇವೆಗೆ ಹೊಸ ಚೈತನ್ಯ: ನೂತನ ರೋಟರಿ ಕ್ಲಬ್ ಪದಾಧಿಕಾರಿಗಳ ಪದಗ್ರಹಣ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಸ್ನೇಹ, ವಿಶ್ವಾಸ,ಶಾಂತಿ, ಸೌಹಾರ್ದತೆಯ ಸಂದೇಶ ಸಾರುವರೋಟರಿಕ್ಲಬ್‌ನ ಸೇವೆಯು ಶ್ಲಾಘನೀಯವಾದದ್ದುಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಪೂಜ್ಯಗುರುಬಸವ ಪಟ್ಟದ್ದೇವರು ಅಭಿಪ್ರಾಯಪಟ್ಟರು.ನಗರದಗುರು ಕೃಪ ಕಲ್ಯಾಣ ಮಂಟಪದಲ್ಲಿರೋಟರಿಕ್ಲಬ್ಆಫ್ ಪೋರ್ಟ್ 3160, 2026–27 ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಂದರ್ಭದಲ್ಲಿ ಸಾನಿಧ್ಯ ವಹಿಸಿ ಮಾತನಾಡಿ ಸಮಾಜಸೇವೆ, ಮಾನವೀಯ ಮೌಲ್ಯಗಳು ಮತ್ತುಜನಪರ ಕಾರ್ಯಗಳಿಗೆ ಮತ್ತಷ್ಟು ವೇಗ ನೀಡುವ ಸಂಕಲ್ಪದೊಂದಿಗೆರೋಟರಿಕ್ಲಬ್ ಕಾರ್ಯನಿರ್ವಹಿಸುತ್ತಿದೆಎಂದರು.

ಕಲ್ಯಾಣಝೋನನ ಸಹಾಯಕಗವರ್ನರ ನಿತೀನಕರ್ಪೂರರವರು ಶಪಥ ಬೋಧಿಸುವುದರ ಮೂಲಕ ಕೊರಳು ಪಟ್ಟಿಹಾಕಿದರು. ಮಾತನಾಡಿರೋಟರಿ ಸಂಸ್ಥೆಯಧ್ಯೇಯ ಮತ್ತು ಆದರ್ಶಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಸಮಾಜದ ಪ್ರತಿಯೊಂದು ವರ್ಗಕ್ಕೂತಲುಪಿಸುವ ಬದ್ಧತೆಯನ್ನು ನೂತನ ಪದಾಧಿಕಾರಿಗಳು ಮಾಡಬೇಕುಎಂದು ಹೇಳಿ ರೋಟರಿಕ್ಲಬ್ ವಿಶ್ವದಾದ್ಯಂತ ಶಿಕ್ಷಣ, ಆರೋಗ್ಯ, ಪರಿಸರ ಸಂರಕ್ಷಣೆ, ರಕ್ತದಾನ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸೇರಿದಂತೆ ಹಲವು ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಜನರ ಬದುಕಿನಲ್ಲಿಆಶಾಕಿರಣವಾಗಿದ್ದು, ನೂತನತಂಡದ ನೇತೃತ್ವದಲ್ಲಿಇನ್ನಷ್ಟುಜನಪರ ಹಾಗೂ ಮಾದರಿ ಕಾರ್ಯಕ್ರಮಗಳು ಜರುಗಲಿವೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ನೂತನಅಧ್ಯಕ್ಷರಾಗಿಡಾ.ಶೈಲಜಾ ಅನಿಲ್ ಕುಮಾರ್ ತಳವಾಡೆ, ಕಾರ್ಯದರ್ಶಿಯಾಗಿ ಪ್ರೊ.ಅಶೋಕ್ ರಾಜೋಳೆ, ಖಜಾಂಚಿಯಾಗಿ ಅವಿನಾಶ ಮಾಳಗೆ ಪದಗ್ರಹಣ ಮಾಡಿದರು.ರೋಟರಿಕ್ಲಬ್ ನೂತನ ಕಾರ್ಯದರ್ಶಿ ಅಶೋಕ್ ರಾಜೋಳೆ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

ಅತಿಥಿಗಳಪರಿಚಯವನ್ನುಡಾ.ಯುವರಾಜ್‌ಜಾದವ್, ಉದ್ಯಮಿಯೋಗೇಶ್‌ಅಷ್ಟೂರೆ, ಡಾ.ಗುಂಡೆರಾವ್ ಶೆಡೋಳೆ, ನ್ಯಾಯವಾದಿ ಉಮಾಕಾಂತ್ ವಾರದ ನೆರವೇರಿಸಿದರು.ನೂತನಅಧ್ಯಕ್ಷರಾದಡಾ.ಶೈಲಜಾ ಅನಿಲ್ ಕುಮಾರ್ ತಳವಾಡೆ ಮಾತನಾಡಿ, ಸದಸ್ಯರ ಸಹಕಾರ ಮತ್ತು ಸಾರ್ವಜನಿಕರ ವಿಶ್ವಾಸದೊಂದಿಗೆಆರೋಗ್ಯ ಶಿಬಿರಗಳು, ಉಚಿತ ನೇತ್ರತಪಾಸಣೆ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು, ಪರಿಸರ ಸಂರಕ್ಷಣೆ, ವೃಕ್ಷಾರೋಪಣ, ರಕ್ತದಾನ ಶಿಬಿರ ಸೇರಿದಂತೆಸಮಾಜಕ್ಕೆಉಪಯುಕ್ತವಾದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿಇನ್ಸ್ಟಾಲೇಶನ್‌ಅಧಿಕಾರಿಯಾಗಿ ಮುಖ್ಯ ಅತಿಥಿಗಳಾಗಿ ಮಾಜಿಎಜಿಗಳಾದ ಜಹೀರ್‌ಅನ್ವಾರ್ ಮುಲ್ತಾನಿ, ಡಾ. ರಘುಕೃಷ್ಣಮೂರ್ತಿ, ಡಾ. ಅಮಿತ್‌ಅಷ್ಟೂರೆ, ಡಾ. ವಸಂತ ಪವಾರ್ ಭಾಗವಹಿಸಿದ್ದರು. ಕುಮಾರಿ ಸ್ಪೂರ್ತಿ, ಅನ್ವಿತಾ ಪ್ರಾರ್ಥನಾಗೀತೆ ಹಾಡಿದರು.ಈ ಸಂದರ್ಭದಲ್ಲಿ ನಿಕಟಪೂರ್ವಅಧ್ಯಕ್ಷ ಅಶ್ವಿನ್ ಬೋಸ್ಲೆ, ನಿಕಟಪೂರ್ವ ಕಾರ್ಯದರ್ಶಿ ಬಸವ ಪಾಟೀಲ್, ಖಜಾಂಚಿ ಸೌರಭ ನಾಯಕ್ ಸೇರಿದಂತೆಅನೇಕರು ಭಾಗವಹಿಸಿದ್ದರು. ಡಾಕ್ಟರ್ ಅನಿಲ್ ಸುಕಾಳೆ ನಿರೂಪಿಸಿದರೆ ನ್ಯಾಯವಾದಿ ಉಮಾಕಾಂತ್ ವಾರದ ವಂದಿಸಿದರು . ರೋಟರಿ ಸದಸ್ಯರು, ಉದ್ಯಮಿಗಳು, ಸಮಾಜ ಮುಖಂಡರು ಹಾಗೂ ಸಾರ್ವಜನಿಕರು ಭಾಗವಹಿಸಿ ನೂತನ ಪದಾಧಿಕಾರಿಗಳಿಗೆ ಶುಭಾಶಯಗಳನ್ನು ಕೋರಿದರು.




> ಭಾಲ್ಕಿರೋಟರಿಕ್ಲಬ್‌ನವರು ಸಮಾಜಮುಖಿ, ಜನೋಪಯೋಗಿ ಕಾರ್ಯಕ್ರಮಗಳನ್ನು ನಡೆಸುವುದರ ಮೂಲಕ ಜನರ ಪ್ರೀತಿಗೆ ಪಾತ್ರವಾಗಿದೆ. ಯಾರಿಂದಲೂ ವಂತಿಕೆ ಹಣವನ್ನು ಸ್ವೀಕರಿಸದೆ ನಿಸ್ವಾರ್ಥ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯವಾದದ್ದು.
> **– ಪೂಜ್ಯಗುರುಬಸವ ಪಟ್ಟದೇವರು , ಹಿರೇಮಠ ಸಂಸ್ಥಾನ ಭಾಲ್ಕಿ**

> ರೋಟರಿಕ್ಲಬ್‌ಜಾಗತಿಕ ಸಂಘವಾಗಿದ್ದು, ದುರ್ಬಲವರ್ಗದವರಿಗೆ, ವಿಕಲಚೇತನರಿಗೆ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಬೆನ್ನೆಲಬಾಗಿ ನಿಂತು ಸಹಾಯ ಮಾಡುತ್ತಿದೆ.
> **– ನಿತಿನ್‌ಕರ್ಪೂರ್, ಕಲ್ಯಾಣ್‌ಜೋನ್ ಸಹಾಯಕಗವರ್ನರ್.**

> ಕಷ್ಟದಲ್ಲಿದ್ದವರಿಗೆಸಹಾಯಮಾಡಿದರೆಅದುಆತ್ಮ ಸಂತೃಪ್ತಿ ನೀಡುತ್ತದೆ. ನಿಸ್ವಾರ್ಥ ಸೇವಾ ಮನೋಭಾವನೆಯಿಂದ ಮನುಷ್ಯನಲ್ಲಿದ 'ೀವತ್ವದಗುಣವನ್ನುಕಾಣಬಹುದು
> **– ಡಾ. ರಘುಕೃಷ್ಣಮೂರ್ತಿ, ಮಾಜಿಎ.ಜಿ. ಬೀದರ**

# ಪ್ರಜೆಗಳು-ಸರ್ಕಾರದ ನಡುವೆ ಸೇತುವೆ ಪತ್ರಿಕೆ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಪತ್ರಿಕೆಗಳು ಸರ್ಕಾರ ಮತ್ತು ಪ್ರಜೆಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವುದರ ಜೊತೆಗೆ ಸಮಾಜದ ಸಮಸ್ಯೆಗಳ ಕುರಿತು ಸರ್ಕಾರವನ್ನು ಎಚ್ಚರಿಸುವ ಜವಾಬ್ದಾರಿಯನ್ನೂ ಸಮರ್ಥವಾಗಿ ನಿಭಾಯಿಸುತ್ತವೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಗೌರವಾಧ್ಯಕ್ಷ ಅಶೋಕ ರಾಜೋಳೆ ಅಭಿಪ್ರಾಯಪಟ್ಟರು.ನಗರದ ತಾಪಂ ಸಭಾಂಗಣದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹಾಗೂ ಸರ್ಕಾರಿ ಪ್ರಾಥಮಿಕ ಶಿಕ್ಷಕರ ಸಂಘಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಪತ್ರಕರ್ತರು ಸತ್ಯ, ನಿಷ್ಪಕ್ಷಪಾತ ಮತ್ತು ಜವಾಬ್ದಾರಿಯುತ ಪತ್ರಿಕೋದ್ಯಮವನ್ನು ಪಾಲಿಸಬೇಕು. ಆಧಾರರಹಿತ ಹಾಗೂ ಸುಳ್ಳು ಸುದ್ದಿಗಳ ಪ್ರಕಟಣೆ ಸಮಾಜದಲ್ಲಿ ಗೊಂದಲ ಮತ್ತು ಅನಾಹುತಗಳಿಗೆ ಕಾರಣವಾಗುವ ಸಾಧ್ಯತೆ ಇರುವುದರಿಂದ ಮಾಧ್ಯಮಗಳು ಹೆಚ್ಚಿನ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕೆಂದು ಅವರು ಹೇಳಿದರು. ಗೊಂಡ ಸಮಾಜದ ಜಿಲ್ಲಾಧ್ಯಕ್ಷ ನಿರಂಜನ ಪಾತ್ರೆ ಪ್ರಾಸ್ತಾವಿಕವಾಗಿ ಮಾತನಾಡಿ, ಸಮಾಜದ ಆಗುಹೋಗುಗಳನ್ನು ಜನತೆಗೆ ತಲುಪಿಸಿ ಜನಾಭಿಪ್ರಾಯ ರೂಪಿಸುವ ಮಹತ್ವದ ಜವಾಬ್ದಾರಿಯನ್ನು ಪತ್ರಕರ್ತರು ನಿರ್ವಹಿಸುತ್ತಿದ್ದಾರೆ ಎಂದು ಹೇಳಿದರು.ಸರ್ಕಾರಿ ಪ್ರಾಥಮಿಕ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಬಸವರಾಜ ದಾನಾ ಪತ್ರಕರ್ತರ ಸೇವೆಯನ್ನು ಶ್ಲಾಘಿಸಿದರು. ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ದತ್ತಾತ್ರಿ ಕಾಟ್ಕರ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರ್ನಾಟಕ ರಾಜ್ಯ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಜೈರಾಜ ಪಾತ್ರೆ ಕಾರ್ಯಕ್ರಮ ಉದ್ಘಾಟಿಸಿದರು.ಸುಧಾಕರ ಗಾಯಕವಾಡ ಸ್ವಾಗತಿಸಿದರು. ಚಂದ್ರಕಾಂತ ತಳವಾಡೆ ಕಾರ್ಯಕ್ರಮ ನಿರೂಪಿಸಿದರೆ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಪ್ರಧಾನ ಕಾರ್ಯದರ್ಶಿ ಸಂತೋಷ ಬಿ.ಜಿ. ಪಾಟೀಲ ವಂದಿಸಿದರು.ಕಾರ್ಯಕ್ರಮದಲ್ಲಿ ಪತ್ರಿಕಾ ದಿನಾಚರಣೆ ಅಂಗವಾಗಿ ಪತ್ರಕರ್ತರು ಹಾಗೂ ವಿವಿಧ ಸಂಘಗಳ ಪದಾಧಿಕಾರಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

# ಬಸವತತ್ವದ ಬೆಳಕನ್ನು ಸಮಾಜಕ್ಕೆ ಹಂಚಿದ ಮಹಾದೇವ ಕುಂಬಾರರ ಸೇವೆ ಅವಿಸ್ಮರಣೀಯ

• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**


ಬಸವತತ್ವ, ಮಾನವೀಯ ಮೌಲ್ಯಗಳು ಮತ್ತು ನಿಸ್ವಾರ್ಥ ಸೇವೆಯ ಮೂಲಕ ಸಮಾಜದಲ್ಲಿ ಶಾಶ್ವತ ಛಾಪು ಮೂಡಿಸಿದ ಲಿಂಗೈಕ್ಯ ಮಹಾದೇವ ಕುಂಬಾರ (ಹುಕ್ಕೆರಿ) ಅವರ ಬದುಕು ಸಮಾಜಕ್ಕೆ ಆದರ್ಶವಾಗಿದೆ ಎಂದು ಹಿರೇಮಠ ಸಂಸ್ಥಾನದ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರು ಹೇಳಿದರು.ಹಿರೇಮಠ ಸಂಸ್ಥಾನದಲ್ಲಿ ಆಯೋಜಿಸಿದ್ದ ಲಿಂಗೈಕ್ಯ ಮಹಾದೇವ ಕುಂಬಾರರ ನುಡಿ ನಮನ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಮಹಾದೇವ ಕುಂಬಾರ ಅವರು ನಾಲ್ಕು ದಶಕಗಳಿಗೂ ಹೆಚ್ಚು ಕಾಲ ಶ್ರೀಮಠದೊಂದಿಗೆ ಅವಿನಾಭಾವ ಸಂಬಂಧ ಬೆಳೆಸಿಕೊಂಡು ಬಸವತತ್ವದ ಪ್ರಚಾರ–ಪ್ರಸಾರವನ್ನು ಜೀವನದ ಧ್ಯೇಯವನ್ನಾಗಿಸಿಕೊಂಡಿದ್ದರು. ತಮ್ಮ ಮನೆಯನ್ನು ಅನುಭವ ಮಂಟಪವನ್ನಾಗಿ ರೂಪಿಸಿ, ಕೊನೆಯ ಉಸಿರಿನವರೆಗೂ ಸಮಾಜಮುಖಿ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ತೊಡಗಿಸಿಕೊಂಡು ಅನೇಕರಿಗೆ ಪ್ರೇರಣೆಯಾಗಿದ್ದರು ಎಂದು ಸ್ಮರಿಸಿದರು.

ದಿವ್ಯ ಸಾನ್ನಿಧ್ಯ ವಹಿಸಿದ್ದ ಪೂಜ್ಯ ಗುರುಬಸವ ಪಟ್ಟದ್ದೇವರು ಮಾತನಾಡಿ, ಮಹಾದೇವ ಕುಂಬಾರ ಅವರ ಬಸವಭಕ್ತಿ, ಶ್ರೀಮಠದ ಮೇಲಿನ ಅಪಾರ ನಿಷ್ಠೆ ಮತ್ತು ಸೇವಾ ಮನೋಭಾವ ಎಲ್ಲರಿಗೂ ಮಾದರಿಯಾಗಿದೆ.ಶ್ರೀಮಠದ ಪ್ರತಿಯೊಂದು ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮದಲ್ಲಿ ಅವರು



ಸಕ್ರಿಯವಾಗಿ ಪಾಲ್ಗೊಂಡು ಬಸವ ಸಂದೇಶವನ್ನು ಜನಮಾನಸಕ್ಕೆ ತಲುಪಿಸಲು ಶ್ರಮಿಸಿದ್ದರು ಎಂದು ಹೇಳಿದರು.ಕಾರ್ಯಕ್ರಮದಲ್ಲಿ ಪೂಜ್ಯ ಸಿದ್ಧಬಸವ ಮಹಾಸ್ವಾಮಿಗಳು ಹಾಗೂ ಪೂಜ್ಯ ಶಿವಬಸವ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಪ್ರೊ. ಶಂಭುಲಿಂಗ ಕಾಮಣ್ಣ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಚಂದ್ರಕಾಂತ ಬಿರಾದಾರ ಹಾಗೂ ಪ್ರೊ. ಮಲ್ಲಮ್ಮ ಆರ್. ಪಾಟೀಲ ಭಾಗವಹಿಸಿದ್ದರು.ಭಾರತಿ ಪ್ರಭುದೇವ ಕುಂಬಾರ, ಶ್ರೀದೇವಿ ಕುಂಬಾರ ಸೇರಿದಂತೆ ಕುಟುಂಬದ ಸದಸ್ಯರು, ಶ್ರೀಮಠದ ಭಕ್ತರು ಹಾಗೂ ಬಸವಾಭಿಮಾನಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಶಿವಪ್ರಕಾಶ ಕುಂಬಾರ ಸ್ವಾಗತಿಸಿದರು. ಬಾಬು . ಬಿ.ಕಾರ್ಯಕ್ರಮ ನಿರೂಪಿಸಿದರು. ಪ್ರಜ್ವಲ್ ಶಿವಪ್ರಕಾಶ ಕುಂಬಾರ ವಚನ ಪ್ರಾರ್ಥನೆ ನೆರವೇರಿಸಿದರು.ಕಾರ್ಯಕ್ರಮದಲ್ಲಿ ಲಿಂಗೈಕ್ಯ ಮಹಾದೇವ ಕುಂಬಾರರ ಸಮಾಜಮುಖಿ ಸೇವೆ, ಬಸವತತ್ವದ ಪ್ರಸಾರಕ್ಕೆ ಸಲ್ಲಿಸಿದ ಕೊಡುಗೆ ಹಾಗೂ ಅವರ ಆದರ್ಶ ಜೀವನವನ್ನು ಸ್ಮರಿಸಿ ಭಾವಪೂರ್ಣ ನುಡಿ ನಮನ ಸಲ್ಲಿಸಲಾಯಿತು.

# ಮಳೆಗಾಗಿ ಜೋಳದ ರಾಶಿ ಗುಡ್ಡದಲ್ಲಿ ವಿಶೇಷ ಪೂಜೆ



• **ಮಲ್ಲಮ್ಮ ನುಡಿ ವಾರ್ತೆ ವಿಜಯನಗರ(ಹೊಸಪೇಟೆ)**

ಮಳೆಗಾಗಿ ವಿಶೇಷ ಪ್ರಾರ್ಥನೆ ಕರುನಾಡಕಲಿಗಳ ಕ್ರಿಯಾಶೀಲ ಸಮಿತಿ ವತಿಯಿಂದ ವಿಶೇಷ ಪೂಜೆಯನ್ನು ಮಾಡಿಸಲಾಯಿತು ಮುಂಗಾರು ಕೈಕೊಟ್ಟಿದ್ದರಿಂದ ಬರಗಾಲದ ವ್ಯಾಪಿಸಿದೆ ಕರ್ನಾಟಕದ ಹಲವು ಜಿಲ್ಲೆಗಳಲ್ಲಿ ಮಳೆ ಇಲ್ಲದ ಕಾರಣ ರೈತರು ಸಂಕಷ್ಟಕ್ಕೆ ಸಿಲುಕಿರುವ ಹಿನ್ನೆಲೆಯಲ್ಲಿ ಸ್ಥಳೀಯ ನಮ್ಮ ಸಂಘಟನೆಯಿಂದ ನಗರದ ಹೊರವಲಯದಲ್ಲಿ ಜೋಳದ ರಾಶಿ ಗುಡ್ಡದ ಮೇಲೆ ಭಾನುವಾರ ವಿಶೇಷ ಪೂಜೆಯನ್ನು ಸಲ್ಲಿಸಿ ಜೋಳದ ರಾಶಿ ಗುಡ್ಡದ ಮೇಲೆ ಗೊರವಪ್ಪರಿಂದ ಕಂಬಳಿ ಬೀಸಿ ಬಂಡಾರ ತೂರಿ ಡೊಳ್ಳು ಬಾರಿಸಿ ವಿಶೇಷ ಪೂಜೆ ಸಲ್ಲಿಸುವ ಮೂಲಕ ಮಳೆಗಾಗಿ ಪ್ರಾರ್ಥಿಸಿದರು ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿ ರೈತರು ಬದುಕು ಹಸನಾಗಲಿವೆಂದು ಮಳೆರಾಯನ ಮೊರೆ ಹೋದೆವು ಈ ಸಂದರ್ಭದಲ್ಲಿ ನಮ್ಮ ಕರ್ನಾಟಕದ ಕ್ರಿಯಾಶೀಲ ಸಮಿತಿಯ ಅಧ್ಯಕ್ಷ ಪಿ.ವೆಂಕಟೇಶ್. ಉಪಾಧ್ಯಕ್ಷ ಗುಜ್ಜಲ್ ಗಣೇಶ್.ಜಿ ನೀಲಕಂಠ.ಬಿ ಪಂಪಾಪತಿ ನಾಯಕ್.ಗುಂಡಿ ರಮೇಶ್. ಹನುಮಂತಪ್ಪ ಗಂಟೆ ಸೋಮಶೇಖರ್ ಪಾಂಡುರಂಗ ಭೋಜರಾಜ ಮಂಜುನಾಥ್ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಭಾಗವಹಿಸಿದ್ದರು.

## ಗುರು ಸಾನ್ನಿಧ್ಯವೆಂಬುವುದು ಸತ್ಯದ ಸಾಕ್ಷಾತ್ಕಾರ: ಹಾರಕೂಡ ಶ್ರೀ



• ಮಲ್ಲಮ್ಮ ನುಡಿ ವಾರ್ತೆಬಸವಕಲ್ಯಾಣ

ಮನುಷ್ಯ ಜೀವನದ ಸತ್ಯ ಸಾಕ್ಷಾತ್ಕಾರ ಗುರುವಿನ ಸಾನಿಧ್ಯದಿಂದ ಪ್ರಾಪ್ತವಾಗುತ್ತದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗುರುವಂದನೆ ಪ್ರಯುಕ್ತ ಆಯೋಜಿಸಿದ ಧರ್ಮ ಸಭೆಯ ದಿವ್ಯ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಸಮಾಜ ಸನ್ಮಾರ್ಗದಲ್ಲಿ ನಡೆಯಲು ಗುರು ಯಾವಾಗಲೂ ದೈವಿಕ ಬೆಳಕು ಹರಿಸುತ್ತಿರುತ್ತಾನೆ, ಇಂತಹ ಸದ್ಬೆಳಕಿನಲ್ಲಿ ಕ್ರಮಿಸಿದ ಸಮಾಜ ಶಾಂತಿ ಮತ್ತು ಸಮೃದ್ಧಿಯಿಂದ ಕೂಡಿರುತ್ತದೆ.

ಗುರು ಬೋಧನೆಯಿಂದ ಮನೋವಿಕಾರ ಮಾಯವಾಗಿ ಸದ್ಭಾವ ಅರಳುತ್ತದೆ. ಇದರಿಂದ ವೈಯಕ್ತಿಕ, ಕೌಟುಂಬಿಕ ಹಾಗೂ ಸಾಮಾಜಿಕ ಜೀವನದಲ್ಲಿ ಸಾಮರಸ್ಯ ಮೂಡಿ ಬದುಕಿನ ಧನ್ಯತೆ ಅನುಭವಿಸಲು ಸಾಧ್ಯವಾಗುತ್ತದೆ ಎಂದು ನುಡಿದ ಶ್ರೀಗಳು ಸರ್ವರಿಗೂ ಸನ್ಮಂಗಳವಾಗಲಿ ಎಂದು ಶುಭ ಹಾರೈಸಿದರು. ಈ ಸಂದರ್ಭದಲ್ಲಿ

ಶಿವಕುಮಾರ ದೇಶಮುಖ, ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಸಿದ್ರಾಮಪ್ಪ ಗುದಗೆ, ಬಸವರಾಜ ಪೂಜಾರಿ ತೆಲ್ಲೂರ, ಮಲ್ಲಯ್ಯ ಸ್ವಾಮಿ ಅಷ್ಟಗಿ, ಮಹಾದೇವ ಪೂಜಾರಿ, ಗುಂಡಯ್ಯ ಪೋಲೀಸ ಪಾಟೀಲ ಶಿವಶರಣಯ್ಯ ಕಂಬಳಿಮಠ, ಬಸವರಾಜ ಟೆಂಗಳಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಬಸವರಾಜ ಪೂಜಾರಿ ಸ್ವಾಗತಿಸಿದರು. ಕಾರ್ತಿಕ ಸ್ವಾಮಿ ಯಲಗುಂಡಿ, ಶರಣಪ್ಪ ಜಮಾದಾರ ಪ್ರಾರ್ಥನಾ ಗೀತೆ ಹಾಡಿದರು. ವಿಠಲ ಹೂಗಾರ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಹಾರಕೂಡ ಶ್ರೀಗಳ 1013ನೇ ತುಲಾಭಾರ ಜರುಗಿತು.

# ಮಲಹಳ್ಳಿ ಗ್ರಾಮದಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ತಕ್ಷಣ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾ ಪಂಚಾಯಿತಿ ಎದುರು ಗ್ರಾಮಸ್ಥರ ಉಗ್ರ ಧರಣಿ ಎಚ್ಚರಿಕೆ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು.13: ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವುದು ಸರ್ಕಾರದ ಮೊದಲ ಆದ್ಯತೆಯಾಗಿರಬೇಕು. ಆದರೆ ವಡಗೇರಿ ತಾಲೂಕಿನ ಮಲಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಜೀವನಾಡಿಯಾಗಿರುವ ಮುಖ್ಯ ವಾಲ್ ರಸ್ತೆ ಮಧ್ಯದಲ್ಲಿಯೇ ಉಳಿದು, ರಸ್ತೆ ಕಾಮಗಾರಿಯ ವೇಳೆ ಮಣ್ಣು ಮತ್ತು ಜಲ್ಲಿಯಿಂದ ಮುಚ್ಚಿಹೋಗುತ್ತಿರುವುದು ಗ್ರಾಮಸ್ಥರ ಆತಂಕಕ್ಕೆ ಕಾರಣವಾಗಿದೆ. ಜೀವ ಉಳಿಸುವ ಕುಡಿಯುವ ನೀರಿನ ವ್ಯವಸ್ಥೆಯೇ ಅಧಿಕಾರಿಗಳ ನಿರ್ಲಕ್ಷ್ಯದಿಂದ ಅಪಾಯದ ಅಂಚಿನಲ್ಲಿದೆ ಎಂಬ ಆರೋಪಗಳು ಕೇಳಿಬರುತ್ತಿವೆ.

ಗ್ರಾಮದಲ್ಲಿ ನಡೆಯುತ್ತಿರುವ ರಸ್ತೆ ಅಭಿವೃದ್ಧಿ ಕಾಮಗಾರಿ ವೇಳೆ ರಸ್ತೆಯ ಮಧ್ಯಭಾಗದಲ್ಲಿರುವ ಕುಡಿಯುವ ನೀರಿನ ವಾಲ್ವ್ ಅನ್ನು ಬೇರೆ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಬೇಕೆಂದು ಗ್ರಾಮಸ್ಥರು ಸಂಬಂಧಪಟ್ಟ ಅಧಿಕಾರಿಗಳು, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಸಿಬ್ಬಂದಿ ಹಾಗೂ ಗುತ್ತಿಗೆದಾರರ ಗಮನಕ್ಕೆ ಹಲವು ಬಾರಿ ತಂದಿದ್ದಾರೆ. ಆದರೆ ಯಾರೊಬ್ಬರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸದ ಪರಿಣಾಮ ಇಂದು ವಾಲ್ ಸಂಪೂರ್ಣ ಮಣ್ಣಿನಡಿ ಹೂತುಹೋಗುವ ಸ್ಥಿತಿ ನಿರ್ಮಾಣವಾಗಿದೆ.

ಸ್ಥಳೀಯರ ಪ್ರಕಾರ, ಈ ವಾಲ್ ಮೂಲಕವೇ ಗ್ರಾಮದ ಹಲವು ಮನೆಗಳಿಗೆ ಕುಡಿಯುವ ನೀರು ಸರಬರಾಜಾಗುತ್ತಿದೆ. ಮುಂದೆ ಯಾವುದೇ ತಾಂತ್ರಿಕ ದೋಷ ಉಂಟಾದರೆ ಅಥವಾ ಪೈಪ್ ಒಡೆದರೆ, ರಸ್ತೆ ಅಗೆದು ದುರಸ್ತಿ ಮಾಡಬೇಕಾದ ಪರಿಸ್ಥಿತಿ ಎದುರಾಗಲಿದೆ. ಇದರಿಂದ ಸಾರ್ವಜನಿಕರಿಗೂ, ಸರ್ಕಾರಕ್ಕೂ ಹೆಚ್ಚುವರಿ ವೆಚ್ಚವಾಗುವುದರ ಜೊತೆಗೆ ಗ್ರಾಮಸ್ಥರು ಹಲವು ದಿನಗಳ



ಕಾಲ ಕುಡಿಯುವ ನೀರಿಲ್ಲದೆ ಪರದಾಡುವ ಅಪಾಯವಿದೆ.

ಗ್ರಾಮಸ್ಥರು ಹೇಳುವಂತೆ, "ನಮ್ಮ ಬೇಡಿಕೆ ದೊಡ್ಡದಲ್ಲ. ರಸ್ತೆಯ ಮಧ್ಯದಲ್ಲಿರುವ ವಾಲ್ ಅನ್ನು ಕೆಲವೇ ಅಡಿ ದೂರ ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿದರೆ ಸಾಕು. ಆದರೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸರಳವಾದ ಕೆಲಸವೂ ಆಗುತ್ತಿಲ್ಲ. ಕಾಮಗಾರಿ ನಡೆಯುವಾಗಲೇ ಮುನ್ನೆಚ್ಚರಿಕೆ ವಹಿಸಿದ್ದರೆ ಇಂದು ಈ ಪರಿಸ್ಥಿತಿ ಬರುತ್ತಿರಲಿಲ್ಲ" ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಪೋಟೋದಲ್ಲಿ ಕಾಣುವಂತೆ, ಒಬ್ಬ ವ್ಯಕ್ತಿ ಮಣ್ಣಿನೊಳಗೆ ಇಳಿದು ವಾಲ್ ಹುಡುಕಬೇಕಾದ ಸ್ಥಿತಿ ನಿರ್ಮಾಣವಾಗಿರುವುದು ಸಮಸ್ಯೆಯ ಗಂಭೀರತೆಯನ್ನು ಬಿಂಬಿಸುತ್ತಿದೆ. ಸಾರ್ವಜನಿಕರ ಮೂಲಭೂತ ಸೌಲಭ್ಯಗಳ ಬಗ್ಗೆ ಅಧಿಕಾರಿಗಳ ನಿರ್ಲಕ್ಷ್ಯ ಎಷ್ಟರ ಮಟ್ಟಿಗೆ ಇದೆ ಎಂಬುದಕ್ಕೆ ಇದೇ ಸಾಕ್ಷಿಯಾಗಿದೆ ಎಂದು ಗ್ರಾಮಸ್ಥರು ಬೇಸರ ವ್ಯಕ್ತಪಡಿಸಿದ್ದಾರೆ.

### ಜಿಲ್ಲಾ ಪಂಚಾಯಿತಿ ಸಿಇಒ ಮಧ್ಯಪ್ರವೇಶಿಸಬೇಕು;

ಈ ವಿಷಯವನ್ನು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (CEO) ಹಾಗೂ ಸಂಬಂಧಪಟ್ಟ ಇಲಾಖೆಯ ಹಿರಿಯ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ ಸ್ಥಳ ಪರಿಶೀಲನೆ ನಡೆಸಬೇಕು. ರಸ್ತೆ ಕಾಮಗಾರಿ ಪೂರ್ಣಗೊಳ್ಳುವ ಮೊದಲು ವಾಲ್ವ್ ಅನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಿ, ಗ್ರಾಮದಲ್ಲಿ ಕುಡಿಯುವ ನೀರಿನ ಪೂರೈಕೆ ನಿರಂತರವಾಗಿ ನಡೆಯುವಂತೆ ಶಾಶ್ವತ ಪರಿಹಾರ ಕಲ್ಪಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸಮಸ್ಯೆಯನ್ನು ತಕ್ಷಣ ಪರಿಹರಿಸದಿದ್ದರೆ ಮಲಹಳ್ಳಿ ಗ್ರಾಮಸ್ಥರೆಲ್ಲರೂ ಒಗ್ಗೂಡಿ ಜಿಲ್ಲಾ ಪಂಚಾಯಿತಿ ಕಚೇರಿ ಎದುರು ಧರಣಿ ಸತ್ಯಾಗ್ರಹ ನಡೆಸುವುದಾಗಿ ಎಚ್ಚರಿಕೆ ನೀಡಿದ್ದಾರೆ. ಕುಡಿಯುವ ನೀರು ನಮ್ಮ ಹಕ್ಕು, ಅಧಿಕಾರಿಗಳ ನಿರ್ಲಕ್ಷ್ಯದಿಂದ ಆ ಹಕ್ಕು ಕಸಿದುಕೊಳ್ಳಲು ಬಿಡುವುದಿಲ್ಲ" ಎಂದು ಗ್ರಾಮಸ್ಥರು ಸರ್ಕಾರಕ್ಕೆ ಸ್ಪಷ್ಟ ಸಂದೇಶ ರವಾನಿಸಿದ್ದಾರೆ.

# ಅಮಾವಾಸ್ಯೆ ಅಂಗವಾಗಿ ಮಣ್ಣಿನ ಎತ್ತುಗಳಿಗೆ ಭಾರಿ ಬೇಡಿಕೆ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ತಾಲೂಕಿನ ಬಲಶೆಟ್ಟಿಹಾಳ ಗ್ರಾಮದಲ್ಲಿ ಅಮಾವಾಸ್ಯೆ ಅಂಗವಾಗಿ ಮಣ್ಣಿನ ಎತ್ತುಗಳಿಗೆ ಭಾರಿ ಬೇಡಿಕೆ ಕಂಡುಬಂದಿದೆ. ಗ್ರಾಮದ ಭೀಮಣ್ಣ ವೀರಭದ್ರಪ್ಪ ಕುಂಬಾರ್ ಅವರ ಮನೆತನವು ಅಜ್ಜ–ಮುತ್ತಾತರ ಕಾಲದಿಂದಲೂ ಮಣ್ಣಿನ ಎತ್ತುಗಳನ್ನು ತಯಾರಿಸುವ ಪಾರಂಪರಿಕ ಕಸುಬನ್ನು ಮುಂದುವರಿಸಿಕೊಂಡು ಬಂದಿದೆ. ಕೃಷಿ ಚಟುವಟಿಕೆಗಳು ಆರಂಭವಾಗುವ ಸಂದರ್ಭದಲ್ಲಿ, ವಿಶೇಷವಾಗಿ ಮಂಗಳವಾರದ ಅಮಾವಾಸ್ಯೆಯಂದು ರೈತರು ಮಣ್ಣಿನ ಎತ್ತುಗಳನ್ನು ಖರೀದಿಸಿ ಪೂಜೆ ಸಲ್ಲಿಸುವ ಸಂಪ್ರದಾಯ ಇಂದಿಗೂ ಜೀವಂತವಾಗಿದೆ. ಕೃಷಿಯಲ್ಲಿ ಸಮೃದ್ಧಿ, ಉತ್ತಮ ಬೆಳೆ ಹಾಗೂ ಶುಭವಾಗಲಿ ಎಂಬ ನಂಬಿಕೆಯಿಂದ ರೈತರು ಈ ಮಣ್ಣಿನ ಎತ್ತುಗಳನ್ನು ಮನೆಗೆ ಕೊಂಡೊಯ್ಯುತ್ತಾರೆ. ಈ ವರ್ಷವೂ ವಿವಿಧ ಗಾತ್ರದ ಮಣ್ಣಿನ ಎತ್ತುಗಳ ಜೋಡಿಗಳು ?50ರಿಂದ ?400ರವರೆಗೆ ಮಾರಾಟವಾಗುತ್ತಿದ್ದು, ರೈತರು ಹಾಗೂ ಸಾರ್ವಜನಿಕರಿಂದ ಉತ್ತಮ ಸ್ಪಂದನೆ ಆಧುನಿಕತೆಯ ನಡುವೆಯೂ ಕುಂಬಾರಿಕೆ ಕಲೆಯನ್ನು ಉಳಿಸಿಕೊಂಡು ಗ್ರಾಮೀಣ ಸಂಸ್ಕೃತಿ ಮತ್ತು ಕೃಷಿ





ಪರಂಪರೆಯನ್ನು ಜೀವಂತವಾಗಿರಿಸಿರುವ ಭೀಮಣ್ಣ ವೀರಭದ್ರಪ್ಪ ಕುಂಬಾರ್ ಅವರ ಕುಟುಂಬದ ಈ ಪಾರಂಪರಿಕ ಕಸುಬು ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ.

# ಪರಿಸರವೇ ಪರಮಾತ್ಮ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ: ನ್ಯಾಯಾಧೀಶ ಮರಿಯಪ್ಪ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಜು 13: ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಆದ್ಯ ಕರ್ತವ್ಯವಾಗಿದ್ದು, ನಾವು ಇಂದು ನೆಡುವ ಪ್ರತಿಯೊಂದು ಸಸಿಯೂ ಮುಂದಿನ ಪೀಳಿಗೆಗೆ ನೀಡುವ ಅಮೂಲ್ಯ ಕೊಡುಗೆಯಾಗಿದೆ ಎಂದು ಯಾದಗಿರಿ ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀ ಮರಿಯಪ್ಪ ಅವರು ಹೇಳಿದರು.

ಯಾದಗಿರಿ ತಾಲೂಕಿನ ಯಾರಗೊಳ ಗ್ರಾಮದದಲ್ಲಿ ವಿಜಯ ವಿಠ್ಠಲ ಸೇವಾ ಸಂಸ್ಥೆ, ಶಶಿ ಚಾರಿಟೇಬಲ್ ಮತ್ತು ಎಜುಕೇಷನಲ್ ಟ್ರಸ್ಟ್, ಯಾದಗಿರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯಾದಗಿರಿ ಹಾಗೂ ಗುರುರಾಜ ಯುವಕ ಮಂಡಳಿ, ಯಾದಗಿರಿ ಇವರ ಸಂಯುಕ್ತ ಆಶ್ರಯದಲ್ಲಿ "ಪರಿಸರವೇ ಪರಮಾತ್ಮ" ಕಾರ್ಯಕ್ರಮದಡಿ ಯರಗೊಳ ಗ್ರಾಮದ ಟೀಕಾರಾಯರ ಮಠದ ಗುಡ್ಡದ ಪ್ರದೇಶದಲ್ಲಿ ಆಯೋಜಿಸಿದ್ದ ಬೃಹತ್ ಸಸಿ ನೆಡುವ ಕಾರ್ಯಕ್ರಮಕ್ಕೆ ಸಸಿಗೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಪ್ರಕೃತಿಯೇ ನಮ್ಮ ಜೀವನಾಡಿಯಾಗಿದ್ದು, ಪರಿಸರವನ್ನು ಕಾಪಾಡುವುದು ಪ್ರತಿಯೊಬ್ಬರ ಸಾಮಾಜಿಕ ಮತ್ತು ನೈತಿಕ ಹೊಣೆಗಾರಿಕೆಯಾಗಿದೆ. ಅರಣ್ಯ ನಾಶ, ಹವಾಮಾನ ವೈಪರೀತ್ಯ, ನೀರಿನ ಅಭಾವ ಹಾಗೂ ಪರಿಸರ ಮಾಲಿನ್ಯದಂತಹ ಸಮಸ್ಯೆಗಳನ್ನು ತಡೆಯಲು ಹೆಚ್ಚಿನ ಸಂಖ್ಯೆಯಲ್ಲಿ ಸಸಿ ನೆಟ್ಟು ಅವುಗಳನ್ನು ಪೋಷಿಸುವುದು ಅತ್ಯಗತ್ಯವಾಗಿದೆ ಎಂದು ತಿಳಿಸಿದರು.



ಮರಗಳು ಕೇವಲ ನೆರಳು ಅಥವಾ ಫಲ ನೀಡುವುದಷ್ಟೇ ಅಲ್ಲ, ಜೀವವಾಯು, ಮಳೆ, ಜೀವ ವೈವಿಧ್ಯ ಮತ್ತು ಪರಿಸರ ಸಮತೋಲನವನ್ನು ಕಾಪಾಡುವಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ಆದ್ದರಿಂದ ಪ್ರತಿಯೊಬ್ಬರೂ ವರ್ಷಕ್ಕೊಮ್ಮೆ ಕನಿಷ್ಠ ಒಂದು ಸಸಿಯಾದರೂ ನೆಟ್ಟು ಅದನ್ನು ಮರವಾಗುವವರೆಗೆ ಪೋಷಿಸುವ ಸಂಕಲ್ಪ ಮಾಡಬೇಕು ಎಂದು ಕರೆ ನೀಡಿದರು.

"ಪರಿಸರವೇ ಪರಮಾತ್ಮ" ಕಾರ್ಯಕ್ರಮದಡಿ ನೂರಾರು ಸಸಿಗಳನ್ನು ನೆಡುವ ಕಾರ್ಯ ಕೈಗೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರೂ ಪರಿಸರ ಸಂರಕ್ಷಣೆ, ಪ್ರಾಣಿ–ಪಕ್ಷಿಗಳ ಆಶ್ರಯ ರಕ್ಷಣೆ, ಜಲ ಸಂರಕ್ಷಣೆ ಹಾಗೂ ಹಸಿರು ಪರಿಸರ ನಿರ್ಮಾಣದ ಬಗ್ಗೆ ಜಾಗೃತಿ ಮೂಡಿಸಿ, ಸಸಿ ನೆಟ್ಟು ಅವುಗಳನ್ನು ಪೋಷಿಸುವ ಪ್ರತಿಜ್ಞೆ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ವಿವಿಧ ಸಂಘ–ಸಂಸ್ಥೆಗಳ ಪದಾಧಿಕಾರಿಗಳು, ಪರಿಸರ ಪ್ರೇಮಿಗಳು, ಗ್ರಾಮಸ್ಥರು, ಯುವಕರು ಹಾಗೂ ಸಾರ್ವಜನಿಕರು ಉತ್ಸಾಹದಿಂದ ಪಾಲ್ಗೊಂಡು ಸಸಿ ನೆಡುವ ಮೂಲಕ ಪರಿಸರ ಸಂರಕ್ಷಣೆ–ಯ ಸಂದೇಶ ಸಾರಿದರು. ಟೀಕಾರಾಯರ ಮಠದ ಗುಡ್ಡದ ಪ್ರದೇಶವನ್ನು ಮುಂದಿನ ದಿನಗಳಲ್ಲಿ ಹಸಿರು ವನವಾಗಿ ರೂಪಿಸುವ ಸಂಕಲ್ಪವನ್ನು ಈ ಸಂದರ್ಭದಲ್ಲಿ ಕೈಗೊಳ್ಳಲಾಯಿತು. ಈ ಕಾರ್ಯಕ್ರಮವನ್ನು ವಿಜಯ ವಿಠ್ಠಲ ಸೇವಾ ಸಂಸ್ಥೆ, ಶಶಿ ಚಾರಿಟೇಬಲ್ ಮತ್ತು ಎಜುಕೇಷನಲ್ ಟ್ರಸ್ಟ್, ಯಾದಗಿರಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಯಾದಗಿರಿ ಹಾಗೂ ಗುರುರಾಜ ಯುವಕ ಮಂಡಳಿ, ಯಾದಗಿರಿ ಇವರ ಸಂಯುಕ್ತ ಆಶ್ರಯದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.

# ತೊಗರಿ ಬೆಳೆಯ ಸಂರಕ್ಷಣೆಗೆ ರೈತರ ಸಾಹಸ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಿಂದ ಸಲಹೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪ್ರಸ್ತುತ ಮಳೆ ಕೊರತೆಯಿಂದಾಗಿ ತೊಗರಿ ಬೆಳೆಯ ಸಂರಕ್ಷಣೆಗೆ ರೈತರು ಸಾಹಸ ಪಡುತ್ತಿರುವ ಬಗ್ಗೆ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಸದಸ್ಯರು ಹಾಗೂ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳು ವಿವಿಧ ಕ್ಷೇತ್ರಗಳಿಗೆ ಭೇಟಿ ನೀಡಿ, ಕೆಲ ಸಲಹೆಗಳನ್ನು ನೀಡಿದ್ದಾರೆ.

ತಳಕಲ್ ಗ್ರಾಮದಲ್ಲಿ ರೈತರು ತಮ್ಮ ತೊಗರಿ ಬೆಳೆಯನ್ನು ಕಾಪಾಡಿಕೊಳ್ಳಲು ಟ್ಯಾಂಕರ್ ಮೂಲಕ ನೀರು ಪೂರೈಸುತ್ತಿರುವುದು ಪರಿಶೀಲಿಸಿದಾಗ ತಳಕಲ್ ಗ್ರಾಮದ ರೈತರಾದ ನೀಲನಗೌಡ್ರು ಅವರು, ಎರಡು ಟ್ಯಾಂಕರ್‌ಗಳ ಮೂಲಕ ತೊಗರಿ ಬೆಳೆಗೆ ನೀರು ಹಾಯಿಸುತ್ತಿದ್ದು, ಒಂದು ಎಕರೆಗೆ ನಾಲ್ಕರಿಂದ ಐದು ಟ್ಯಾಂಕರ್ ನೀರು ಬೇಕಾಗುತ್ತದೆ. ಇದ್ದಕ್ಕಾಗಿ ಖರ್ಚು ಬರುತ್ತಿದ್ದು, ಶತಾಯಗತಾಯ ಬರ ಪರಿಸ್ಥಿತಿಯಲ್ಲಿ ಬೆಳೆಯನ್ನು ಕಾಪಾಡಿಕೊಳ್ಳಲು ಪ್ರಯತ್ನಿಸುತ್ತಿದ್ದೇನೆ ಎಂದು ತಿಳಿಸಿರುತ್ತಾರೆ.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಮಂಡಳಿ ಸದಸ್ಯರಾದ ತಿಮ್ಮಣ್ಣ ಚೌಡಿ ಅವರು ಮಾತನಾಡಿ, ಪ್ರಸ್ತುತ ಮಳೆ ಇಲ್ಲದೆ ರೈತರು ಆತಂಕದಲ್ಲಿ ಸಿಲುಕಿದ್ದಾರೆ. ಹೇಗಾದರೂ ಮಾಡಿ ಬೆಳೆಯನ್ನು ಉಳಿಸಿಕೊಳ್ಳುವ ಪ್ರಯತ್ನದಲ್ಲಿ ರೈತರು ಟ್ಯಾಂಕರ್ ಮೂಲಕ ನೀರು ಹಾಯಿಸುವುದು ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ.


ಕೊಪ್ಪಳ ಕೃಷಿ ವಿಸ್ತಾರಣ ಶಿಕ್ಷಣ ಕೇಂದ್ರದ ಮುಖ್ಯಸ್ಥರಾದ ಡಾ. ಬದರಿ ಪ್ರಸಾದ್ ಅವರು ಮತನಾಡಿ, ರೈತರ ಪ್ರಯತ್ನವನ್ನು ಗಮನಿಸಿ ಮಸಾರಿಭೂಮಿಯಲ್ಲಿ ಸಾವಯವಗೊಬ್ಬರವು ಮಹತ್ವದ ಪಾತ್ರ ವಹಿಸುತ್ತದೆ. ಆದ್ದರಿಂದ ರೈತರು ಹೆಚ್ಚು ಸಗಣಿಗೊಬ್ಬರ ಅಥವಾ ಎರೆಗೊಬ್ಬರವನ್ನು ಬಳಸಬೇಕು ಮತ್ತು ಬೆಳೆಯನ್ನು ಮುಚ್ಚಿಗೆಯಾಗಿ ಬಳಸಿದರೆ ತೇವಾಂಶ ಸಂರಕ್ಷಣೆಯಾಗುತ್ತದೆಂದು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ರೈತರು ಹೆಚ್ಚಿನ ಮಾಹಿತಿಗಾಗಿ ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಜ್ಞಾನಿಗಳನ್ನು (ಡಾ. ಬದರಿ ಪ್ರಸಾದ ಪಿ.ಆರ್., ವಿಸ್ತರಣಾ ಮುಂದಾಳು, ಮೊ.ನಂ: 9900145705) ಸಂಪರ್ಕಿಸಬಹುದು.

# ಮಳೆ ಅಭಾವ:ಮೋಡ ಬಿತ್ತನೆಗೆ ರೈತ ಸಮುದಾಯ ಆಗ್ರಹ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು

ಜು.13. ರಾಜ್ಯದಲ್ಲಿ ಮುಂಗಾರು ಮಳೆ ಸಂಪೂರ್ಣ ಕೈಕೊಟ್ಟಿರುವ ಪರಿಣಾಮ, ಸಿಂಧನೂರು ತಾಲೂಕಿನಾದ್ಯಂತ ರೈತರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಮಳೆಯನ್ನೇ ನಂಬಿ ಸಾವಿರಾರು ರೂಪಾಯಿ ಬಂಡವಾಳ ಹೂಡಿ ಬಿತ್ತನೆ ಮಾಡಿದ್ದ ಬೆಳೆಗಳು ನೀರಿಲ್ಲದೆ ಬಾಡಿ ಒಣಗುತ್ತಿದ್ದು, ರೈತ ಸಮುದಾಯ ಕಣ್ಣೀರಿನಲ್ಲಿ ಕೈತೊಳೆಯುವಂತಾಗಿದೆ. ತಾಲೂಕಿನಾದ್ಯಂತ ರೈತರು ಸೂರ್ಯಕಾಂತಿ, ತೊಗರಿ, ಹತ್ತಿ, ಜೋಳ, ಸಜ್ಜೆ, ಗುರೆಳ್ಳು ಹಾಗೂ ಮೆಕ್ಕೆಜೋಳದ ಬೆಳೆಗಳನ್ನು ನಂಬಿ ಬಿತ್ತನೆ ಮಾಡಿದ್ದರು. ಆದರೆ, ಸಕಾಲಕ್ಕೆ ಮಳೆಯಾಗದ ಕಾರಣ ಬೆಳೆಗಳು ಕಣ್ಣೆದುರೇ ಒಣಗುತ್ತಿವೆ. "ಬಿತ್ತಿದ ಬೆಳೆ ಕಣ್ಣೆದುರೇ ಸಾಯುತ್ತಿರುವುದನ್ನು ನೋಡಿದರೆ ಹೊಟ್ಟೆಯಲ್ಲಿ ಬೆಂಕಿ ಬಿದ್ದಂತಾಗುತ್ತದೆ. ಸಾಲ ಮಾಡಿ ಬೆಳೆದ ಬೆಳೆ ಕೈಗೆ ಬಾರದಿದ್ದರೆ ಮುಂದಿನ ಬದುಕು ಹೇಗೆ?" ಎಂದು ರೈತರು ತಮ್ಮ ಅಳಲನ್ನು ತೋಡಿಕೊಳ್ಳುತ್ತಿದ್ದಾರೆ. ಈ ಕುರಿತು ಶಾಸಕ ಹಂಪನಗೌಡ ಬಾದರ್ಲಿ ಅವರು ಈಗಾಗಲೇ ಸರ್ಕಾರಕ್ಕೆ ಮನವಿ ಸಲ್ಲಿಸಿ, ತಾಲೂಕನ್ನು ಬರಪೀಡಿತ ಪ್ರದೇಶವೆಂದು ಘೋಷಿಸುವಂತೆ ಒತ್ತಾಯಿಸಿದ್ದಾರೆ. ಶಾಸಕರ ಈ ಕ್ರಮವನ್ನು ಸ್ವಾಗತಿಸಿರುವ ರೈತ ಸಮುದಾಯ, ಅದರ ಜೊತೆಗೇ ತಕ್ಷಣದ ಪರಿಹಾರವಾಗಿ ಮೋಡ ಬಿತ್ತನೆ ಕಾರ್ಯವನ್ನು ತುರ್ತಾಗಿ ಕೈಗೆತ್ತಿಕೊಳ್ಳಬೇಕೆಂದು ಬಲವಾಗಿ ಕೇಳಿ ಬರುತ್ತಿದೆ. ಪ್ರಕೃತಿಯ ಮುನಿಸಿನಿಂದ ಸಂಕಷ್ಟಕ್ಕೆ ಸಿಲುಕಿರುವ ಅನ್ನದಾತರು, ಇದೀಗ ಮೋಡ ಬಿತ್ತನೆ ಮೂಲಕ ಕೃತಕ ಮಳೆ




ಈಗಾಗಲೇ ರಾಜ್ಯದ ಇತರೆ ಜಿಲ್ಲೆಗಳಲ್ಲಿ ಮೋಡ ಬಿತ್ತನೆ ಪ್ರಕ್ರಿಯೆ ನಡೆಯುತ್ತಿದ್ದು, ಅದೇ ರೀತಿಯಲ್ಲಿ ನಮ್ಮ ತಾಲೂಕಿನಲ್ಲೂ ಮೋಡ ಬಿತ್ತನೆ ಕಾರ್ಯವನ್ನು ಕೈಗೊಳ್ಳಬೇಕು. ಇದಕ್ಕಾಗಿ ಸ್ಥಳೀಯ ಶಾಸಕರು ವಿಶೇಷ ಆಸಕ್ತಿ ವಹಿಸಿ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸುತ್ತೇನೆ.
– ಕೆ. ಕರಿಯಪ್ಪ, ಬಿಜೆಪಿ ಮುಖಂಡರು.

ಸುರಿಸಬೇಕೆಂದು ಸರ್ಕಾರದ ಮೇಲೆ ಒತ್ತಡ ಹೇರುತ್ತಿದ್ದಾರೆ.

ಮೋಡ ಬಿತ್ತನೆಯು ವೈಜ್ಞಾನಿಕ ಪ್ರಕ್ರಿಯೆಯಾಗಿದ್ದು, ಇದರಲ್ಲಿ ವಿಮಾನಗಳ ಮೂಲಕ ಮೋಡಗಳಿಗೆ ಸಿಲ್ವರ್ ಅಯೋಡೈಡ್ ಅಥವಾ ಪೊಟ್ಯಾಸಿಯಮ್ ಅಯೋಡೈಡ್‌ನಂತಹ ರಾಸಾಯನಿಕಗಳನ್ನು

ಮೋಡ ಬಿತ್ತನೆಯ ಮೂಲಕ ಕೃತಕ ಮಳೆ ಸುರಿಸುವ ನಿಟ್ಟಿನಲ್ಲಿ ಸರ್ಕಾರ ತಕ್ಷಣ ಕ್ರಮ ಕೈಗೊಂಡು, ಸಂಕಷ್ಟದಲ್ಲಿರುವ ರೈತರಿಗೆ ಆಸರೆಯಾಗಬೇಕು.
– ರವಿಗೌಡ ಮಲ್ಲದಗುಡ್ಡ, ರೈತ ಮುಖಂಡರು.

ಸಿಂಪಡಿಸಲಾಗುತ್ತದೆ. ಇದು ಮೋಡಗಳಲ್ಲಿನ ತೇವಾಂಶವನ್ನು ಸಾಂದ್ರೀಕರಿಸಿ ಮಳೆಯಾಗುವಂತೆ ಪ್ರೇರೇಪಿಸುತ್ತದೆ. ಮಳೆ ಕೊರತೆಯಿರುವ ಸಂದರ್ಭದಲ್ಲಿ ಬೆಳೆಗಳನ್ನು ಉಳಿಸಿಕೊಳ್ಳಲು ಇದು ಅತ್ಯಂತ ಪರಿಣಾಮಕಾರಿ ತಾತ್ಕಾಲಿಕ ಕ್ರಮವಾಗಿದೆ.

ರಾಜ್ಯದ ಇತರೆ ಕಡೆಗಳಲ್ಲಿ ಯಶಸ್ವಿಯಾಗಿರುವ ಈ ಪದ್ಧತಿಯನ್ನು ಸಿಂಧನೂರಿನಲ್ಲೂ ಜಾರಿಗೆ ತರುವ ಮೂಲಕ ಕೃಷಿ ಚಟುವಟಿಕೆಗೆ ಮರುಜೀವ ನೀಡಬೇಕೆಂದು ಗ್ರಾಮೀಣ ಭಾಗದಲ್ಲಿ ದನಿ ಹೆಚ್ಚಾಗಿದೆ.

ಬಿತ್ತನೆಗಾಗಿ ಈಗಾಗಲೇ ಖರ್ಚು ಮಾಡಿರುವ ಸಾವಿರಾರು ರೂಪಾಯಿಗಳ ನಷ್ಟದ ಭೀತಿಯಲ್ಲಿರುವ ರೈತರು, ಸರ್ಕಾರ ಕೂಡಲೇ ಎಚ್ಚೆತ್ತುಕೊಂಡು ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ತೀವ್ರ ಆರ್ಥಿಕ ಬಿಕ್ಕಟ್ಟನ್ನು ಎದುರಿಸಬೇಕಾಗುತ್ತದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ. ಜಿಲ್ಲಾಡಳಿತ ಮತ್ತು ರಾಜ್ಯ ಸರ್ಕಾರ ಈ ಕೂಡಲೇ ರೈತರ ಸಂಕಷ್ಟಕ್ಕೆ ಸ್ಪಂದಿಸಬೇಕೆಂದು ಸಾರ್ವಜನಿಕ ವಲಯದಲ್ಲಿ ಒತ್ತಾಯ ವ್ಯಕ್ತವಾಗಿದೆ.

## ನಿಧನ ವಾರ್ತೆ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಪಟ್ಟಣದ ನಿವಾಸಿ ಹಾಗೂ ಮಾಜಿ ನ್ಯಾಯಬೆಲೆ ಅಂಗಡಿಗಳ ಸಂಘದ ಅಧ್ಯಕ್ಷರಾದ ಶ್ರೀ ಆನಂದ ಢಗೆ (57) ಅವರು ಭಾನುವಾರ (ಜುಲೈ 12) ರಾತ್ರಿ ಅನಾರೋಗ್ಯದಿಂದ ನಿಧನ ಹೊಂದಿದರು. ಅವರು ಪತ್ನಿ, ಮೂವರು ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗ ಹಾಗೂ ಸ್ನೇಹಿತರನ್ನು ಅಗಲಿದ್ದಾರೆ. ಅವರ ನಿಧನದ ಸುದ್ದಿ ತಿಳಿಯುತ್ತಿದ್ದಂತೆ ಕುಟುಂಬಸ್ಥರು, ಸ್ನೇಹಿತರು, ಸಾರ್ವಜನಿಕರು ಹಾಗೂ ವಿವಿಧ ಸಂಘ–ಸಂಸ್ಥೆಗಳ ಮುಖಂಡರು ತೀವ್ರ ಸಂತಾಪ ವ್ಯಕ್ತಪಡಿಸಿದರು.

ದಿವಂಗತ ಶ್ರೀ ಆನಂದ ಢಗೆ ಅವರ ಅಂತ್ಯಕ್ರಿಯೆಯು ಸೋಮವಾರ ಗುರುಮಠಕಲ್‌ನಲ್ಲಿ ಕುಟುಂಬಸ್ಥರು, ಬಂಧು–ಬಳಗ, ಸ್ನೇಹಿತರು ಹಾಗೂ ಗಣ್ಯರ ಸಮ್ಮುಖದಲ್ಲಿ ನೆರವೇರಿತು.

# ರೈತರಿಗೆ ಸರಿಯಾಗಿ ವಿದ್ಯುತ್, ನೀರು, ಬೆಳೆದ ಬೆಳೆಗೆ ನಿಗದಿತ ಬೆಲೆ ನೀಡಿದರೆ ನಾವೇ ಸರಕಾರಕ್ಕೆ ಸಾಲ ನೀಡುತ್ತೇವೆ : ಬಸವರಾಜ್

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ

ಜು. 13.– ದೇಶದ ರೈತರಿಗೆ ಬರೀ ಸುಳ್ಳು ಆಶ್ವಾಸನೆಗಳನ್ನು ನೀಡುತ್ತಾ ರೈತನೇ ಈ ದೇಶದ ಬೆನ್ನೆಲುಬು ಎಂದು ಭಾಷಣ ಬಿಗಿಯುತ್ತ ಮೊಸಳೆ ಕಣ್ಣೀರ ಹಾಕುವ ಸರ್ಕಾರಗಳಿಗೆ ನಿಜವಾಗಿಯೂ ರೈತನ ಮೇಲೆ ಕಾಳಜಿ ಇದ್ದರೆ ಸಮರ್ಪಕವಾಗಿ ವಿದ್ಯುತ್, ನೀರು, ರೈತ ಬೆಳೆದ ಬೆಳೆಗಳಿಗೆ ನಿಗದಿತ ಬೆಲೆ ನೀಡಿದರೆ ರೈತರೇ ಸರ್ಕಾರಕ್ಕೆ ಸಾಲ ನೀಡುತ್ತೇವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಸಿರು ಸೇನೆಯ ರಾಜ್ಯ ಪ್ರಧಾನ ಕಾರ್ಯದರ್ಶಿ ಬಸವರಾಜ್ ಗುಡಿಹಾಳ ಹೇಳಿದರು. ಅವರು ತಾಲೂಕಿನ ಗುಡದನಾಳ ಗ್ರಾಮದಲ್ಲಿ ರೈತ ಸಂಘಟನೆಯ ಗ್ರಾಮ ಘಟಕವನ್ನು ಉದ್ಘಾಟಿಸಿ ಮಾತನಾಡುತ್ತಾ ಸರಕಾರಗಳು ನೀಡುವ ಆಶ್ವಾಸನೆಗಳಿಂದ ರೈತ ಉದ್ಧಾರವಾಗಲು ಸಾಧ್ಯವಿಲ್ಲ. ರೈತರ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸರಕಾರಗಳು ಪ್ರಮಾಣಿಕ ಪ್ರಯತ್ನ ಮಾಡಬೇಕಾಗಿದೆ. ರೈತರು ಒಗ್ಗಟ್ಟಿನಿಂದ ಹೋರಾಟ ಮಾಡದೆ ಹೋದರೆ ಮುಂದಿನ ದಿನಗಳಲ್ಲಿ ರೈತನ ಸ್ಥಿತಿ ಚಿಂತಾ ಜನಕವಾಗಲಿದೆ. ಪ್ರತಿಯೊಬ್ಬ ರೈತರು ಒಗ್ಗಟ್ಟಿನಿಂದ



ಹೋರಾಟ ಮಾಡಿದಾಗ ಮಾತ್ರ ಸರಕಾರ ಹಾಗೂ ಜನಪ್ರತಿನಿಧಿಗಳು ರೈತರತ್ತ ನೋಡಲು ಸಾಧ್ಯವಾಗುತ್ತಿದೆ ಎಂದು ಹೇಳಿದರು. ರೈತ ಸಂಘಟನೆಯ ಜಿಲ್ಲಾಧ್ಯಕ್ಷ ಶಿವಪುತ್ರಗೌಡ ನಂದಿಹಾಳ ಮಾತನಾಡಿ ಸಂಕಷ್ಟದ ಬದುಕು ಸಾಗಿಸುತ್ತಿರುವ ರೈತ ದುಬಾರಿ ವೆಚ್ಚದಲ್ಲಿ ಗೊಬ್ಬರ ಬೀಜಗಳನ್ನು ಖರೀದಿಸಿ ಭೂತಾಯಿಯ ಒಡಲಿಗೆ ಹಾಕಿದರೂ ಸಹ ಮಳೆಯ ಅಭಾವದಿಂದಾಗಿ ರೈತ ಸಂಕಷ್ಟದಲ್ಲಿ ಜೀವನ ಸಾಗಿಸುವ ಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ಕೂಡಲೇ ಬರಗಾಲ ಪ್ರದೇಶವೊಂದು ಘೋಷಣೆ ಮಾಡಿ ಆರ್ಥಿಕವಾಗಿ ಸಂಕಷ್ಟದಲ್ಲಿರುವ ರೈತರಿಗೆ ಪರಿಹಾರ ನೀಡಬೇಕು. ಮಾಡಿದ ಸಾಲ ತೀರಿಸಲಾಗದೆ ರೈತ ಇಂದು ಕಣ್ಣೀರ ಕಡಲಲ್ಲಿ ಜೀವನ ಸಾಗಿಸುತ್ತಿದ್ದಾರೆ. ನೂತನವಾಗಿ ಆಯ್ಕೆಯಾದ ರೈತ ಸಂಘಟನೆಯ ಗುಡದನಾಳ ಗ್ರಾಮ ಘಟಕದ ಪದಾಧಿಕಾರಿಗಳು ರೈತರ ಸಂಕಷ್ಟಗಳಿಗೆ ಸದಾ ಕಾಲ ಧ್ವನಿಯೆತ್ತಿ ಹೋರಾಟದ ಮೂಲಕ ನಾವು ನ್ಯಾಯವನ್ನು ಪಡೆಯಬೇಕಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ರೈತ ಸಂಘಟನೆಯ ತಾಲೂಕ ಅಧ್ಯಕ್ಷ ದುರ್ಗಾ ಪ್ರಸಾದ್ ರೆಡ್ಡಿ, ಪ್ರಧಾನ ಕಾರ್ಯದರ್ಶಿ ಬಸವರಾಜ್ ಗೌಡೂರು, ಗುಡದನಾಳ ರೈತ ಸಂಘಟನೆಯ ಗ್ರಾಮ ಘಟಕದ ನೂತನ ಅಧ್ಯಕ್ಷ ಅಮರಯ್ಯ ಸ್ವಾಮಿ, ಉಪಾಧ್ಯಕ್ಷ ಮಲ್ಲಿಕಾರ್ಜುನ್, ಶರಣಬಸವ, ಕೋಠಾ ಗ್ರಾಮ ಘಟಕದ ಅಧ್ಯಕ್ಷ ನವೀನ್ ಸೇರಿದಂತೆ ನೂರಾರು ರೈತರು ಪಾಲ್ಗೊಂಡಿದ್ದರು.

# ಸರ್ಕಾರಿ ಅಸ್ಪತ್ರೆ ವೈದ್ದೆ ಡಾ. ಸುಲೋಚನಾ ಅವರ ವಿರುದ್ದ ಭ್ರಷ್ಟಾಚಾರ ಆರೋಪ:ಡಿ. ಎಚ್. ಒ. ಗೆ ದೂರು





• ಮಲ್ಲಮ್ಮ ನುಡಿ ವಾರ್ತೆಕೊಟ್ಟೂರು

ತಾಲ್ಲೂಕಿನ ಸರ್ಕಾರಿ ಆಸ್ಪತ್ರೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ವೈದ್ಯಾಧಿಕಾರಿ ಡಾ. ಸುಲೋಚನಾ ಅವರ ವಿರುದ್ಧ ವ್ಯಾಪಕ ಭ್ರಷ್ಟಾಚಾರ ಹಾಗೂ ಕರ್ತವ್ಯ ಲೋಪದ ಆರೋಪಗಳು ಕೇಳಿಬಂದಿದ್ದು, ಅವರನ್ನು ತಕ್ಷಣವೇ ಸೇವೆಯಿಂದ ವಜಾಗೊಳಿಸಬೇಕೆಂದು ಕರ್ನಾಟಕ ದಲಿತ ಸಂಘರ್ಷ ಸಮಿತಿಯ (DSS) ಕೊಟ್ಟೂರು ತಾಲ್ಲೂಕು ಸಂಚಾಲಕರು ಹಾಗೂ ಪದಾಧಿಕಾರಿಗಳು ವಿಜಯನಗರ ಜಿಲ್ಲಾ ಆರೋಗ್ಯ ಅಧಿಕಾರಿ (D.H.O) ಡಾ. ನಿಂಗರಾಜು ಅವರಿಗೆ ಗಂಭೀರ ದೂರು ಸಲ್ಲಿಸಿದ್ದಾರೆ.

**ತಡವಾಗಿ ಬರುವುದು, ರೋಗಿಗಳಿಗೆ ನಿಂದನೆ:**ದೂರಿನಲ್ಲಿ ಉಲ್ಲೇಖಿಸಿರುವಂತೆ, ಡಾ. ಸುಲೋಚನಾ ಅವರ ಕರ್ತವ್ಯದ ಅವಧಿ ಬೆಳಿಗ್ಗೆ 09:30 ಕ್ಕೆ ಆರಂಭವಾಗಬೇಕಾಗಿದ್ದರೂ, ಅವರು ಪ್ರತೀ ದಿನ 11:30 ರಿಂದ 12:00 ಗಂಟೆಯ ಸುಮಾರಿಗೆ ತಡವಾಗಿ ಆಸ್ಪತ್ರೆಗೆ ಆಗಮಿಸುತ್ತಿದ್ದಾರೆ. ಇದರಿಂದಾಗಿ ದೂರದ ಹಳ್ಳಿಗಳಿಂದ ಬರುವ ಬಡ ರೋಗಿಗಳು ಗಂಟೆಗಟ್ಟಲೆ ಕಾಯುವಂತಾಗಿದೆ. ಆಸ್ಪತ್ರೆಗೆ ಬಂದ ನಂತರವೂ ರೋಗಿಗಳೊಂದಿಗೆ ಏರು ಧ್ವನಿಯಲ್ಲಿ ಮಾತನಾಡುವುದು, ಸಾರ್ವಜನಿಕರನ್ನು ಗದರಿಸುವುದು ಹಾಗೂ ಅವಾಚ್ಯ ಶಬ್ದಗಳಿಂದ ನಿಂದಿಸುವ ಮೂಲಕ ರೋಗಿಗಳಿಗೆ ಮಾನಸಿಕ ಕಿರುಕುಳ ನೀಡುತ್ತಿದ್ದಾರೆ ಎಂದು ಸಮಿತಿ ಆಕ್ರೋಶ ವ್ಯಕ್ತಪಡಿಸಿದೆ. **ಧೃಢೀಕರಣದ ಹೆಸರಲ್ಲಿ ಹಣ ವಸೂಲಿ ಆರೋಪ:**

ಮೇಲಾಧಿಕಾರಿಗಳ ಕಟ್ಟುನಿಟ್ಟಿನ ಆದೇಶವಿದ್ದರೂ ಸಹ, ಆಸ್ಪತ್ರೆಗೆ ವಿವಿಧ ಧೃಢೀಕರಣ ಪತ್ರಗಳಿಗಾಗಿ ಬರುವ ಸಾರ್ವಜನಿಕರಿಂದ ರೂ. 50/- ರಿಂದ 100/- ವರೆಗೆ ಕಾನೂನುಬಾಹಿರವಾಗಿ ಹಣ ವಸೂಲಿ ಮಾಡಲಾಗುತ್ತಿದೆ. ಈ ದಂಧೆಗಾಗಿ ತಮ್ಮದೇ ವಿಭಾಗದ ಸಿಬ್ಬಂದಿಯನ್ನು ಸಹಾಯಕನನ್ನಾಗಿ ಇಟ್ಟುಕೊಂಡಿದ್ದಾರೆ ಎಂದು ದೂರಿನಲ್ಲಿ ತಿಳಿಸಲಾಗಿದೆ. ಸಾರ್ವಜನಿಕರಿಂದ ಹಣ ಪಡೆಯುತ್ತಿರುವ ಆಡಿಯೋ/ವಿಡಿಯೋ ಕ್ಲಿಪ್‌ಗಳನ್ನು ಸಹ ಡಿ.ಹೆಚ್.ಓ ಅವರ ಗಮನಕ್ಕೆ ತರಲಾಗಿದೆ.

ಲೋಕಾಯುಕ್ತ ಕೇಸ್ ಇದ್ದರೂ ಮುಂದುವರಿಕೆ ಏಕೆ?

"ಡಾ. ಸುಲೋಚನಾ ಅವರು ಈ ಹಿಂದೆ ಆಡಳಿತ ವೈದ್ಯಾಧಿಕಾರಿಗಳಾಗಿದ್ದ ಅವಧಿಯಲ್ಲೂ ಸಾರ್ವಜನಿಕರಿಂದ ತೀವ್ರ ಪ್ರತಿರೋಧ ಎದುರಿಸಿದ್ದರು ಮತ್ತು ಇವರ ವಿರುದ್ಧ ಮುಷ್ಕರಗಳೂ ನಡೆದಿದ್ದವು. ಇಷ್ಟೇ ಅಲ್ಲದೆ, ಇವರ ಮೇಲೆ ಲೋಕಾಯುಕ್ತ ಇಲಾಖೆಯಲ್ಲಿ ಪ್ರಕರಣ ದಾಖಲಾಗಿರುವುದು ಎಲ್ಲರಿಗೂ ತಿಳಿದಿರುವ ವಿಷಯ. ಹೀಗಿದ್ದೂ, ಇವರು ನಿವೃತ್ತಿಯಾದ ಮೇಲೂ ಕೊಟ್ಟೂರು ಸಮುದಾಯ ಆರೋಗ್ಯ ಕೇಂದ್ರದಲ್ಲಿ ಕಳೆದ ಹಲವು ವರ್ಷಗಳಿಂದ ಗುತ್ತಿಗೆ ಆಧಾರದ ಮೇಲೆ ಮುಂದುವರಿಯಲು ಅವಕಾಶ ಮಾಡಿಕೊಟ್ಟಿರುವುದು ಎಷ್ಟು ಸರಿ?" ಎಂದು ದಲಿತ ಸಂಘರ್ಷ ಸಮಿತಿ ಪ್ರಶ್ನಿಸಿದೆ."

**ತಕ್ಷಣದ ಕ್ರಮಕ್ಕೆ ಒತ್ತಾಯ:**

ಬಡ ರೋಗಿಗಳಿಗೆ ಸರಿಯಾದ ಚಿಕಿತ್ಸೆ ಸಿಗಬೇಕಾದರೆ ಹಾಗೂ ಆಸ್ಪತ್ರೆಯಲ್ಲಿ ನಡೆಯುತ್ತಿರುವ ಭ್ರಷ್ಟಾಚಾರಕ್ಕೆ ಮುಕ್ತಿ ಹಾಡಬೇಕಾದರೆ, ಡಾ. ಸುಲೋಚನಾ ಅವರನ್ನು ತಕ್ಷಣವೇ ಕರ್ತವ್ಯದಿಂದ ವಜಾಗೊಳಿಸಬೇಕು ಮತ್ತು ಆ ಸ್ಥಾನಕ್ಕೆ ಜನಸ್ನೇಹಿಯಾದ ಹೊಸ ವೈದ್ಯಾಧಿಕಾರಿಯನ್ನು ನೇಮಿಸಬೇಕು ಎಂದು ಸಮಿತಿಯ ಪದಾಧಿಕಾರಿಗಳು ವಿಜಯನಗರ ಡಿ.ಹೆಚ್.ಓ ಡಾ. ನಿಂಗರಾಜು ಅವರಿಗೆ ನೀಡಿದ ದೂರಿನಲ್ಲಿ ಒತ್ತಾಯಿಸಿದ್ದಾರೆ. ತಪ್ಪಿದಲ್ಲಿ ಮುಂದಿನ ದಿನಗಳಲ್ಲಿ ತೀವ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದ್ದಾರೆ.

## ಕಾನಿಪ ಧ್ವನಿ ಸಂಘದ ತಾಲೂಕಾಧ್ಯಕ್ಷರಾಗಿ ವಿಜಯಕುಮಾರ್ ಪಾಟೀಲ್ ನೇಮಕ



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಬೀದರ್ ಜಿಲ್ಲೆಯ ಹುಮನಾಬಾದ ತಾಲ್ಲೂಕಿನ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘದ ತಾಲೂಕಾಧ್ಯಕ್ಷರಾಗಿ ವಿಜಯಕುಮಾರ ಬಿ. ಪಾಟೀಲ್ ಸೀತಾಳಗೇರಾ ಇವರನ್ನು ನೇಮಕ ಮಾಡಲಾಗಿದ್ದು, ಸಂಘದ ನಿಯಮಗಳನ್ನು ಕಟ್ಟು ನಿಟ್ಟಾಗಿ ಪಾಲಿಸಿ ತಾಲ್ಲೂಕಿನ ಪತ್ರಕರ್ತರ ಕಷ್ಟಕ್ಕೆ ಸ್ಪಂದಿಸಿ ನೊಂದ ಪತ್ರಕರ್ತರ ಧ್ವನಿಯಾಗಿ ಕೆಲಸ ಮಾಡಬೇಕೆಂದು ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ ರವರ ನೇಮಕಾತಿ ಆದೇಶ ಪತ್ರ ತಿಳಿಸಿದ್ದಾರೆ.

## ಬೆಳೆ ವಿಮೆ ಪರಿಹಾರ ವಿಳಂಬ; ರೈತ ಸಂಘದಿಂದ ಜಿಲ್ಲಾಧಿಕಾರಿಗಳಿಗೆ ಮನವಿ



• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿ ಅರ್ಹ ರೈತರಿಗೆ 2025-26ನೇ ಸಾಲಿನ ಬೆಳೆ ವಿಮೆ ಪರಿಹಾರವನ್ನು ಶೀಘ್ರವಾಗಿ ವಿತರಿಸಬೇಕೆಂದು ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಮಲಾನಗರ ತಾಲ್ಲೂಕು ಘಟಕದ ಪದಾಧಿಕಾರಿಗಳು ಸೋಮವಾರ ತಹಶೀಲ್ದಾರ್ ಮುಖಾಂತರ ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದರು.

ತಹಸೀಲ್ ಕಚೇರಿಗೆ ಆಗಮಿಸಿದ ರೈತ ಮುಖಂಡರು, ಸರ್ಕಾರದ ವಿರುದ್ಧ ತಮ್ಮ ಆಕ್ರೋಶ ವ್ಯಕ್ತಪಡಿಸಿದರು. ಪ್ರಸಕ್ತ ಸಾಲಿನಲ್ಲಿ ತಾಲೂಕಿನ ಅನೇಕ ರೈತರು ಬೆಳೆ ಹಾನಿಯಿಂದಾಗಿ ತೀವ್ರ ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಆದರೆ, ಸರ್ಕಾರದಿಂದ ಘೋಷಣೆಯಾದ ಬೆಳೆ ವಿಮೆ ಪರಿಹಾರದ ಮೊತ್ತ ಇದುವರೆಗೂ ಹಲವು ಅರ್ಹ ರೈತರ ಬ್ಯಾಂಕ್ ಖಾತೆಗಳಿಗೆ ಜಮೆಯಾಗಿಲ್ಲ. ಇದರಿಂದಾಗಿ ರೈತರು ಮುಂದಿನ ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಮತ್ತು ಕುಟುಂಬ ನಿರ್ವಹಣೆ ಮಾಡಲು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ದೂರಿದ್ದಾರೆ.

**ರಸ್ತೆ ರೋಕೋ ಚಳವಳಿಯ ಎಚ್ಚರಿಕೆ:**

ಇದೇ ಸಂದರ್ಭದಲ್ಲಿ ಮಾತನಾಡಿದ ರೈತ ಸಂಘದ ಅಧ್ಯಕ್ಷ ಪ್ರವೀಣಕುಮಾರ ಕುಲಕರ್ಣಿ, "ಕಮಲನಗರ ತಾಲೂಕಿನ ರೈತರು ಬೀದರ್ ಜಿಲ್ಲೆಗೆ ಸಂಬಂಧಿಸಿದ್ದಾರೋ ಅಥವಾ ಇಲ್ಲವೋ ಎಂಬ ಗೊಂದಲ ನಮಗೆ ಕಾಡುತ್ತಿದೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣವೇ ಎಚ್ಚೆತ್ತುಕೊಂಡು ಮುಂದಿನ 10 ರಿಂದ 15 ದಿನಗಳ ಒಳಗಾಗಿ ಅರ್ಹ ರೈತರ ಖಾತೆಗಳಿಗೆ ಬೆಳೆ ವಿಮೆ ಪರಿಹಾರವನ್ನು ಜಮೆ ಮಾಡಬೇಕು. ಒಂದು ವೇಳೆ ಈ ಬೇಡಿಕೆಯನ್ನು ಈಡೇರಿಸದಿದ್ದರೆ, ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ನೇತೃತ್ವದಲ್ಲಿ ಉಗ್ರ ಹೋರಾಟ ಹಾಗೂ ರಸ್ತೆ ರೋಕೋ ಚಳವಳಿಯನ್ನು ಹಮ್ಮಿಕೊಳ್ಳಲಾಗುವುದು," ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲ್ಲೂಕು ಘಟಕದ ಪ್ರಮುಖರು, ಪದಾಧಿಕಾರಿಗಳು ಹಾಗೂ ಕಮಲಾನಗರ ತಾಲ್ಲೂಕಿನ ನೂರಾರು ರೈತರು ಉಪಸ್ಥಿತರಿದ್ದರು.

## ಕಮಲನಗರದಲ್ಲಿ ಸ್ವೀಪ್ ಅಭಿಯಾನಕ್ಕೆ ಚಾಲನೆ: ಮತದಾರರ ಪಟ್ಟಿ ಪರಿಷ್ಕರಣೆಗೆ ಇಒ ಹಣಮಂತರಾಯ ಕೌಟಗೆ ಕರೆ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಜಿಲ್ಲಾಡಳಿತ ಹಾಗೂ ಸ್ವೀಪ್ ಸಮಿತಿಯ ಜಂಟಿ ಸಹಯೋಗದಲ್ಲಿ ಕಮಲನಗರ ತಾಲೂಕಿನ ವಿವಿಧ ಓಣಿಗಳಲ್ಲಿ ಮತದಾರರ ಜಾಗೃತಿಗಾಗಿ ವಿಶೇಷ 'ಸ್ವೀಪ್' ಅಭಿಯಾನ ಹಾಗೂ ಎಸ್‌ಐಆರ್ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

2026ರ ಸಾಲಿನ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣಾ ಕಾರ್ಯಕ್ರಮಕ್ಕೆ ತಾಲೂಕು ಪಂಚಾಯತಿಯ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ (ಇಒ) ಹಣಮಂತರಾಯ ಕೌಟಗೆ ಅವರು ಅಧಿಕೃತವಾಗಿ ಚಾಲನೆ ನೀಡಿದರು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ ಅವರು, "18 ವರ್ಷ ತುಂಬಿದ ಪ್ರತಿಯೊಬ್ಬ ಅರ್ಹ ನಾಗರಿಕರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು, ವಿಳಾಸ ಸೇರ್ಪಡೆ ಹಾಗೂ ಇತ್ತೀಚಿನ ಭಾವಚಿತ್ರವನ್ನು ನವೀಕರಿಸಿಕೊಳ್ಳಲು ಇದೊಂದು ಉತ್ತಮ ಅವಕಾಶವಾಗಿದೆ. ಈ ವಿಶೇಷ ಅಭಿಯಾನವು ಜುಲೈ 29 ರವರೆಗೆ ಚಾಲನೆಯಲ್ಲಿರಲಿದೆ," ಎಂದು ತಿಳಿಸಿದರು.



ಮತದಾರರ ಸಹಾಯ ಕೇಂದ್ರಗಳು: ಸಾರ್ವಜನಿಕರ ಅನುಕೂಲಕ್ಕಾಗಿ ತಾಲೂಕಿನ ಎಲ್ಲಾ ಗ್ರಾಮ ಪಂಚಾಯತಿ ಮಟ್ಟದ ಪ್ರತಿಯೊಂದು ಮತಗಟ್ಟೆ ಆವರಣದಲ್ಲಿ 'ಮತದಾರರ ಸಹಾಯ ಕೇಂದ್ರ'ಗಳನ್ನು ಸ್ಥಾಪಿಸಲಾಗಿದೆ. ಸಾರ್ವಜನಿಕರು ಇಲ್ಲಿಗೆ ಭೇಟಿ ನೀಡಿ ನಿಗದಿತ ಅರ್ಜಿಗಳನ್ನು ಪಡೆದು, ಭರ್ತಿ ಮಾಡಿ ಸಲ್ಲಿಸಬಹುದಾಗಿದೆ.

ವಾರ್ಡ್‌ಗಳಲ್ಲಿ ಮನೆ-ಮನೆಗೆ ತೆರಳಿ ಅರ್ಜಿ ವಿತರಣೆ

ಅಭಿಯಾನದ ಅಂಗವಾಗಿ ಇಂದು ಕಮಲನಗರದ ವಾರ್ಡ್ ನಂಬರ್ 5 ಮತ್ತು ವಾರ್ಡ್ ನಂಬರ್ 7ರ ಓಣಿಗಳಲ್ಲಿ ವಿಶೇಷ ಜಾಗೃತಿ ಮೂಡಿಸಲಾಯಿತು. ಅಧಿಕಾರಿಗಳು ಮನೆ-ಮನೆಗೆ ತೆರಳಿ ಸಾರ್ವಜನಿಕರಿಗೆ ಅರ್ಜಿಗಳನ್ನು ವಿತರಿಸಿದ್ದಲ್ಲದೆ, ಭರ್ತಿಯಾದ ಅರ್ಜಿಗಳನ್ನು ಸ್ಥಳದಲ್ಲೇ ಗ್ರಾಮಸ್ಥರಿಂದ ಸ್ವೀಕರಿಸಿದರು.

ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಮೈಕ್ ಮೂಲಕ ಅನೌನ್ಸ್ ಮಾಡಲಾಗುತ್ತಿದ್ದು, ಸಾರ್ವಜನಿಕರು ಪಡೆದ ಅರ್ಜಿಗಳನ್ನು ಆದಷ್ಟು ಬೇಗ ಭರ್ತಿ ಮಾಡಿ ಮರಳಿ ನೀಡುವಂತೆ ಮನವಿ ಮಾಡಲಾಗಿದೆ. ನಾಳೆಯೂ ಸಹ ಇದೇ ರೀತಿ ತಾಲೂಕಿನ ಬೇರೆ ಬೇರೆ ಓಣಿಗಳಲ್ಲಿ ವಿಶೇಷ ಅಭಿಯಾನ ಮುಂದುವರಿಯಲಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ದಿಲೀಪ್, ಗ್ರಾಮ ಪಂಚಾಯತಿಯ ಜನಪ್ರತಿನಿಧಿಗಳು, ಸದಸ್ಯರು ಹಾಗೂ ಸ್ಥಳೀಯ ಗ್ರಾಮಸ್ಥರು ಉಪಸ್ಥಿತರಿದ್ದರು.

## ಎಸ್‌ಐಆರ್ ಅಭಿಯಾನ ಯಶಸ್ವಿ: ಬಿಎಲ್‌ಒ ಬಾಲಿಕಾ ದತ್ತಾತ್ರೇಯಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ಕಮಲನಗರ: ಚುನಾವಣಾ ಆಯೋಗವು ಮತದಾರರ ಪಟ್ಟಿಯನ್ನು ಪರಿಷ್ಕರಿಸಲು ಮತ್ತು ನವೀಕರಿಸಲು ಹಮ್ಮಿಕೊಂಡಿದ್ದ ವಿಶೇಷ ತೀವ್ರ ಪರಿಷ್ಕರಣೆ (Special Intensive Revision - SIR) ಪ್ರಕ್ರಿಯೆಯಡಿ, ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತ ವ್ಯಾಪ್ತಿಯ, ರಾಂಪುರ ಗ್ರಾಮದಲ್ಲಿ ಎಸ್‌ಐಆರ್ ಫಾರ್ಮ್ ವಿತರಣೆ ಮತ್ತು ಡಿಜಿಟಲೀಕರಣ ಅಭಿಯಾನವು ಶೇ. 100 ರಷ್ಟು ಯಶಸ್ವಿಯಾಗಿ ಸಂಪೂರ್ಣಗೊಂಡಿದೆ.

ಗ್ರಾಮದ ಒಟ್ಟು 243 ಮತದಾರರ ಪೈಕಿ 241 ಜನರಿಗೆ ಬಿ.ಎಲ್.ಒ (BLO) ಗಳ ಮೂಲಕ ಯಶಸ್ವಿಯಾಗಿ ಎಸ್‌ಐಆರ್ ಫಾರ್ಮ್ ತಲುಪಿಸಲಾಗಿದ್ದು, ಇನ್ನುಳಿದ 2 ಫಾರ್ಮ್‌ಗಳನ್ನು (ಬೇರೆಡೆ ಶಿಫ್ಟ್) ತಾಂತ್ರಿಕ ಕಾರಣಗಳಿಂದ ಸಂಗ್ರಹಿಸಲು ಸಾಧ್ಯವಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿತರಿಸಲಾದ ಎಲ್ಲಾ 241 ಎಸ್‌ಐಆರ್ ಫಾರ್ಮ್‌ಗಳನ್ನು ಆನ್‌ಲೈನ್‌ನಲ್ಲಿ ಡಿಜಿಟಲೀಕರಿಸಿ, ಸಂಪೂರ್ಣವಾಗಿ ಪರಿಶೀಲನೆ (Verification) ನಡೆಸಲಾಗಿದ್ದು, ಗ್ರಾಮದಲ್ಲಿ ಯಾವುದೇ ಫಾರ್ಮ್ ಪ್ರಕ್ರಿಯೆ ಬಾಕಿ ಉಳಿದಿರುವುದಿಲ್ಲ.



ಬಿಎಲ್‌ಒಗೆ ಸನ್ಮಾನ:

ರಾಂಪುರ ಗ್ರಾಮದಲ್ಲಿ ಈ ಜವಾಬ್ದಾರಿಯುತ ಕಾರ್ಯವನ್ನು ಅತ್ಯಂತ ನಿಷ್ಠೆಯಿಂದ ನಿರ್ವಹಿಸಿ, ಶೇ. 100 ರಷ್ಟು ಪ್ರಗತಿ ಸಾಧಿಸಿದ ಬಿಎಲ್‌ಒ (BLO) ಬಾಲಿಕಾ ದತ್ತಾತ್ರೇಯ ರಾಂಪುರ ಅವರ ಸಾಧನೆಯನ್ನು ಗುರುತಿಸಿ, ಮಾನ್ಯ ಶಾಸಕರಾದ ಪ್ರಭು ಚವ್ಹಾಣ ಅವರು ಶಾಲು ಹೊದಿಸಿ, ಸನ್ಮಾನಿಸುವ ಮೂಲಕ ವಿಶೇಷವಾಗಿ ಅಭಿನಂದಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.


## ಶೀಲಹಳ್ಳಿ ಶಾಲೆಯಲ್ಲಿ ಮಲೇರಿಯಾ ಮುಂಜಾಗ್ರತೆ ಕಾರ್ಯಕ್ರಮ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನ ಶೀಲಹಳ್ಳಿ ಗ್ರಾಮದಲ್ಲಿ ಶಾಲಾ ಮಕ್ಕಳು ಹಾಗೂ ಶಿಕ್ಷಕರಿಗೆ ಮಲೇರಿಯಾ ಮತ್ತು ಇತರ ಸೊಳ್ಳೆವಾಹಕ ರೋಗಗಳ ಕುರಿತು ಆರೋಗ್ಯ ಶಿಕ್ಷಣ ಸಂವಹನ ಕುರಿತ ಕಾರ್ಯಕ್ರಮದಲ್ಲಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರಾಣೇಶ ಜೋಶಿ ಯವರು ಮಾಹಿತಿ ನೀಡಿ ಬೇಸಿಗೆ ಮತ್ತು ನದಿಯಲ್ಲಿ ನೀರಿನ ಹರಿವು ಇಲ್ಲವಾದಾಗ ನದಿ ಪಾತ್ರದಲ್ಲಿ ಲೆಕ್ಕವಿಲ್ಲದಷ್ಟು ಸಣ್ಣ ಸಣ್ಣ ಕಲ್ಲುಗಳ ಮಧ್ಯದಲ್ಲಿ ನೀರು ಸಂಗ್ರಹವಾಗುವುದರಿಂದ ಅನಾಫಿಲಿಸ್.ಇಡಿಸ್ ಇಜಿಪ್ಟೆ ಸೊಳ್ಳೆಗಳು ಸಂಗ್ರಹಿತ ನೀರಿನಲ್ಲಿ ಮೊಟ್ಟೆ ಇಡುತ್ತವೆ.ಲಾರ್ವಾ,ಪ್ಯೂಪಾ ಹಂತ ಮಾರ್ಪಾಟಾಗಿ ಸೊಳ್ಳೆಗಳು ಹೊರಹೊಮ್ಮುತ್ತವೆ.ಆದ್ದರಿಂದ ಶೀಲಹಳ್ಳಿಯಂತೆ,ಹಂಚಿನಾಳ. ಯರಗೋಡಿ.ಕಡದರಗಡ್ಡಿ.ಯಳಗುಂದಿ ಇತರೆ ಗ್ರಾಮಗಳಲ್ಲಿ ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣ ಅಧಿಕಾರಿಗಳ ಮಾರ್ಗ ಸೂಚಿಯನ್ವಯ ಪ್ರತಿ ವರ್ಷ ಮಾರ್ಚ್ ಮತ್ತು ಜುಲೈ ಮಾಹೆಯಲ್ಲಿ ಲ್ಯಾಂಬ್ಡಾ ಸೈಲೋಥ್ರಿನ್ 10% ಪರಿಣಾಮಕಾರಿ ಔಷಧ ಸಿಂಪರಣೆ ಕಾರ್ಯ ಜಾರಿಯಲ್ಲಿದೆ.ನಾಗರಿಕರು ಪ್ರತಿಯೊಂದು ಮನ,ಕೋಣೆಗಳಿಗೂ ಕೀಟ ನಾಶಕ ಸಿಂಪರಣೆಗೆ ಕೈ ಜೋಡಿಸಬೇಕು.ಪ್ರಸ್ತುತ ಆರೋಗ್ಯ ನಿರೀಕ್ಷಣಾಧಿಕಾರಿಗಳು.ಸಮುದಾಯ ಆರೋಗ್ಯಾಧಿಕಾರಿಗಳು,ಆಶಾಕಾರ್ಯಕರ್ತರು ರಾಪಿಡ್ ಡಯೋಗ್ನೋಸ್ಟಿಕ್ ಕಿಟ್ ಮೂಲಕ ಸ್ಥಳದಲ್ಲಿಯೇ ಪರೀಕ್ಷಿಸಿ ಮಲೇರಿಯಾ ದ್ರಢಪಟ್ಟಲ್ಲಿ ಅದೇ ದಿನದಂದು ತೀವ್ರ ತರ ಸಂಪೂರ್ಣ ಚಿಕಿತ್ಸೆ ನೀಡಿ ಸೋಂಕು ಹರಡುವಿಕೆ ತಡೆಗಟ್ಟಲಾಗುವುದು.ಅಲ್ಲದೇ ಎಲ್ಲ ಮನೆಗಳಲ್ಲಿ ನೀರಿನ ತಾಣಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸಬೇಕು ಇದರಿಂದ ಲಾರ್ವ ನಾಶವಾಗುತ್ತವೆ. ಮಲೇರಿಯಾ ಮತ್ತು ಡೆಂಗ್ಯೂ ಜ್ವರ ಲಕ್ಷಣಗಳನ್ನು ಹಾಗೂ ಮುಂಜಾಗ್ರತ ಕ್ರಮಗಳ ಕುರಿತು ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಹೇಮಂತರಾಜ್ ತಿಳಿಸಿದರು.ಈ ಸಂದರ್ಭದಲ್ಲಿ ಶಿಕ್ಷಕರಾದ ಸುವರ್ಣ. ಭಾಗೀರಥಿ.ರವಿ.ಅಮರೇಶ.ಆರೋಗ್ಯ ನಿರೀಕ್ಷಣಾಧಿಕಾರಿ ಅಲಂಪಾಶಾ.ಹುಸೇನಪ್ಪ. ಶಾಲಾ ಮಕ್ಕಳು ಹಾಜರಿದ್ದರು.

## ಎಸ್‌ಐಆರ್ : ಮನೆ ಮನೆ ಭೇಟಿ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಸಮೀಪದ ಜನತಾಪುರ ಗ್ರಾಮದಲ್ಲಿ ಮನೆ ಮನೆ ಭೇಟಿ ನೀಡಿ ಚುನಾವಣಾ ಆಯೋಗದಿಂದ ನಡೆಯುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಶನಿವಾರ ಜರುಗಿತು.

ಜನತಾಪುರ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಪ್ರಭಾರಿ ಮುಖ್ಯ ಗುರುಗಳು ಹಾಗೂ ಚುನಾವಣೆ ಆಯೋಗ ಬಿಎಲ್‌ಒ ಮೌನೇಶಾಚಾರ್ಯ ಮತದಾರರ ವಿಶೇಷ ಪರಿಷ್ಕರಣೆ ಕಾರ್ಯ ಮಾಡಿದರು. ಇದೇ ಸಮಯದಲ್ಲೋ ಗ್ರಾಮ ಆಡಳಿತ ಅಧಿಕಾರಿ ಮಾಬುಸಾಬ ನವಲಿ ಭೇಟಿ ನೀಡಿ ಮಾರ್ಗದರ್ಶನ ಮಾಡಿದರು.

ಗ್ರಾಮದ ಅಂಗನವಾಡಿ ಕಾರ್ಯಕರ್ತೆ ಹೇಮಾವತಿ, ಕವಿತಾ ಪಾಟೀಲ್ ಹಾಗೂ ಗ್ರಾಮಸ್ಥರು ಇದ್ದರು.

## ಸರ್ವತೋಮುಖ ಅಭಿವೃದ್ಧಿಗೆ ಜ್ಞಾನವಿಕಾಸ ಅಗತ್ಯ : ಅಡಿವಯ್ಯ



• ಮಲ್ಲಮ್ಮ ನುಡಿ ವಾರ್ತೆಮುದಗಲ್

ಕುಟುಂಬ ನಿರ್ವಹಣೆಗಾಗಿ ಮಹಿಳೆಯರ ಸರ್ವತೋಮುಖ ಅಭಿವೃದ್ಧಿಗೆ ಜ್ಞಾನವಿಕಾಸ ಅಗತ್ಯವಾಗಿದೆ ಎಂದು ಧರ್ಮಸ್ಥಳ ಯೋಜನಾಧಿಕಾರಿ ಅಡಿವಯ್ಯ ಅಭಿಪ್ರಾಯಪಟ್ಟರು.

ಪಟ್ಟಣ ಸಮೀಪದ ನಾಗಲಾಪುರ ಗ್ರಾಮದ ಜ್ಞಾನ ಗಂಗಾ ವಿಕಾಸ ಕೇಂದ್ರದ ವಾರ್ಷಿಕೋತ್ಸವದಲ್ಲಿ ಜ್ಯೋತಿ ಬೆಳಗಿಸಿ ಮಾತನಾಡಿದ ಅವರು ಧರ್ಮಸ್ಥಳ ಗ್ರಾಮೀಣ ಅಭಿವೃದ್ಧಿವತಿಯಿಂದ ಹಲವಾರು ಕಾರ್ಯಕ್ರಮಗಳು ಹಮ್ಮಿಕೊಂಡಿದ್ದೇವೆ. ಜ್ಞಾನವಿಕಾಸ ಕೇಂದ್ರದ ಮೂಲಕ ಮಹಿಳೆಯರು ಅಭಿವೃದ್ಧಿ ಹೊಂದುತ್ತಿರುವುದು ಸಂತಸದ ಸಂಗತಿಯಾಗಿದೆ. ಮಹಿಳೆಯರು ನಾಲ್ಕು ಗೋಡೆಗಳ ಮಧ್ಯೆಯಿಂದ ಹೊರಬಂದು ಸಾಮಾಜಿಕ, ಶೈಕ್ಷಣಿಕವಾಗಿ ಸಮಗ್ರ ಅಭಿವೃದ್ಧಿ ಹೊಂದುತ್ತಿರುವುದು ಜ್ಞಾನ ವಿಕಾಸ ಪ್ರೇರಣೆಯಾಗಿದೆ. ಕೇಂದ್ರದ ಎಲ್ಲಾ ಸದಸ್ಯರಿಗೆ ಜ್ಞಾನವಿಕಾಸ ಕಾರ್ಯಕ್ರಮದ ಕುರಿತು ಮತ್ತು ಕೇಂದ್ರದ ವಾರ್ಷಿಕೋತ್ಸವ ಕುರಿತು ಯೋಜನೆ ಕಾರ್ಯಕ್ರಮಗಳ ಕುರಿತು ಮಾಹಿತಿ ಮಾರ್ಗದರ್ಶನ ಮಾಹಿತಿ ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಜನ ಜಾಗೃತಿ ವೇದಿಕೆ ನಿಕಟಪೂರ್ವ ಅಧ್ಯಕ್ಷೆ ಶಶಿಕಲಾ ಬೋವಿ, ಉಪಾಧ್ಯಕ್ಷೆ ತೋಟಮ್ಮ, ವಲಯ ಮೇಲ್ವಿಚಾರಕ ಆಂಜನೇಯ ಮಾತನಾಡಿದರು. ಸದಸ್ಯೆ ನಂದಿನಿ ಕೇಂದ್ರದ ವರದಿ ವಾಚನ ಮಾಡಿದರು. ಎಲ್ಲಾ ಸದಸ್ಯರಿಗೆ ಆಟೋಟ ಸ್ಪರ್ಧೆ ಏರ್ಪಡಿಸಲಾಗಿತ್ತು. ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಣೆ ಮಾಡಲಾಯಿತು.

ಸಮನ್ವಧಿಕಾರಿ ಅನುರಾಧ, ಸೇವಾ ಪ್ರತಿನಿಧಿ ಶಾರದಾ, ಸೇರಿದಂತೆ ಕೇಂದ್ರದ ಸದಸ್ಯರು, ಗ್ರಾಮಸ್ಥರು ಇದ್ದರು.

## ಅತ್ಯಾಧುನಿಕ ಅಗ್ನಿಶಾಮಕ ವಾಹನಕ್ಕೆ ಎಮ್ ಎಲ್ ಸಿ ಶರಣಗೌಡ ಪಾಟೀಲ್ ಬಯ್ಯಾಪುರ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ ಲಿಂಗಸಗೂರ



ತಾಲೂಕಿನಲ್ಲಿ ಬೇಸಿಗೆ ಅವಧಿಯಲ್ಲಿ ಸಂಭವಿಸುವ ಅಗ್ನಿ ದುರಂತಗಳು ಹಾಗೂ ವಿವಿಧ ಪ್ರಕೃತಿ ವಿಕೋಪಗಳ ಸಂದರ್ಭದಲ್ಲಿ ಸಾರ್ವಜನಿಕರ ಆಸ್ತಿಪಾಸ್ತಿ ರಕ್ಷಿಸಲು ಅಗ್ನಿಶಾಮಕ ಸಿಬ್ಬಂದಿಯ ಕಾರ್ಯ ಶ್ಲಾಘನೀಯವಾಗಿದೆ ಎಂದು ವಿಧಾನಪರಿಷತ್ ಸದಸ್ಯರು ಶ್ರೀ ಶರಣಗೌಡ ಪಾಟೀಲ್ ಬಯ್ಯಾಪುರ ತಿಳಿಸಿದರು.

ಪಟ್ಟಣದ ಅಗ್ನಿಶಾಮಕ ಇಲಾಖೆ ಠಾಣೆಯ ಆವರಣದಲ್ಲಿ ಸರ್ಕಾರದಿಂದ ಮಂಜೂರಾದ ನೂತನ ಅತ್ಯಾಧುನಿಕ ಅಗ್ನಿಶಾಮಕ ವಾಹನಕ್ಕೆ ಹಸಿರು ನಿಶಾನೆ ತೋರಿಸಿ ಅವರು ಮಾತನಾಡಿದರು. ಕಳೆದ ಅಧಿವೇಶನದಲ್ಲಿ ಲಿಂಗಸ್ಗೂರು ಕ್ಷೇತ್ರದ ಅಗ್ನಿಶಾಮಕ ಇಲಾಖೆಗೆ 2 ನೂತನ ವಾಹನವನ್ನು ಕೊಡಬೇಕೆಂದು ಹಿಂದಿನ ಗೃಹ ಸಚಿವರಾದ ಡಾ. ಜಿ ಪರಮೇಶ್ವರ್ ಅವರಿಗೆ ಮನವಿ ಮಾಡಿದ್ದರು ಅದರ ಪ್ರಯುಕ್ತ ಈಗ ಒಂದು ವಾಹನ ಮಂಜೂರು ಮಾಡಲಾಗಿದೆ.ಭೌಗೋಳಿಕ ವಿಸ್ತೀರ್ಣಕ್ಕೆ ತಕ್ಕಂತೆ ಸೌಲಭ್ಯನಮ್ಮ ತಾಲೂಕು ಭೌಗೋಳಿಕವಾಗಿ ಅತ್ಯಂತ ವಿಶಾಲವಾಗಿದೆ. ಇಂತಹ ಪರಿಸ್ಥಿತಿಯಲ್ಲಿ ತಾಲೂಕಿನಲ್ಲಿ ಕೇವಲ ಒಂದೇ ಒಂದು ವಾಹನ ಲಭ್ಯವಿದ್ದು, ಒಂದೇ ಸಮಯದಲ್ಲಿ ಎರಡು-ಮೂರು ಕಡೆಗಳಲ್ಲಿ ಬೆಂಕಿಯ ಅವಘಡಗಳು ಸಂಭವಿಸಿದಾಗ ಸಾರ್ವಜನಿಕರು ಹಾಗೂ ಇಲಾಖೆ ತೀವ್ರ ತೊಂದರೆ ಅನುಭವಿಸಬೇಕಾಗುತ್ತಿತ್ತು. ಇದನ್ನು ಮನಗಂಡು, ಇಲಾಖೆ ಹಾಗೂ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆಸಿ ಈ ಹೊಸ ವಾಹನವನ್ನು ಮಂಜೂರು ಮಾಡಿಸಲಾಗಿದೆ. ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಶ್ರೀ ಭೂಪನಗೌಡ ಕರಡಕಲ್, ಶ್ರೀ ಪಾಮಯ್ಯ ಮುರಾರಿ, ಶ್ರೀ ಗುಂಡಪ್ಪ ನಾಯಕ್, ಹಾಗೂ ಅಗ್ನಿಶಾಮಕ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು

# ಸಮಾಜ ಕಲ್ಯಾಣ ಇಲಾಖೆ: ಮೆಟ್ರಿಕ್ ಪೂರ್ವ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಪ್ರಸ್ತಕ ಸಾಲಿಗೆ ಸರ್ಕಾರಿ, ಖಾಸಗಿ, ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ 1 ರಿಂದ 10 ನೇ ತರಗತಿ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನಕ್ಕಾಗಿ ಅರ್ಹ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಂದ ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ಅರ್ಹ ವಿದ್ಯಾರ್ಥಿಗಳು ರಾಜ್ಯ ಸ್ಕಾಲರ್‌ಶಿಪ್ ಪೋರ್ಟಲ್‌ನ ವೆಬ್‌ಸೈಟ್ www.sw.kar.nic.in ಗೆ ಭೇಟಿ ನೀಡಿ ಪ್ರಿ ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ ಸ್ಕಾಲರ್ ಶಿಪ್ ಆಯ್ಕೆ ಮಾಡಿ ಅರ್ಜಿ ಸಲ್ಲಿಸಬಹುದಾಗಿದೆ.

*ಬೇಕಾಗುವ ಅಗತ್ಯ ದಾಖಲೆ:*

ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಆಧಾರ್ ಕಾರ್ಡ್ಗೆ ಲಿಂಕ್ ಆಗಿರುವ ಮೊಬೈಲ್ ನಂಬರ್, ಸ್ಯಾಟ್ಸ್ ಐಡಿ ಹಾಗೂ ಇತರೆ ದಾಖಲೆ.

ಮೆಟ್ರಿಕ್ ನಂತರದ ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳ ವಾರ್ಷಿಕ ಆದಾಯ ರೂ.2.50 ಲಕ್ಷ ಮಿತಿಯೊಳಗಿರುವ ವಿದ್ಯಾರ್ಥಿಗಳು ಹಾಗೂ ಸರ್ಕಾರಿ ಖೋಟಾದಡಿ ಸಿಇಟಿ/ನೀಟ್ ಮುಖಾಂತರ ಆಯ್ಕೆಯಾದ ವಿದ್ಯಾರ್ಥಿಗಳಿಗೆ ವಾರ್ಷಿಕ ಆದಾಯ ಮಿತಿ ರೂ.10 ಲಕ್ಷ ಇರುವವರು ಸಹ ಅರ್ಜಿ ಸಲ್ಲಿಸಬಹುದು.

*ಬೇಕಾದ ಅಗತ್ಯ ದಾಖಲೆ:*

ಸ್ಯಾಟ್ಸ್ ಐಡಿ, ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ, ಪಿಯುಸಿ ಅಂಕಪಟ್ಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್‌ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಆಧಾರ್ ಕಾರ್ಡ್ಗೆ ಲಿಂಕ್ ಆಗಿರುವ ಮೊಬೈಲ್ ನಂಬರ್ ಹಾಗೂ ಇತರೆ ದಾಖಲೆ.

ಅರ್ಜಿ ಸಲ್ಲಿಸಲು 2027 ರ ಜನವರಿ 01 ಕೊನೆಯ ದಿನ ಆಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಕೌಲ್ ಬಜಾರ್ 1 ನೇ ಗೇಟ್ ಹತ್ತಿರ ಡಾ.ಬಿ.ಆರ್ ಅಂಬೇಡ್ಕರ್ ಭವನದ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಮೊ.9480843073 ಗೆ ಸಂಪರ್ಕಿಸಬಹುದು ಎಂದು ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ: ಶೇ. ೯೯.೧೯ ರಷ್ಟು ಗಣತಿ ನಮೂನೆಗಳ ವಿತರಣೆ ಪೂರ್ಣ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಮತ್ತು ಮನೆ ಮನೆ ಸಮೀಕ್ಷೆ ಕಾರ್ಯವು ಅತ್ಯಂತ ಬಿರುಸಿನಿಂದ ಸಾಗುತ್ತಿದೆ. ಜಿಲ್ಲೆಯಾದ್ಯಂತ ಒಟ್ಟು 12,29,586 ಮತದಾರರಿದ್ದು, ಭಾನುವಾರದ ಅಂತ್ಯಕ್ಕೆ ಒಟ್ಟು 12,19,621 ಎಸ್‌ಐಆರ್ ಗಣತಿ ನಮೂನೆಗಳನ್ನು ವಿತರಿಸುವ ಮೂಲಕ ಶೇ. 99.19 ರಷ್ಟು ಪ್ರಗತಿ ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರಪ್ರಸಾದ್. ಕೆ ಅವರು ತಿಳಿಸಿದ್ದಾರೆ.

ಜಿಲ್ಲೆಯ ಒಟ್ಟು ಮತದಾರರ ಪೈಕಿ ಶೇ. 97.83 ರಷ್ಟು ಮತದಾರರ ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದೆ. ಸಮೀಕ್ಷೆ ನಡೆಸಲಾದ ಗಣತಿ ನಮೂನೆಗಳ ಪೈಕಿ ಒಟ್ಟು 4,50,323 (ಶೇ. 36.62) ಫಾರ್ಮ್ಗಳನ್ನು ಯಶಸ್ವಿಯಾಗಿ ಗಣಕೀಕೃತಗೊಳಿಸಲಾಗಿದ್ದು, 1,936 ಮತದಾರರು ಸ್ವತಃ ಆನ್‌ಲೈನ್ ಮೂಲಕ ನಮೂನೆಗಳನ್ನು ಸಲ್ಲಿಸಿದ್ದಾರೆ.

ಮನೆ-ಮನೆ ಭೇಟಿ ಅವಧಿಯಲ್ಲಿ ಒಟ್ಟು 9,309 ಮತದಾರರನ್ನು ಗೈರುಹಾಜರಿ, ಸ್ಥಳಾಂತರ ಹಾಗೂ ಮರಣ ಹೊಂದಿದ ವರ್ಗಕ್ಕೆ ಗುರುತಿಸಲಾಗಿದೆ. ಅದರಲ್ಲಿ 4,648 ಮರಣ ಹೊಂದಿದ ಮತದಾರರು, 3,482 ಖಾಯಂ ಸ್ಥಳಾಂತರಗೊಂಡವರು, 1,008 ಈಗಾಗಲೇ ನೋಂದಾಯಿತರಾದವರು, 136 ಅಲಭ್ಯ/ಗೈರು ಹಾಜರಾದ ಮತದಾರರು ಹಾಗೂ 35 ಇತರೆ.

*ವಿಧಾನಸಭಾ ಕ್ಷೇತ್ರವಾರು ಪ್ರಗತಿ ನೋಟ:*

ಕಂಪ್ಲಿ (91): 242 ಮತಗಟ್ಟೆಗಳಿದ್ದು, ಒಟ್ಟು 2,28,666 ಮತದಾರರಿದ್ದಾರೆ. ಇಲ್ಲಿ 2,26,840 ಫಾರ್ಮ್ಗಳನ್ನು ವಿತರಿಸಲಾಗಿದ್ದು, 1,15,283 ನಮೂನೆಗಳನ್ನು ಗಣಕೀಕೃತಗೊಳಿಸಲಾಗಿದೆ.

ಸಿರಗುಪ್ಪ (92): 229 ಮತಗಟ್ಟೆಗಳಿದ್ದು, ಒಟ್ಟು 2,28,277 ಮತದಾರರಿದ್ದಾರೆ. 2,27,694 ಫಾರ್ಮ್ಗಳನ್ನು ವಿತರಿಸಿ, 99,113 ಫಾರ್ಮ್ಗಳನ್ನು ಗಣಕೀಕರಣಗೊಳಿಸಲಾಗಿದೆ. ಇಲ್ಲಿ ಅತಿ ಹೆಚ್ಚು ಅಂದರೆ 1,086 ಮತದಾರರು ಸ್ಥಳಾಂತರಗೊಂಡಿದ್ದಾರೆ.

ಬಳ್ಳಾರಿ ಗ್ರಾಮೀಣ (93): 236 ಮತಗಟ್ಟೆಗಳಿದ್ದು, ಒಟ್ಟು 2,51,325 ಮತದಾರರಿದ್ದಾರೆ. 2,49,939 ಫಾರ್ಮ್ಗಳನ್ನು ವಿತರಿಸಿ, 68,541 ಫಾರ್ಮ್ಗಳನ್ನು ಗಣಕೀಕರಣಗೊಳಿಸಲಾಗಿದೆ. ಈ ಕ್ಷೇತ್ರದಲ್ಲಿ ಅತಿ ಹೆಚ್ಚು ಅಂದರೆ 1,707 ಮರಣ ಪ್ರಕರಣಗಳು ದಾಖಲಾಗಿವೆ.

ಬಳ್ಳಾರಿ ನಗರ (94): 261 ಮತಗಟ್ಟೆಗಳಿದ್ದು, ಅತಿ ಹೆಚ್ಚು ಅಂದರೆ 2,79,144 ಮತದಾರರನ್ನು ಹೊಂದಿದೆ. ಇಲ್ಲಿ 2,73,181 ಫಾರ್ಮ್ಗಳನ್ನು ವಿತರಿಸಲಾಗಿದ್ದು, 46,647 ಫಾರ್ಮ್ಗಳನ್ನು ಗಣಕೀಕರಣಗೊಳಿಸಲಾಗಿದೆ.

ಸಂಡೂರು (95): 259 ಮತಗಟ್ಟೆಗಳಿದ್ದು, ಒಟ್ಟು 2,42,174 ಮತದಾರರಿದ್ದಾರೆ. 2,41,967 ಫಾರ್ಮ್ಗಳನ್ನು ವಿತರಿಸಿ, ಅತಿ ಹೆಚ್ಚು ಅಂದರೆ 1,20,739 ಫಾರ್ಮ್ಗಳನ್ನು ಯಶಸ್ವಿಯಾಗಿ ಗಣಕೀಕರಣಗೊಳಿಸಲಾಗಿದೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯಲ್ಲಿ ಮನೆ-ಮನೆ ಭೇಟಿ ಸಮೀಕ್ಷೆ ಮತ್ತು ಗಣಕೀಕರಣ ಪ್ರಕ್ರಿಯೆಯು ಜುಲೈ 29 ರವರೆಗೆ ಮುಂದುವರೆಯಲಿದ್ದು, ಸಾರ್ವಜನಿಕರು ಹಾಗೂ ಮತದಾರರು ಯಾವುದೇ ಗೊಂದಲಗಳಿದ್ದಲ್ಲಿ ತಮ್ಮ ಹತ್ತಿರದ ಬೂತ್ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ನಾಗೇಂದ್ರಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮದ್ಯದ ಸನ್ನದುಗಳ ಇ-ಹರಾಜು ಭಾಗವಹಿಸಲು ಮುಕ್ತ ಅವಕಾಶ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ರಾಜ್ಯ ಸರ್ಕಾರವು ಅಬಕಾರಿ ಇಲಾಖೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಸಿಎಲ್-2ಎ ಮತ್ತು ಸಿಎಲ್-9ಎ ಸನ್ನದುಗಳ ಇ-ಹರಾಜು ಪ್ರಕ್ರಿಯೆಗೆ ಚಾಲನೆ ನೀಡಿದ್ದು, ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸುವವರು ಕೇವಲ ಬಳ್ಳಾರಿ ಅಥವಾ ವಿಜಯನಗರ ಜಿಲ್ಲೆಗೆ ಮಾತ್ರ ಸೀಮಿತವಾಗಿರದೆ, ಇಡೀ ರಾಜ್ಯದ ಯಾವುದೇ ಜಿಲ್ಲೆಯಲ್ಲಾದರೂ ಬಿಡ್ ಮಾಡಬಹುದು ಎಂದು ಬಳ್ಳಾರಿ ಜಿಲ್ಲಾ ಅಬಕಾರಿ ಉಪ ಆಯುಕ್ತ ಮಂಜುನಾಥ್ ಎನ್. ಅವರು ಹೇಳಿದರು.

ರಾಜ್ಯ ಅಬಕಾರಿ ಇಲಾಖೆ ಹಾಗೂ ಬಳ್ಳಾರಿ ಜಿಲ್ಲಾ ಅಬಕಾರಿ ಇಲಾಖೆ ವತಿಯಿಂದ ಅಬಕಾರಿ ಸನ್ನದುಗಳ ಇ-ಹರಾಜು ಕುರಿತು ನಗರದ ಜಿಪಂ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಸಂಭಾವ್ಯ ಬಿಡ್ಡುದಾರರು ಹಾಗೂ ಆಸಕ್ತರಿಗೆ ಸೋಮವಾರ ಆಯೋಜಿಸಿದ್ದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯಾದ್ಯಂತ ಒಟ್ಟು ಸುಮಾರು 483 ಸಿಎಲ್-2ಎ ಮತ್ತು 90 ಕ್ಕೂ ಹೆಚ್ಚು ಸಿಎಲ್-9ಎ ಸನ್ನದುಗಳನ್ನು ಹರಾಜು ಮಾಡಲು ಸರ್ಕಾರ ಉದ್ದೇಶಿಸಿದೆ. ಸಿಎಲ್-2ಎ ಇವು ಚಿಲ್ಲರೆ ಮದ್ಯದ ಮಳಿಗೆಗಳಾಗಿದ್ದು (ವೈನ್ ಸ್ಟೋರ್ಸ್), ಇಲ್ಲಿ ಮಧ್ಯವನ್ನು ಕೊಂಡೊಯ್ದು ಬೇರೆಡೆ ಸೇವಿಸಲು ಮಾತ್ರ ಅವಕಾಶವಿರುತ್ತದೆ (ಪಾರ್ಸಲ್ ವ್ಯವಸ್ಥೆ). ಅದೇರೀತಿಯಾಗಿ ಸಿಎಲ್-9ಎ ಇವು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಬಾರ್ ಮತ್ತು ರೆಸ್ಟೋರೆಂಟ್‌ಗಳಾಗಿದ್ದು, ಇಲ್ಲಿ ಊಟ ಮತ್ತು ಉಪಹಾರದೊಂದಿಗೆ ಮದ್ಯ ಸರಬರಾಜು ಮಾಡಲು ಅವಕಾಶವಿರುತ್ತದೆ ಎಂದು ತಿಳಿಸಿದರು.

ಬಳ್ಳಾರಿ ಜಿಲ್ಲೆಯಲ್ಲಿ ಒಟ್ಟು 10 ಸಿಎಲ್-2ಎ ಮಳಿಗೆಗಳು ಮತ್ತು 2 ಸಿಎಲ್-9ಎ ಸನ್ನದುಗಳಿದ್ದು, ಇವುಗಳಿಗೆ ಹರಾಜು ಪ್ರಕ್ರಿಯೆ ನಡೆಯಲಿದೆ. ಹರಾಜಿನಲ್ಲಿ ಭಾಗವಹಿಸಲು ಬಯಸುವವರು ಕಡ್ಡಾಯವಾಗಿ ಎಂಎಸ್‌ಟಿಸಿ ಸಂಸ್ಥೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ನೋಂದಣಿ ಮಾಡಿಕೊಳ್ಳಬೇಕು. ಆನ್‌ಲೈನ್ ವಾಲೆಟ್‌ನಲ್ಲಿ ಇಎಂಡಿ ಬ್ಯಾಲೆನ್ಸ್ ಕಾಯ್ದುಕೊಳ್ಳುವುದು ಕಡ್ಡಾಯವಾಗಿರುತ್ತದೆ ಎಂದರು.

ಬಳ್ಳಾರಿ ಜಿಲ್ಲೆಯ ನೇರ ಹರಾಜು ಪ್ರಕ್ರಿಯೆಯು ಜುಲೈ 28 ರಂದು ಮಧ್ಯಾಹ್ನ 03 ಗಂಟೆಗೆ ಆರಂಭವಾಗಲಿದ್ದು, ಬಿಡ್‌ದಾರರು ಜುಲೈ 26 ರೊಳಗಾಗಿ ಎಲ್ಲಾ ನೋಂದಣಿ ಹಾಗೂ ಶುಲ್ಕ ಪಾವತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಬೇಕು. ಆನ್‌ಲೈನ್ ಬಿಡ್ಡಿಂಗ್‌ಗಾಗಿ ಮೊಬೈಲ್ ಅಥವಾ ಉತ್ತಮ ಇಂಟರ್ನೆಟ್ ಸಂಪರ್ಕವಿರುವ ಡೆಸ್ಕ್‌ಟಾಪ್ ಕಂಪ್ಯೂಟರ್ ಅಥವಾ ಲ್ಯಾಪ್‌ಟಾಪ್‌ಗಳನ್ನು ಬಳಸಿ, ತಾವಿದ್ದಲ್ಲಿಯೇ ಭಾಗವಹಿಸಬಹುದಾಗಿದೆ ಎಂದು ಅವರು ತಿಳಿಸಿದರು. ಅಬಕಾರಿ ಇಲಾಖೆಯ ನಿಯಮಾವಳಿಗಳ ಪ್ರಕಾರ, ಪ್ರಸ್ತುತ ನೀಡಲಾಗುತ್ತಿರುವ ಮದ್ಯದ ಸನ್ನದುಗಳು 5 ವರ್ಷಗಳ ಅವಧಿಗೆ ಮಾತ್ರ ಸೀಮಿತವಾಗಿರಲಿವೆ. ಐದು ವರ್ಷಗಳ ನಂತರ ಈ ಸನ್ನದುಗಳನ್ನು ಮುಂದುವರಿಸುವ ಅಥವಾ ಮರುಹರಾಜು ಮಾಡುವ ಕುರಿತು ಸರ್ಕಾರವೇ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ ಎಂದು ಸ್ಪಷ್ಟಪಡಿಸಿದರು.

ರಾಜ್ಯಾದ್ಯಂತ ಜಾರಿಯಲ್ಲಿರುವ ರೋಸ್ಟರ್ ನಿಯಮಾವಳಿಗಳ ಅನ್ವಯ ಬಳ್ಳಾರಿ ಜಿಲ್ಲೆಗೆ ಮೀಸಲಾತಿ ದೊರೆತಿದ್ದು, ವಿಜಯನಗರ ಜಿಲ್ಲೆಗೆ ಯಾವುದೇ ವಿಶೇಷ ಮೀಸಲಾತಿ ಅನ್ವಯಿಸುವುದಿಲ್ಲ. ಹಾಗಾಗಿ ಇಲ್ಲಿನ ಎಲ್ಲಾ ಸನ್ನದುಗಳು ಸಾಮಾನ್ಯ ವರ್ಗದಡಿ ಹಂಚಿಕೆಯಾಗಲಿದ್ದು, ಪ್ರತಿಯೊಬ್ಬರೂ ಮುಕ್ತವಾಗಿ ಸ್ಪರ್ಧಿಸಬಹುದಾಗಿದೆ ಎಂದರು.

ಈ ಹರಾಜು ಪ್ರಕ್ರಿಯೆಯಲ್ಲಿ ವೈಯಕ್ತಿಕ ವ್ಯಕ್ತಿಗಳು, ಪಾಲುದಾರಿಕೆ ಸಂಸ್ಥೆಗಳು, ಕಂಪನಿಗಳು, ಸೊಸೈಟಿಗಳು ಹಾಗೂ ಲಿಮಿಟೆಡ್ ಲಯಬಿಲಿಟಿ ಪಾರ್ಟ್ನರ್‌ಶಿಪ್ ಸಂಸ್ಥೆಗಳು ಮುಕ್ತವಾಗಿ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ. ಮಾಹಿತಿಗಾಗಿ ಸಾರ್ವಜನಿಕರು ಸ್ಥಳೀಯ ತಾಲೂಕು ಅಬಕಾರಿ ಕಚೇರಿ ಅಥವಾ ಜಿಲ್ಲಾ ಅಬಕಾರಿ ಉಪ ಆಯುಕ್ತರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು.

ಬಳಿಕ ಕರ್ನಾಟಕ ಎಂ.ಎಸ್.ಟಿ.ಸಿ. ಲಿಮಿಟೆಡ್ (ಬೆಂಗಳೂರು) ಸಂಸ್ಥೆಯ ಪ್ರಾದೇಶಿಕ ಹಣಕಾಸು ವ್ಯವಸ್ಥಾಪಕ ಸತೀಶ್ ಕುಮಾರ್ ಅವರು ತಾಂತ್ರಿಕ ಪ್ರಕ್ರಿಯೆಗಳ ಕುರಿತು ಬಿಡ್‌ದಾರರಿಗೆ ತರಬೇತಿ ನೀಡಿದರು.

ಹೊಸಪೇಟೆ ವಿಭಾಗದ ಅಬಕಾರಿ ಜಂಟಿ ಆಯುಕ್ತರಾದ (ಜಾರಿ ಮತ್ತು ತನಿಖೆ) ಶೈಲಜಾ ಕೋಟೆ ಅವರು ಕಾರ್ಯಾಗಾರವನ್ನು ಉದ್ಘಾಟಿಸಿ, ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಾಗಾರದಲ್ಲಿ ವಿಜಯನಗರ ಜಿಲ್ಲೆಯ ಅಬಕಾರಿ ಉಪ ಆಯುಕ್ತ ಡಾ.ಪಿ. ಮಾದೇಶ್, ಜಿಲ್ಲಾ ಅಬಕಾರಿ ಇಲಾಖೆಯ ಅಧಿಕಾರಿ ಅನಿಲ್, ಎಂ.ಎಸ್.ಟಿ.ಸಿ. ಸಂಸ್ಥೆಯ ಕಾರ್ಯನಿರ್ವಾಹಕ ಸಹಾಯಕ ಗಿರೀಶ್ ಸೇರಿದಂತೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಅಬಕಾರಿ ಇಲಾಖೆಯ ಅಧಿಕಾರಿ-ಸಿಬ್ಬಂದಿ ಹಾಗೂ ಅಖಂಡ ಬಳ್ಳಾರಿ ಜಿಲ್ಲೆಯ ಬಿಡ್‌ದಾರರು, ಮತ್ತಿತರರು ಉಪಸ್ಥಿತರಿದ್ದರು.

# ಗ್ರಾಮೀಣ ಭಾಗದ ಮೂಲಭೂತ ಸೌಕರ್ಯ, ಉದ್ಯೋಗಕ್ಕೆ ವಿಬಿ-ಜಿ ರಾಮ್-ಜಿ ಯೋಜನೆ ಸಹಕಾರಿ: ರೇಣುಕಾಚಾರ್ಯ ಸ್ವಾಮಿ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯು ಪ್ರಸ್ತುತ ವರ್ಷದ ಜುಲೈ 01 ರಂದು ಅಧಿಕೃತವಾಗಿ ಪ್ರಾರಂಭವಾಗಿದ್ದು, ಗ್ರಾಮೀಣ ಭಾಗದ ಅಕುಶಲ ಕೂಲಿ ಕಾರ್ಮಿಕರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ಹಳ್ಳಿಗಳ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಈ ಯೋಜನೆ ಅತ್ಯಂತ ಸಹಕಾರಿಯಾಗಲಿದೆ ಕುರುಗೋಡು ತಾಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿ ರೇಣುಕಾಚಾರ್ಯ ಸ್ವಾಮಿ (ಪ್ರಭಾರ) ಅವರು ಹೇಳಿದರು.

ಕುರುಗೋಡು ತಾಲೂಕಿನ ಬಾದನಹಟ್ಟಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಾದನಹಟ್ಟಿ ಗ್ರಾಮದ ಉಡಸಲಮ್ಮ ದೇವಸ್ಥಾನದ ಮುಂಭಾಗದಲ್ಲಿ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ) ಯೋಜನೆಯ ಐಇಸಿ ಚಟುವಟಿಕೆಯಡಿ ಸೋಮವಾರ ಹಮ್ಮಿಕೊಂಡಿದ್ದ ಜಾಗೃತಿ ಅಭಿಯಾನದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಈ ಯೋಜನೆಯಡಿ ಕೂಲಿಕಾರರ ದಿನಗೂಲಿ ಮೊತ್ತವನ್ನು ರೂ. 370 ರಿಂದ ರೂ. 382 ಕ್ಕೆ ಏರಿಕೆ ಮಾಡಲಾಗಿದೆ. ಪ್ರತಿ ಕುಟುಂಬಕ್ಕೆ ವರ್ಷಕ್ಕೆ ನೀಡಲಾಗುತ್ತಿದ್ದ 100 ದಿನಗಳ ಉದ್ಯೋಗದ ಬದಲಾಗಿ, ಇನ್ನುಮುಂದೆ 125 ದಿನಗಳವರೆಗೆ ಉದ್ಯೋಗಾವಕಾಶ ನೀಡಲಾಗುವುದು. ಗ್ರಾಮೀಣ ಭಾಗದ ಕೂಲಿಕಾರರು ಈ ಯೋಜನೆಯ ಸಂಪೂರ್ಣ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಬಳಿಕ ಗಣ್ಯರು ಜಂಟಿಯಾಗಿ ಎಸ್‌ಬಿಎಂ ವಾಹನದ ಮುಖಾಂತರ ಪ್ರಚಾರ ಕಾರ್ಯಕ್ಕೆ ಹಸಿರು ನಿಶಾನೆ ತೋರಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ, 'ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕಾ ಮಿಷನ್' ಯೋಜನೆಯ ಪ್ರಮುಖ ಅಂಶಗಳು ಹಾಗೂ ಮಾಹಿತಿಯುಳ್ಳ ಅಧಿಕೃತ ಕರಪತ್ರಗಳನ್ನು ಬಿಡುಗಡೆ ಮಾಡಿದರು.

ಈ ಸಂದರ್ಭದಲ್ಲಿ ಸಹಾಯಕ ನಿರ್ದೇಶಕರು (ಗ್ರಾ.ಉ) ಶಿವರಾಮರೆಡ್ಡಿ, ಬಾದನಹಟ್ಟಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಅನಿಲ್ ಕುಮಾರ್ ಹೆಚ್., ತಾಪಂ ಐಇಸಿ ಸಂಯೋಜಕ ಚಂದ್ರಶೇಖರ ಸೇರಿದಂತೆ ತಾಲೂಕು ಪಂಚಾಯತಿ ತಾಂತ್ರಿಕ ಸಹಾಯಕರು, ಬಿ.ಎಫ್.ಟಿ ಗಳು, ಎನ್.ಆರ್.ಎಲ್.ಎಮ್ ತಂಡ, ಮಹಿಳಾ ಸ್ವ-ಸಹಾಯ ಸಂಘದ ಸದಸ್ಯರು, ಗ್ರಾಮ ಕಾಯಕ ಮಿತ್ರರು, ಬಾದನಹಟ್ಟಿ ಗ್ರಾಮ ಪಂಚಾಯತಿ ಸಿಬ್ಬಂದಿಗಳು, ಕೂಲಿಕಾರರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ರಾಯಚೂರು-ಸಿಂಧನೂರು ಹೆದ್ದಾರಿ ಅಭಿವೃದ್ಧಿ ನೆಪದಲ್ಲಿ ಅವೈಜ್ಞಾನಿಕ ಯುಜಿಡಿ ನಿರ್ವಹಣೆ - ಸಾರ್ವಜನಿಕರ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು






ಜು.13. ರಾಯಚೂರು ಮತ್ತು ಸಿಂಧನೂರು ಸಂಪರ್ಕಿಸುವ ರಾಜ್ಯ ಹೆದ್ದಾರಿ-23ರ ಅಭಿವೃದ್ಧಿ ಕಾಮಗಾರಿ ಭರದಿಂದ ಸಾಗುತ್ತಿದೆ. ಕಲ್ಮಲ-ಶಿಗ್ಗಾಂವ್ ಹೆದ್ದಾರಿ ಯೋಜನೆಯಡಿ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ನೇತೃತ್ವದಲ್ಲಿ ರಸ್ತೆ ಮೇಲ್ದರ್ಜೆಗೇರಿಸುವ ಕಾರ್ಯ ನಡೆಯುತ್ತಿದೆ-ಯಾದರೂ, ಈ ಕಾಮಗಾರಿಯಲ್ಲಿನ ಯುಜಿಡಿ ನಿರ್ವಹಣಾ ಲೋಪ ಸಾರ್ವಜನಿಕರ ತೀವ್ರ ಅಸಮಾಧಾನಕ್ಕೆ ಕಾರಣವಾಗಿದೆ. ನಗರದ ಪಿಡಬ್ಲ್ಯೂಡಿ ಕ್ಯಾಂಪ್‌ನ ಡಾಲರ್ಸ್ ಕಾಲೋನಿಯ ಮುಂಭಾಗದಲ್ಲಿ ನಡೆಯುತ್ತಿರುವ ರಸ್ತೆ ವಿಸ್ತರಣೆ ಕಾರ್ಯವು ಅವೈಜ್ಞಾನಿಕವಾಗಿದೆ ಎಂದು ಸ್ಥಳೀಯರು ದೂರುತ್ತಿದ್ದಾರೆ. ಈ ಕಾಮಗಾರಿಯು ಸಂಚಾರ ದಟ್ಟಣೆಯನ್ನು ಕಡಿಮೆ ಮಾಡುವ ಬದಲು, ಅಸ್ತಿತ್ವದಲ್ಲಿದ್ದ ಮೂಲಸೌಕರ್ಯಗಳನ್ನೇ ಹಾಳುಗೆಡವುತ್ತಿದೆ ಎಂಬ ಆರೋಪ ಕೇಳಿಬಂದಿದೆ. ರಸ್ತೆ ಅಗಲೀಕರಣದ ಭರಾಟೆಯಲ್ಲಿ, ಗುಣಮಟ್ಟದ ಯುಜಿಡಿ ಮ್ಯಾನ್‌ಹೋಲ್‌ಗಳನ್ನು ಗುತ್ತಿಗೆದಾರರು ಅಜಾಗರೂಕತೆಯಿಂದ ಕತ್ತರಿಸುತ್ತಿದ್ದಾರೆ. ಹಾನಿಗೊಳಗಾದ ಮ್ಯಾನ್‌ಹೋಲ್‌ಗಳನ್ನು ತಾಂತ್ರಿಕ ನಿಯಮಾವಳಿಗಳ ಪ್ರಕಾರ ತೆರವುಗೊಳಿಸಿ, ಹೊಸದಾಗಿ ನಿರ್ಮಿಸುವ ಬದಲು, ಕೇವಲ ಸಿಮೆಂಟ್ ಪ್ಲಾಸ್ಟರ್ ಹಚ್ಚಿ ಮುಚ್ಚುತ್ತಿದ್ದಾರೆ. ಈ ನಿರ್ಲಕ್ಷ್ಯದಿಂದ ಯುಜಿಡಿ ವ್ಯವಸ್ಥೆ ಸಂಪೂರ್ಣವಾಗಿ ಶಿಥಿಲಗೊಳ್ಳುತ್ತಿದ್ದು, ಮುಂದಿನ ದಿನಗಳಲ್ಲಿ ಚರಂಡಿ ನೀರು ರಸ್ತೆಯ ಮೇಲೆ ಹರಿಯುವ ಮತ್ತು ರಸ್ತೆ ಕುಸಿಯುವ ಗಂಭೀರ ಅಪಾಯವಿದೆ ಎಂದು ಸ್ಥಳೀಯರು ಆತಂಕ ವ್ಯಕ್ತಪಡಿಸಿದ್ದಾರೆ.

ತೇಪೆ ಕೆಲಸದ ಅಪಾಯಗಳು: ಮ್ಯಾನ್‌ಹೋಲ್‌ಗಳಿಗೆ ಮಾಡಲಾಗುತ್ತಿರುವ ತೇಪೆ ಕೆಲಸವು ತಾಂತ್ರಿಕ ಮಾನದಂಡಗಳಿಗೆ ವಿರುದ್ಧವಾಗಿದೆ. ಇದರಿಂದ ಸೋರಿಕೆ ಉಂಟಾಗಿ ರಸ್ತೆಯ ಅಡಿಪಾಯವೇ ಕುಸಿಯುವ ಸಾಧ್ಯತೆಯಿದೆ. ಮ್ಯಾನ್‌ಹೋಲ್‌ಗಳ ಅವೈಜ್ಞಾನಿಕ ನಿರ್ವಹಣೆಯಿಂದ ಚರಂಡಿ ನೀರು ರಸ್ತೆಗೆ ನುಗ್ಗಿ, ಸಾಂಕ್ರಾಮಿಕ ರೋಗಗಳು ಹರಡುವ ಭೀತಿಯಿದೆ. ಸುಮಾರು 78 ಕಿ.ಮೀ ಉದ್ದದ ಈ ಹೆದ್ದಾರಿಯನ್ನು 1,695 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಇಷ್ಟೊಂದು ಬೃಹತ್ ಮೊತ್ತದ ಯೋಜನೆಯಲ್ಲಿ ಕೆಆರ್‌ಡಿಸಿಎಲ್‌ನಂತಹ ಜವಾಬ್ದಾರಿಯುತ ಸಂಸ್ಥೆಯ ಮೇಲ್ವಿಚಾರಣೆಯಲ್ಲಿ ಇಂತಹ ಲೋಪಗಳು ಹೇಗೆ ಸಂಭವಿಸುತ್ತಿವೆ? ಎಂದು ಜನರು ಪ್ರಶ್ನಿಸುತ್ತಿದ್ದಾರೆ. ಗುತ್ತಿಗೆದಾರರು ಕೆಲಸದ ವೇಗಕ್ಕಾಗಿ ನಿಯಮಗಳನ್ನು ಗಾಳಿಗೆ ತೂರುತ್ತಿರುವುದು ದುರದೃಷ್ಟಕರ ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

*ಸ್ಥಳೀಯರ ಪ್ರಮುಖ ಬೇಡಿಕೆಗಳು:

ಕೆಆರ್‌ಡಿಸಿಎಲ್ ಅಧಿಕಾರಿಗಳು ತಕ್ಷಣವೇ ಸ್ಥಳ ಪರಿಶೀಲನೆ ನಡೆಸಿ, ಲೋಪದೋಷಗಳನ್ನು ಸರಿಪಡಿಸಬೇಕು. ಹಾನಿಗೊಳಗಾದ ಮ್ಯಾನ್‌ಹೋಲ್‌ಗಳನ್ನು ಕಿತ್ತು ಹಾಕಿ, ನಿಯಮಾನುಸಾರ ಹೊಸದಾಗಿ ನಿರ್ಮಿಸಲು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಕಾಮಗಾರಿಯ ಗುಣಮಟ್ಟದಲ್ಲಿ ಯಾವುದೇ ರಾಜಿ ಮಾಡಿಕೊಳ್ಳದೆ, ಸಾರ್ವಜನಿಕ ಹಿತದೃಷ್ಟಿಯಿಂದ ಕೆಲಸ ಪೂರ್ಣಗೊಳಿಸಬೇಕು. ಅಭಿವೃದ್ಧಿ ಎಂದರೆ ಕೇವಲ ರಸ್ತೆಯ ಅಗಲೀಕರಣವಲ್ಲ; ಅದರ ಸಮಗ್ರ ಬಾಳಿಕೆ ಮತ್ತು ನಾಗರಿಕರ ಆರೋಗ್ಯ ರಕ್ಷಣೆಯೂ ಮುಖ್ಯ. ಸಂಬಂಧಪಟ್ಟ ಅಧಿಕಾರಿಗಳು ಇನ್ನು ಮುಂದಾದರೂ ಎಚ್ಚೆತ್ತುಕೊಂಡು, ಅವೈಜ್ಞಾನಿಕ ಕಾಮಗಾರಿಯನ್ನು ತಡೆಹಿಡಿದು ಸರಿಪಡಿಸುತ್ತಾರ ಎಂಬುದನ್ನು ಕಾದು ನೋಡಬೇಕಾಗಿದೆ.

# ವೈದ್ಯಕೀಯ ಮೃತ ವಿದ್ಯಾರ್ಥಿನಿ ಮನೆಗೆ ಶಾಸಕ ಭೇಟಿ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ತುಮಕೂರು ಸಮೀಪದಲ್ಲಿ ಭೀಕರ ಬಸ್ ದುರಂತದಲ್ಲಿ ಮೃತಪಟ್ಟ ಪಟ್ಟಣದ ವೆಂಕಟರಾಯನಪೇಟೆ ವೈದ್ಯಕೀಯ ವಿದ್ಯಾರ್ಥಿನಿ ಸುಮಂಗಲ ಅವರ ಮನೆಗೆ ಲಿಂಗಸುಗೂರು ಶಾಸಕ ಮಾನಪ್ಪ ಡಿ. ವಜ್ಜಲ್ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವನ ವ್ಯಕ್ತಪಡಿಸಿದರು. ಕುಟುಂಬಸ್ಥರಿಂದ ಮೃತ ವೈದ್ಯಕೀಯ ವಿದ್ಯಾರ್ಥಿನಿಯ ಸಂಪೂರ್ಣ ಮಾಹಿತಿ ಶಾಸಕರು ಪಡೆದುಕೊಂಡರು. ಕುಟುಂಬಕ್ಕೆ ಆಸರೆಯಾಗಬೇಕಾಗಿರುವ ಕಂದ ಅಪಘಾತಕ್ಕೆ ಕ್ಕೀಡಾಗಿರುವುದು ಸಂಕಷ್ಟದ ವಿಷಯವಾಗಿದೆ ಎಂದು ಸಾಂತ್ವನ ಹೇಳಿ, ಕುಟುಂಬಕ್ಕೆ ಕಣ್ಣೀರುವರೆಸುವ ಪ್ರಾಮಾಣಿಕ ಪ್ರಯತ್ನ ಮಾಡುವ ಭರವಸೆ ನೀಡಿದರು.

ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನು ಒದಗಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಲೆಕ್ಕಿಹಾಳ ಗೌಡ, ಉದಯ್ ಕುಮಾರ ಕಮ್ಮಾರ, ಮುದುಕಪ್ಪ ನಾಯಕ್, ಮಲ್ಲಪ್ಪ ಹೂಗಾರ್, ವೆಂಕಟೇಶ್ ಹಿರೇಮನಿ, ಚಂದವಲಿ ಸಾಬ್ ಜಂಗ್ಲಿ, ರವಿ ಕಟ್ಟಿಮನಿ, ಮಂಜುನಾಥ್, ಸೇರಿದಂತೆ ಇತರರಿದ್ದರು.

# ಕೆ. ಕರಿಯಪ್ಪ ಅವರ ೬೦ನೇ ಜನ್ಮದಿನ ಅಂಗವಾಗಿ ರಾಜ್ಯದಲ್ಲಿ ಮಳೆಗಾಗಿ ಮಹಾವರುಣ ಯಾಗ

• ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು



ಜು.13. ರಾಜ್ಯದಲ್ಲಿ ಉಂಟಾಗಿರುವ ಭೀಕರ ಬರಗಾಲದ ಪರಿಸ್ಥಿತಿ ಮತ್ತು ರೈತರ ಸಂಕಷ್ಟವನ್ನು ಪರಿಗಣಿಸಿ, ಮಾಜಿ ಸಂಸದ ಕೆ. ವಿರೂಪಾಕ್ಷಪ್ಪ ಅವರ ನೇತೃತ್ವದಲ್ಲಿ ಕೆ. ಕರಿಯಪ್ಪ ಅವರ 60ನೇ ಜನ್ಮದಿನದ (ಷಷ್ಟಿಪೂರ್ತಿ) ಅಂಗವಾಗಿ ವಿಶೇಷವಾಗಿ 'ಮಹಾವರುಣ ಯಾಗ'ವನ್ನು ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಕುರಿತು ಮಾಹಿತಿ ನೀಡಿದ ಮಾಜಿ ಸಂಸದ ಕೆ. ವಿರೂಪಾಕ್ಷಪ್ಪ ಅವರು ಪ್ರಸ್ತುತ ವರ್ಷ ರಾಜ್ಯದ ಹಲವೆಡೆ ಮಳೆಯಿಲ್ಲದೆ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ನಮ್ಮ ಭಾಗದ ಜೀವನಾಡಿಯಾದ ತುಂಗಭದ್ರಾ ಜಲಾಶಯ ಈ ವೇಳೆಗೆ ಭರ್ತಿಯಾಗಬೇಕಿತ್ತು, ಆದರೆ ನೀರಿನ ಹರಿವು ಇಲ್ಲದಿರುವುದು ರೈತರ ಬದುಕಿನಲ್ಲಿ ಆತಂಕ ಮೂಡಿಸಿದೆ. ಈ ನೈಸರ್ಗಿಕ ಸಂಕಷ್ಟದಿಂದ ಪಾರಾಗಲು ಉತ್ತಮ ಮಳೆಯೇ ಅನಿವಾರ್ಯವಾಗಿದೆ ಎಂದು ತಿಳಿಸಿದರು.

ರೈತರ ಹಿತದೃಷ್ಟಿಯಿಂದ ಜುಲೈ 17 ಮತ್ತು 18ರಂದು ಎರಡು ದಿನಗಳ ಕಾಲ ಮಹಾವರುಣ ಯಾಗವನ್ನು ಆಯೋಜಿಸಲಾಗಿದೆ. ಅಗ್ನಿದೇವ ಹಾಗೂ ಪರಮೇಶ್ವರನನ್ನು ಭಕ್ತಿಭಾವದಿಂದ ಆರಾಧಿಸುವ ಮೂಲಕ ರಾಜ್ಯದಲ್ಲಿ ಸುಭಿಕ್ಷೆ ಮತ್ತು ಉತ್ತಮ ಮಳೆಗಾಗಿ ಪ್ರಾರ್ಥನೆ ಸಲ್ಲಿಸಲಾಗುವುದು ಎಂದು ಅವರು ವಿವರಿಸಿದರು. ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಭಾಗವಹಿಸಿ, ಯಾಗದ ಸತ್ಫಲವಾಗಿ ರೈತರ ಬದುಕು ಹಸನಾಗಲು ಕೈಜೋಡಿಸುವಂತೆ ಸಾರ್ವಜನಿಕರಿಗೆ ಕರೆ ನೀಡಿದರು.

ಈ ಸಂದರ್ಭದಲ್ಲಿ ಎಂ. ದೊಡ್ಡಬಸವರಾಜು, ದುರ್ಗಾ ಪ್ರಸಾದ್ ಶರ್ಮಾ, ಜಿ. ಕೆ. ವಿಶ್ವನಾಥ್ ಚೌದ್ರಿ, ನೆಕ್ಕಂಟಿ ಸುರೇಶ್, ಜೀವನ್ ಕೆ.ಎಂ.ಎಸ್, ಜಗದೀಶ್, ಎಂ. ಪದ್ಮ ನಾಯ್ಡು, ಸಿ. ಎಚ್. ಮೋಹನ್ ರಾವ್, ರವಿ ಉಪ್ಪಾರ್, ಗುಡಪಾಟಿ ವೆಂಕಟೇಶ್, ನಾಗೇಶ್, ನೆಕ್ಕಂ ವಂಶಿ, ರವಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

# ಪತ್ರಿಕೆಗಳು ಸಮಾಜದ ಸ್ವಾಸ್ಥ್ಯ ಕಾಪಾಡಲಿ: ಶರಣು

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಪತ್ರಿಕೆಗಳು ಹೆಚ್ಚು ಮಾನವೀಯ ಮೌಲ್ಯಗಳುಳ್ಳ ಸುದ್ದಿ ಪ್ರಕಟಿಸಿ ಸಮಾಜದ ಸ್ವಾಸ್ಥ್ಯ ಕಾಪಾಡುವ ವಾತಾವರಣ ಸೃಷ್ಟಿಯಾಗಬೇಕಾಗಿದೆ. ರಾಜಕೀಯ ವ್ಯಕ್ತಿಗಳ ಹೇಳಿಕೆ, ಸನ್ಮಾನದಂತಹ ಕಾರ್ಯಕ್ರಮಗಳ ವರದಿಗಳೇ ಪತ್ರಿಕೆಗಳಿಗೆ ಹೂರಣ ಆಗಬಾರದು ಎಂದು ವಿಜಯಪುರದ ಸಾಮಾಜಿಕ ಕಾರ್ಯಕರ್ತ ಶರಣು ಹೀರಾಪುರ ಹೇಳಿದರು.

ನಗರದ ದೀಪಂ ಕಾಲೋನಿಯಲ್ಲಿರುವ ಸಂಘಮಿತ್ರ ಆರ್.ಎಸ್.ಎಸ್. ಕಾರ್ಯಾಲಯದ ಸಭಾಭವನದಲ್ಲಿ ಸೇವಾ ಭಾರತಿ ಟ್ರಸ್ಟ್ ಆಶ್ರಯದಲ್ಲಿ ಭಾನುವಾರ ಜರುಗಿದ ಆದ್ಯ ಪತ್ರಕರ್ತ ಮಹರ್ಷಿ ನಾರದರ ಜಯಂತಿ ಕಾರ್ಯಕ್ರಮದ ಮುಖ್ಯ ವಕ್ತಾರರಾಗಿ ಅವರು ಮಾತನಾಡಿದರು.

ಸಾಮಾಜಿಕ ಜಾಲತಾಣದಲ್ಲಿ ಹೆಸರು ಮಾಡಲು ಹಾಗೂ ವೀಕ್ಷಕರು ಹೆಚ್ಚಿಗೆ ನೋಡುತ್ತಾರೆ ಎಂದು ವಿಡಿಯೋ ಮಾಡುವವರು ಅಪಾಯದಲ್ಲಿದ್ದವರನ್ನು ಬದುಕಿಸುವತ್ತ ಹೆಚ್ಚು ಕೇಂದ್ರೀಕರಣ ಮಾಡಿದರೆ ಉತ್ತಮ. ವಿಡಿಯೋ ಮಾಡುವಂತಹ ವ್ಯಕ್ತಿ ಕೂಡ ಘಟನೆಯಾಗದಂತೆ ನೋಡಿಕೊಳ್ಳುವ ಜವಾಬ್ದಾರಿಯು



ಇದೆ ಎಂದರು. ಇತ್ತೀಚಿಗೆ ಸಾಮಾಜಿಕ ಜಾಲತಾಣ, ಡಿಜಿಟಲ್ ಯುಗದಲ್ಲಿಯೂ ವೇಗವಾಗಿ ಪತ್ರಿಕಾ ರಂಗ ಬೆಳೆಯುತ್ತಿದೆ. ಓದುಗರಿಗೆ ಉತ್ತಮ ಸಂವಹನ ಮಾಧ್ಯಮ ಪ್ರಿಂಟ್ ಮೀಡಿಯಾ ಆಗಿದೆ.ಪ್ರತಿಯೊಂದು ಹೇಳಿಕೆ, ವಿಷಯಗಳು ದಾಖಲೆ ರೂಪದಲ್ಲಿ ಸಿಗಬೇಕಾದರೆ ಅದು ಮುದ್ರಣ ಮಾಧ್ಯಮದಿಂದ ಹೀಗಾಗಿ ಮುದ್ರಣ ಮಾಧ್ಯಮ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳಲು ಸಾಧ್ಯವಿಲ್ಲ. ಪತ್ರಿಕೆಗಳಲ್ಲಿ ಬರುವ ಸಂಪಾದಕೀಯ, ಅಗ್ರ ಲೇಖನಗಳು ಸರ್ಕಾರವನ್ನು ಎಚ್ಚರಿಸುವ ಕೆಲಸವಂತಹ ಮಾಡುತ್ತಿವೆ. ಓದುಗರು ಸಹ ಪತ್ರಿಕೆಗಳಿಗೆ ಮೆಚ್ಚುಗೆ ವ್ಯಕ್ತಪಡಿಸುತ್ತಾರೆ ಎಂದ ಅವರು,ಧಾವಂತದಲ್ಲಿ ಸುದ್ದಿ ಮಾಡುವ ಮುನ್ನ ಸತ್ಯಾಸತ್ಯತೆಯನ್ನು ಅರಿತು ಮಾಡಿದರೆ ಅದು ಸಮಾಜಕ್ಕೆ ಹಿತವಾಗಲಿದೆ. ಆರ್.ಎಸ್.ಎಸ್. ಕೂಡ ಪತ್ರಿಕೆಗಳ ಮೂಲಕ ಜಾಗೃತಿ ಮೂಡಿಸುವ ಕೆಲಸ ಮಾಡುತ್ತಿದೆ ಎಂದರು.

ಪತ್ರಕರ್ತ ಸುಶೀಲೇಂದ್ರ ಕುಂದರಗಿ ಮಾತನಾಡಿ, ಪತ್ರಕರ್ತ ಉತ್ತಮ ಸಂವಹನಕಾರ ಎಂದು ಪ್ರಾಚೀನ ಕಾಲದಲ್ಲಿಯೇ ನಾರದ ಮಹರ್ಷಿಗಳು ತೋರಿಸಿಕೊಟ್ಟಿದ್ದಾರೆ. ಮಹರ್ಷಿಗಳು ಇನ್ನೊಬ್ಬರಿಗೆ ಹಿತವಾಗುವಂತಹ, ಮನಸ್ಸು ಅರಳುವ, ಲೋಕ ಕಲ್ಯಾಣಕ್ಕಾಗಿ ಕೆಲಸ ಮಾಡಿದ್ದಾರೆ, ಅವರನ್ನು ಸ್ಮರಿಸುವ ಕೆಲಸ ಶ್ಲಾಘನೀಯ. ಪತ್ರಕರ್ತರಾದವರು ಯಾವತ್ತೂ ವೈಯಕ್ತಿಕ ಆಸೆಗಳಿಗೆ ಬಲಿಯಾಗಬಾರದು ಎಂದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಜಿಲ್ಲಾ ಸಂಘ ಚಾಲಕ ಚಂದ್ರಶೇಖರ ದೊಡ್ಡಮನಿ, ಆಶ್ರಯಧಾಮದ ಅಧ್ಯಕ್ಷ ಡಾ.ಸುಭಾಷ್ ಪಾಟೀಲ, ಡಾ.ಸಿ.ಎಸ್.ಪಾಟೀಲ ಇದ್ದರು.

ಸಾಯಿಕಿರಣ್ ಗೋಡಿ ನಿರೂಪಿಸಿದರು. ಸಿದ್ಧಾರ್ಥ ವೈಯಕ್ತಿಕ ಗೀತೆ ಹಾಡಿದರು. ಸುಭಾಷ ತಿಪ್ಪಣ್ಣವರ ವಂದಿಸಿದರು.

## ಶಿಕ್ಷಣ ಮಕ್ಕಳ ಭವಿಷ್ಯ ರೂಪಿಸುವ ಶಕ್ತಿ: ಶಾಸಕ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಶಿಕ್ಷಣ ಅಕ್ಷರ ಕಲಿಕೆಯಷ್ಟೇ ಅಲ್ಲ. ಅದು ಮಗುವಿನ ಬದುಕಿನ ಭವಿಷ್ಯ ರೂಪಿಸುವ ಶಕ್ತಿ ಎಂದು ಶಾಸಕ ಮೇಟಿ ಹೇಳಿದರು.

ಅವಿರತ ಟ್ರಸ್ಟ್ ಬೆಂಗಳೂರು ವತಿಯಿಂದ ಸೋಮವಾರ ಶಿರೂರು ಪಟ್ಟಣದ ಸರ್ಕಾರಿ ಕನ್ನಡ ಹೆಣ್ಣು ಮತ್ತು ಗಂಡು ಮಕ್ಕಳ ಮಾದರಿ ಶಾಲೆಯ ಒಂದರಿಂದ ಏಳನೇ ತರಗತಿವರೆಗಿನ 350 ವಿದ್ಯಾರ್ಥಿಗಳಿಗೆ 1.50 ಲಕ್ಷ ರೂಗಳ ಮೌಲ್ಯದ ನೋಟ್‌ಪುಸ್ತಕಗಳನ್ನು ಉಚಿತವಾಗಿ ವಿತರಿಸುವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿ ಮಗುವಿಗೆ ಶಿಕ್ಷಣದ ಅವಶ್ಯಕತೆಯಿದ್ದು, ಅದುವೇ ಮಕ್ಕಳ ಭವಿಷ್ಯ ರೂಪಿಸುವ ಪ್ರಮುಖ ಸಾಧನವಾಗಿದೆ ಎಂದ ಮೇಟಿ, ವಿದ್ಯಾರ್ಥಿಗಳು ಸರ್ಕಾರ ಹಾಗೂ ಸಂಘ ಸಂಸ್ಥೆಗಳು ನೀಡುವ ಸೌಲಭ್ಯಗಳನ್ನು ಸದುಪಯೋಗಪಡಿಸಿಕೊಂಡು ಉತ್ತಮ ಪ್ರಜೆಗಳಾಗಿ ಬೆಳೆಯಬೇಕು ಎಂದರು. ಅವಿರತ ಟ್ರಸ್ಟ್ ನ ಈ ಕಾರ್ಯ ಸೌಲಭ್ಯ ವಂಚಿತ



ಹಾಗೂ ಗ್ರಾಮೀಣ ವಿದ್ಯಾರ್ಥಿಗಳ ಕಲಿಕೆಗೆ ಉತ್ತೇಜನ ನೀಡುತ್ತದೆ ಎಂದು ಶಾಸಕರು ಹೇಳಿದರು. ಅವಿರತ ಟ್ರಸ್ಟ್ ನ ಮುಖ್ಯಸ್ಥ ಮಿಥುನ್ ಬಿ.ಎನ್, ತಮ್ಮ ಸಂಸ್ಥೆಯ ಸಾಮಾಜಿಕ ಸೇವಾ ಚಟುವಟಿಕೆ ಕುರಿತು ಮಾತನಾಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್‌ಡಿಎಂಸಿ ಅಧ್ಯಕ್ಷ ಶೇಖಪ್ಪ ಮುಚಖಂಡಿ ವಹಿಸಿದ್ದರು. ಎಸ್.ಬಿ.ಮಾಚಾ, ಪಾಟೀಲ, ಬಸವಂತಪ್ಪ ಮೇಟಿ, ಎಸ್.ಎನ್. ರಾಂಪುರ, ಸುರೇಶ್ ರಾಜೂರ, ರಾಮನಗೌಡ ಮಾಚಾ, ಶಿದ್ದಪ್ಪ ಗಾಳಿ, ಹನಮಂತ ಗಾಳಿ, ಬಸವರಾಜ ಕೊಣ್ಣೂರ, ಶಾಲೆಯ ಮುಖ್ಯ ಹಾಗೂ ಸಹ ಶಿಕ್ಷಕರು, ಎಸ್‌ಡಿಎಂಸಿ ಸದಸ್ಯರು ಇದ್ದರು.

## ಆಲಮಟ್ಟಿ ಜಲಾಶಯಕ್ಕೆ ಒಳಹರಿವು ಆರಂಭ

• ಮಲ್ಲಮ್ಮ ನುಡಿ ವಾರ್ತೆ ಆಲಮಟ್ಟಿ

ಕರ್ನಾಟಕದಾದ್ಯಂತ ಮುಂಗಾರು ಮಳೆ ಆರಂಭಗೊಂಡಿದ್ದು ಪ್ರಸ್ತುತ ಈ ವರ್ಷ ಜುಲೈ ಮೊದಲ ವಾರದಲ್ಲಿ ಮಾನ್ಸೂನ್ ಪ್ರವೇಶವಾಗಿದ್ದು ಉತ್ತರ ಕರ್ನಾಟಕ ಭಾಗದ ಜೀವ ನದಿಯಾದ ಕೃಷ್ಣಾ ನದಿಗೆ ಒಳಹರಿವು ಆರಂಭಗೊಂಡಿದೆ.



ವಿಜಯಪುರ,ಬಾಗಲಕೋಟೆ,ಯಾದಗಿರಿ, ಕೊಪ್ಪಳ,ರಾಯಚೂರು ಜಿಲ್ಲೆಗಳ ರೈತರ ಮೊಗದಲ್ಲಿ ಸಂತಸ ಮೂಡಿಸಿದೆ. ಪ್ರತಿವರ್ಷ ಮೇ– ಜೂನ್ ತಿಂಗಳಲ್ಲಿ ಒಳಹರಿವು ಆರಂಭವಾಗುತ್ತಿತ್ತು. ಆದರೆ ಈ ಬಾರಿ ಉತ್ತರ ಕರ್ನಾಟಕದಲ್ಲಿ ಮಳೆಯ ಪ್ರಮಾಣ ಕಡಿಮೆ ಇದ್ದರೂ ಮಹಾರಾಷ್ಟ್ರ ಪಶ್ಚಿಮ ಘಟ್ಟದ ಮಹಾಬಲೇಶ್ವರ ಹಾಗೂ ವ್ಯಾಪ್ತಿಯ ಪ್ರದೇಶದಲ್ಲಿ ವ್ಯಾಪಕವಾಗಿ ಧಾರಾಕಾರವಾಗಿ ಮಳೆ ಸುರಿಯುತ್ತಿರುವ ಪರಿಣಾಮ ಕೃಷ್ಣಾ ಮತ್ತು ಉಪ ನದಿಗಳಿಗೆ ಜುಲೈ ತಿಂಗಳಿನಲ್ಲಿ ಒಳಹರಿವು ಆರಂಭವಾಗಿದೆ.

ಗರಿಷ್ಠ519.60ಮೀ. ಎತ್ತರದಲ್ಲಿ 123.081ಟಿಎಂಸಿ ಅಡಿ ಗರಿಷ್ಠ ನೀರು ಸಂಗ್ರಹ ಸಾಮರ್ಥ್ಯದ ಆಲಮಟ್ಟಿ ಲಾಲಬಹಾದ್ದೂರ ಶಾಸ್ತ್ರಿ ಜಲಾಶಯದಲ್ಲಿ ಗುರುವಾರ 512.59ಮೀ. ಎತ್ತರದಲ್ಲಿ 44.695ಟಿಎಂಸಿ ಅಡಿ ನೀರು ಸಂಗ್ರಹವಾಗಿದ್ದು, ಇದರಲ್ಲಿ ಡೆಡ್ ಸ್ಟೋ–ರೇಜ್ ಹೊರತುಪಡಿಸಿ 27.075ಟಿಎಂಸಿ ಅಡಿ ನೀರನ್ನು ಬಳಸಿಕೊಳ್ಳಬಹುದಾಗಿದೆ. ಇದರಿಂದ ಕೃಷ್ಣೆಯನ್ನೇ ನಂಬಿರುವ ಜಿಲ್ಲೆಗಳ ಜನ–ಜಾನುವಾರುಗಳಿಗೆ ಕುಡಿಯುವ ನೀರಿಗೆ ವರ್ಷವಾದರೂ ತೊಂದರೆ ತಪ್ಪಿದಂತಾಗಿದೆ. ಇನ್ನು ಕೃಷ್ಣೆಯ ನೀರನ್ನು ನಂಬಿ ಬಿತ್ತನೆ ಮಾಡುವ ರೈತರ ಜಮೀನುಗಳಿಗೆ ಹಿಂಗಾರು ಹಂಗಾಮಿನ ಬೆಳೆಗಳಿಗೆ ನೀರು ಕೊಡಲು ಇನ್ನೂ ಜಲಾಶಯದಲ್ಲಿ ಕನಿಷ್ಠ 60ಟಿಎಂಸಿ ಅಡಿಯಷ್ಟಾದರೂ ನೀರು ಬೇಕಾಗಬಹುದು. ಜು.9ರ ಮುಂಜಾನೆಯ ಮಾಹಿತಿಯಂತೆ 1,31,940ಕ್ಯೂಸೆಕ್ ನೀರು ಜಲಾಶಯಕ್ಕೆ ಹರಿದು ಬರುತ್ತಿದೆ. ಜಲಾಶಯದಿಂದ ಭಾಷ್ಪೀಭವನ ಸೇರಿದಂತೆ 483 ಕ್ಯೂಸೆಕ್ ನೀರು ಹೊರಹರಿವಿದೆ.

ಒಟ್ಟಾರೆ ಮುಂಗಾರು ಕೈ ಕೊಟ್ಟರೂ ಹಿಂಗಾರು ಹಂಗಾಮು ಕೈ ಹಿಡಿಯಬಹುದೆಂಬ ಆಶಾಭಾವ ಉತ್ತರ ಕರ್ನಾಟಕ ಭಾಗದ ರೈತರಲ್ಲಿ ಮೂಡಿದೆ.

## ಎಸ್‌ಐಆರ್: ವಿವಿಧ ಮತಗಟ್ಟೆಗೆ ಜಿಲ್ಲಾಧಿಕಾರಿ ಸಂಗಪ್ಪ ಭೇಟಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಮತದಾರ ಪಟ್ಟಿ ವಿಶೇಷ ಪರಿಷ್ಕರಣೆ ಅಂಗವಾಗಿ ಬಾಗಲಕೋಟೆ ನಗರದ ಬೂತ್ ಮಟ್ಟದಲ್ಲಿ ಹಮ್ಮಿಕೊಂಡ ವಿಶೇಷ ಅಭಿಯಾನದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಸಂಗಪ್ಪ, ವಿವಿಧ ಮತಗಟ್ಟೆಗಳಿಗೆ ಭೇಟಿ ನೀಡಿ ಕಾರ್ಯಪ್ರಗತಿಯನ್ನು ಪರಿಶೀಲಿಸಿದರು.

ನಗರದ ಶಕ್ತಿ ಚಿತ್ರಮಂದಿರದ ಹತ್ತಿರದ ಸರಕಾರಿ ಪ್ರಾಥಮಿಕ ಶಾಲೆಯಲ್ಲಿರುವ ಮತಗಟ್ಟೆ ಸಂಖ್ಯೆ 161ಕ್ಕೆ ಭೇಟಿ ನೀಡಿ ಮತದಾರರಿಂದ ಭರ್ತಿ ಮಾಡಲಾಗುತ್ತಿದ್ದ ಅರ್ಜಿಗಳ ಸ್ವೀಕಾರ, ದಾಖಲೆಗಳ ಪರಿಶೀಲನೆ, ಮತಗಟ್ಟೆ ಮಟ್ಟದ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳು ಕೈಗೊಂಡಿರುವ ಕಾರ್ಯವೈಖರಿಯನ್ನು ಜಿಲ್ಲಾಧಿಕಾರಿಗಳು ಅವಲೋಕಿಸಿದರು.

ಮತದಾರರಿಗೆ ಯಾವುದೇ ತೊಂದರೆ–



ಯಾಗದಂತೆ ಅರ್ಜಿಗಳನ್ನು ನಿಯಮಾನುಸಾರ ಹಾಗೂ ನಿಖರವಾಗಿ ಪರಿಶೀಲಿಸಿ ಸ್ವೀಕರಿಸುವಂತೆ ಸೂಚನೆ ನೀಡಿದರು. ಬಾಗಲಕೋಟೆ ನಗರ ವ್ಯಾಪ್ತಿಯಲ್ಲಿ ಹಮ್ಮಿಕೊಂಡ ವಿಶೇಷ ಅಭಿಯಾನದ ಪ್ರಯೋಜನವನ್ನು ಪ್ರತಿಯೊಬ್ಬ ಅರ್ಹ ಮತದಾರರು ಪಡೆದುಕೊಳ್ಳಬೇಕು. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯವು ಅತ್ಯಂತ ಮಹತ್ವದ್ದಾಗಿದ್ದು, ಯಾವುದೇ ಅರ್ಹ ಮತದಾರರು ಪಟ್ಟಿಯಿಂದ ಹೊರಗುಳಿಯದಂತೆ ಹಾಗೂ ಅನರ್ಹ ಹೆಸರುಗಳು ಸೇರ್ಪಡೆಯಾಗದಂತೆ ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ಪರಿಶೀಲನೆ ವೇಳೆ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಮತಗಟ್ಟೆ ಮಟ್ಟದ ಅಧಿಕಾರಿಗಳು, ಮೇಲ್ವಿಚಾರಕರು ಹಾಗೂ ಇತರೆ ಸಿಬ್ಬಂದಿಗಳು ಇದ್ದರು.

**ಶಿರೂರಿನ ಸರಕಾರಿ ಕನ್ನಡ ಗಂಡುಮಕ್ಕಳ ಹಿರಿಯ ಪ್ರಾಥಮಿಕ ಹಾಗೂ ಸರಕಾರಿ ಕನ್ನಡ ಹೆಣ್ಣು ಮಕ್ಕಳ ಮಾದರಿ ಪ್ರಾಥಮಿಕ ಶಾಲೆಗೆ ಜಿಲ್ಲಾಧಿಕಾರಿ ಸಂಗಪ್ಪ ಅವರು ಭೇಟಿ ನೀಡಿ ಶಾಲೆಗೆ ಸಂಬಂಧಿಸಿದ ಕಾಮಗಾರಿಗಳನ್ನು ಪರಿಶೀಲಿಸಿದರು. ಅಲ್ಲದೇ ಗ್ರಾಮದಲ್ಲಿ ಸಂಚರಿಸಿ ಸ್ವಚ್ಚತೆಯ ಬಗ್ಗೆ ಪರಿಶೀಲಿಸಿದರು.**

## ರಾಜ್ಯ ದತ್ತಾಂಶದ ಸುರಕ್ಷತೆ, ಸೈಬರ್ ಭದ್ರತಾ ಚೌಕಟ್ಟು ಬಲಪಡಿಸುವ ವಿಷಯದ ಕುರಿತು ರಾಜ್ಯ ಮಟ್ಟದ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಕರ್ನಾಟಕ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ (ಇ–ಆಡಳಿತ), ಇ–ಆಡಳಿತ ಕೇಂದ್ರ (CeG), ಕರ್ನಾಟಕದ ಸೈಬರ್ ಭದ್ರತಾ ಉತ್ಕೃಷ್ಟತಾ ಕೇಂದ್ರ (CySecK) ಮತ್ತು ರಾಷ್ಟ್ರೀಯ ಇ–ಆಡಳಿತ ವಿಭಾಗದ ಸಹಯೋಗದೊಂದಿಗೆ ಬೆಂಗಳೂರಿನ ದಿ ಲಲಿತ್ ಅಶೋಕ್ ಹೋಟೆಲ್‌ನಲ್ಲಿ ರಾಜ್ಯ ದತ್ತಾಂಶಕ್ಕಾಗಿ ಸೈಬರ್ ಭದ್ರತಾ ಚೌಕಟ್ಟನ್ನು ಬಲಪಡಿಸುವುದು ಎಂಬ ವಿಷಯದ ಕುರಿತು ರಾಜ್ಯ ಮಟ್ಟದ ಮಹತ್ವದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕರ್ನಾಟಕದ ಡಿಜಿಟಲ್ ಆಡಳಿತ ವ್ಯವಸ್ಥೆಯಲ್ಲಿ ಸೈಬರ್ ಭದ್ರತೆಯನ್ನು ಬಲಪಡಿಸುವ ಕಾರ್ಯತಂತ್ರಗಳ ಕುರಿತು ಚರ್ಚಿಸಲು 30ಕ್ಕೂ ಹೆಚ್ಚು ಇಲಾಖೆಗಳು, ನಿಗಮಗಳು, ಮಂಡಳಿಗಳು ಮತ್ತು ರಾಜ್ಯ ಸಂಸ್ಥೆಗಳ 80ಕ್ಕೂ ಹೆಚ್ಚು ಹಿರಿಯ ಸರ್ಕಾರಿ ಅಧಿಕಾರಿಗಳು ಈ ಕಾರ್ಯಾಗಾರದಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದರು.

CySecK ಸಂಸ್ಥೆಯ ಕೇಂದ್ರ ಮುಖ್ಯಸ್ಥರಾದ ರಂಜಿತ್ ಮಿಶ್ರಾ ಅವರ ಸ್ವಾಗತ ಭಾಷಣದೊಂದಿಗೆ ಕಾರ್ಯಕ್ರಮ ಆರಂಭವಾಯಿತು. ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಯ (ಇ–ಆಡಳಿತ) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಾದ ಪಂಕಜ್ ಕುಮಾರ್ ಪಾಂಡೆ (IAS), ಕರ್ನಾಟಕ ಇನ್ನೋವೇಶನ್ ಆಂಡ್ ಟೆಕ್ನಾಲಜಿ ಸೊಸೈಟಿಯ (KITS) ವ್ಯವಸ್ಥಾಪಕ ನಿರ್ದೇಶಕರಾದ ಡಾ. ಅವಿನಾಶ್ ಮೆನನ್ ರಾಜೇಂದ್ರನ್ (IAS) ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಕಾರ್ಯಕ್ರಮವನ್ನು ಜಂಟಿಯಾಗಿ ಉದ್ಘಾಟಿಸಿದರು.

ಕಾರ್ಯಾಗಾರದಲ್ಲಿ ಭವಿಷ್ಯಕ್ಕಾಗಿ ಸೈಬರ್ ಸನ್ನದ್ಧ ಕರ್ನಾಟಕ ಮತ್ತು ಇ–ಆಡಳಿತಕ್ಕಾಗಿ ಸೈಬರ್









ಸ್ಥಿತಿಸ್ಥಾಪಕತ್ವ ಎಂಬ ಪ್ರಮುಖ ವಿಷಯಗಳ ಕುರಿತು ದಿಕ್ಸೂಚಿ ಭಾಷಣಗಳು ನಡೆದವು. ಇದೇ ಸಮಯದಲ್ಲಿ ನಾಗರಿಕರ ದತ್ತಾಂಶವನ್ನು ರಕ್ಷಿಸುವುದು, ಸೈಬರ್ ಸ್ಥಿತಿಸ್ಥಾಪಕತ್ವವನ್ನು ಬಲಪಡಿಸುವುದು ಮತ್ತು ಸರ್ಕಾರದ ಡಿಜಿಟಲ್ ಮೂಲಸೌಕರ್ಯದ ಭದ್ರತೆಯನ್ನು ಹೆಚ್ಚಿಸಲು ಸಂಘಟಿತ ಕ್ರಮಗಳ ಅಗತ್ಯತೆಯನ್ನು ಈ ವೇಳೆ ಪ್ರಮುಖವಾಗಿ ಒತ್ತಿಹೇಳಲಾಯಿತು.

ತಾಂತ್ರಿಕ ಅವಧಿಗಳಲ್ಲಿ ರಾಜ್ಯ ದತ್ತಾಂಶ ಕೇಂದ್ರದ (State Data Centre) ಸೈಬರ್ ಭದ್ರತೆಯ ಅತ್ಯುತ್ತಮ ಅಭ್ಯಾಸಗಳು ಹಾಗೂ ಕರ್ನಾಟಕದ ಏಕೀಕೃತ ಸೈಬರ್ ಭದ್ರತಾ ಕಾರ್ಯತಂತ್ರದ ಕುರಿತು ಸುದೀರ್ಘ ಚರ್ಚೆ ನಡೆಸಲಾಯಿತು. ಜೊತೆಗೆ, ಪಾಲ್ಗೊಂಡಿದ್ದ ವಿವಿಧ ಇಲಾಖೆಗಳು ತಮ್ಮ ಪ್ರಸ್ತುತ ಸೈಬರ್ ಭದ್ರತಾ ಉಪಕ್ರಮಗಳು ಮತ್ತು ಎದುರಿಸುತ್ತಿರುವ ಕಾರ್ಯಾಚರಣೆಯ ಸವಾಲುಗಳ ಕುರಿತು ಪ್ರಸ್ತುತಿಗಳನ್ನು ನೀಡಿದವು.

ಈ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿ ಆರು ವಿಶೇಷ ವಿಷಯಾಧಾರಿತ ಚರ್ಚಾಗೋಷ್ಠಿಗಳನ್ನು ಆಯೋಜಿಸಲಾಗಿದ್ದು, ಅಪಾಯ–ಆಧಾರಿತ ಭದ್ರತಾ ಮೇಲ್ವಿಚಾರಣೆ, SDC ಮತ್ತು KSWAN ಭದ್ರತೆ, ಸೆಕ್ಯುರಿಟಿ ಆಪರೇಷನ್ಸ್ ಸೆಂಟರ್ (SOC) ಮತ್ತು ರಾಜ್ಯ ಅಖಖಖಖಿ, ಸುರಕ್ಷಿತ ವಿನ್ಯಾಸ ಮತ್ತು ಶೂನ್ಯ ನಂಬಿಕೆ (Zero Trust) ತತ್ವಗಳು, ದತ್ತಾಂಶ ವರ್ಗೀಕರಣ ಹಾಗೂ ಆಕಆಕ ಸನ್ನದ್ಧತೆ ಮತ್ತು ಸೈಬರ್ ಭದ್ರತಾ ಸಾಮರ್ಥ್ಯ ವೃದ್ಧಿ ವಿಷಯಗಳ ಕುರಿತು ವಿಸ್ತೃತವಾಗಿ ಚರ್ಚಿಸಲಾಯಿತು:

ಈ ಎಲ್ಲಾ ಚರ್ಚೆಗಳ ಮುಕ್ತಾಯದಲ್ಲಿ, ಸರ್ಕಾರಿ ಇಲಾಖೆಗಳಲ್ಲಿ ಸೈಬರ್ ಭದ್ರತೆಯನ್ನು ಮತ್ತಷ್ಟು ಬಲಪಡಿಸಲು ಆದ್ಯತೆಯ ಶಿಫಾರಸುಗಳು ಮತ್ತು ಅನುಷ್ಠಾನ ಕ್ರಮಗಳನ್ನು ಒಳಗೊಂಡ ಮಹತ್ವದ "ಜಂಟಿ ಕ್ರಿಯಾ ಯೋಜನೆ"ಯನ್ನು (Joint Action Plan) ಸಿದ್ಧಪಡಿಸಲಾಯಿತು.

ಸಹಯೋಗ, ಜ್ಞಾನ ಹಂಚಿಕೆ ಮತ್ತು ನಿರಂತರ ಸಾಮರ್ಥ್ಯ ವೃದ್ಧಿಯ ಮೂಲಕ ಸುರಕ್ಷಿತ, ಸ್ಥಿತಿಸ್ಥಾಪಕ ಹಾಗೂ ಭವಿಷ್ಯಕ್ಕೆ ಸನ್ನದ್ಧವಾದ ಡಿಜಿಟಲ್ ಆಡಳಿತ ವ್ಯವಸ್ಥೆಯನ್ನು ನಿರ್ಮಿಸಲು ಕರ್ನಾಟಕ ಸರ್ಕಾರವು ಸಂಪೂರ್ಣ ಬದ್ಧವಾಗಿದೆ ಎಂದು ಕಾರ್ಯಾಗಾರದಲ್ಲಿ ಪುನರುಚ್ಚರಿಸಲಾಯಿತು.

## ಎಸ್‌ಐಆರ್ ಅತ್ಯಂತ ಮಹತ್ವದ್ದು



**ಬೆಂಗಳೂರು:** ಕೇಂದ್ರ ಚುನಾವಣ ಆಯೋಗದ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್.ಐ.ಆರ್) ಅತ್ಯಂತ ಮಹತ್ವದಾಗಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಬಿ. ಪಾಟೀಲ್ ರವರು ತಿಳಿಸಿದರು. ಅವರು ಇಂದು ಹಳ್ಳಿಖೇಡ (ಬಿ) ಪಟ್ಟಣದ ವಿವಿಧ ವಾರ್ಡಗಳಿಗೆ ಭೇಟಿ ನೀಡಿ ಸಾರ್ವಜನಿಕರೊಂದಿಗೆ ಚರ್ಚೆ ನಡೆಸಿದರು. ಮತ ಪಟ್ಟಿ ಶುದ್ದಿಕರೀಸಿ ಪ್ರಜಾಪ್ರಭುತ್ವ ಬಲಪಡಿಸುವ ಈ ಅಭಿಯಾನದಲ್ಲಿ ಎಲ್ಲಾ ಮತದಾರರು ಸಕ್ರಿಯ ಪಾಲ್ಗೊಂಡು ಮತ ಪಟ್ಟಿಯಲ್ಲಿ ತಮ್ಮ ಹೆಸರು ಸೇರಿಸಿಕೊಳಬೇಕು. ಪ್ರತಿಯೊಬ್ಬರು ಅಮೂಲ್ಯ ಮತದಾನದ ಹಕ್ಕಿನಿಂದ ವಂಚಿತರಾಗಬಾರದು ಎಂದು ಮನವಿ ಮಾಡಿದರು. ಎಸ್.ಐ.ಆರ್ ಮಹತ್ವದ ಕುರಿತು ಸ್ಥಳಿಯರಿಗೆ ಅಗತ್ಯ ಮಾಹಿತಿ ನೀಡಿ ಜಾಗೃತಿ ಮೂಡಿಸಿದರು. ಎಲ್ಲಾ ಅರ್ಹರು ಬೂತ ಮಟ್ಟದ (ಬಿ.ಎಲ್.ಒ) ಗಳು ಮನೆಗೆ ಬಂದಾಗ ಅಗತ್ಯ ದಾಖಲೆಗಳನ್ನು ಒದಗಿಸಿ ಗಣತಿ ಅರ್ಜಿ (ಎನುಮಾರೇಷನ್ ಫಾರಂ) ಭರ್ತಿ ಮಾಡಿ ಕೊಡಬೇಕು ಎಂದರು. ಕಾಂಗ್ರೇಸ್ ಪಕ್ಷದ ಮತಗಟ್ಟೆ ಏಜೇಂಟರು (ಬಿ.ಎಲ್.ಎ2), ಮತದಾರರು ಹಾಗೂ ಮತಗಟ್ಟೆ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಪ್ರಕ್ರಿಯೆ ಯಶಸ್ವಿಗೆ ಶ್ರಮಿಸಬೇಕೆಂದು ಕೋರಿದರು.

ಈ ಸಂದರ್ಭದಲ್ಲಿ ಚಾಂದ ಖುರೇಶಿ, ಆರೀಫ್ ಬಾವಗಿ, ವೀರೇಶ ರೆಡ್ಡಿ, ಮುಬಿನ್, ಡಾ. ಹಸನ್, ವಿಜ್ಜು ಪಾಟೀಲ್, ವಿಜಯಕುಮಾರ ಶಾಹಪೂರಕರ್, ಹಸನ್, ಬಸವರಾಜ ನೂಲಾ, ಸೇರಿದಂತೆ ಮಾಜಿ ಪುರಸಭೆ ಸದಸ್ಯರುಗಳು ಮತ್ತು ಕಾಂಗ್ರೇಸ್ ಪಕ್ಷದ ಬಿ.ಎಲ್.ಎ.2 ಗಳು ಸೇರಿದಂತೆ ಬಡವಾಣೆಯ ಜನರು ಉಪಸ್ಥಿತರಿದ್ದರು.

## ಎಸ್‌ಐಆರ್ ಪ್ರಗತಿ ಸಾಧನೆ: ಅಧಿಕಾರಿಗಳಿಗೆ ಸನ್ಮಾನ



**ಬಾಗಲಕೋಟೆ:** ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಕಾರ್ಯದಲ್ಲಿ ಪ್ರಗತಿ ಸಾಧಿಸಿ ಮಾದರಿ ಕಾರ್ಯನಿರ್ವಹಣೆ ಮಾಡಿದ ಬೂತ್ ಮಟ್ಟದ ಅಧಿಕಾರಿ ಅನ್ನಪೂರ್ಣ ಗೌರಿ ಮತ್ತು ಶಾಮಲಾ ಪೂಜಾರಿ ಅವರಿಗೆ ತಾಲೂಕಾ ಆಡಳಿತದ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ತಾಲೂಕಿನ ಕಲಾದಗಿ ಹೋಬಳಿ ವ್ಯಾಪ್ತಿಯಲ್ಲಿ ಬರುವ ಸೊಕನಾದಗಿ ಗ್ರಾಮದ ಮತಗಟ್ಟೆ ಸಂಖ್ಯೆ 163ರಲ್ಲಿ ಎನ್ಯೂಮರೇಷನ್ ಹಂಚಿಕೆ ಹಾಗೂ ಗಣಕೀಕರಣ ಕಾರ್ಯದಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಿದ ಅನ್ನಪೂರ್ಣ ಗೌರಿ ಹಾಗೂ ಇದೇ ಹೋಬಳಿಯ ಮುರನಾಳ ವೃತ್ತದ ಆನದಿನ್ನಿ ಗ್ರಾಮದ ಮತಗಟ್ಟೆ ಸಂಖ್ಯೆ 171ರ ಶಾಮಲಾ ಪೂಜಾರಿ ಅವರಿಗೆ ಉಪ ವಿಭಾಗಾಧಿಕಾರಿ ಮಹೇಶಕುಮಾರ ಮಾಲಗಿತ್ತಿ ಹಾಗೂ ತಹಶೀಲ್ದಾರ ವಾಸುದೇವ ಸ್ವಾಮಿ ಸನ್ಮಾನಿಸಿದರು.

ಉಪ ತಹಶೀಲ್ದಾರ ಕಲಾದಗಿ, ಕಚೇರಿ ಶಿರಸ್ತೆದಾರ ಎನ್.ಜಿ.ಕುಲಕರ್ಣಿ, ಗ್ರಾಮ ಆಡಳಿತ ಅಧಿಕಾರಿ ಮುರನಾಳ ವೃತ್ತ, ನೋಡಲ್ ಅಧಿಕಾರಿ ಪರಮೇಶ್ವರ ಚಲವಾದಿ, ಸೊಕನಾದಗಿ ಗ್ರಾಮ ಆಡಳಿತ ಅಧಿಕಾರಿ ಪಿರಗನ್ನವರ ಸೇರಿದಂತೆ ಇತರರು ಇದ್ದರು.

## ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿಯಿಂದ ಪ್ರತಿಭಟನೆ



**ವಿಜಯಪುರ :** ಎಸ್.ಐ.ಆರ್. ವಿಫಲಗೊಳಿಸುವ ಹುನ್ನಾರದೊಂದಿಗೆ ರಾಜ್ಯ ಸರ್ಕಾರ ಶಾಶ್ವತ ರಹವಾಸಿ ಪ್ರಮಾಣ ಪತ್ರ ನೀಡುವ ಪ್ರಕ್ರಿಯೆ ಆರಂಭಿಸಿ ದೇಶದ ಆಂತರಿಕ ಭದ್ರತೆಗೆ ದೊಡ್ಡ ಆತಂಕ ಮೂಡಿಸುತ್ತಿದ್ದು, ಕೂಡಲೇ ರಾಜ್ಯಪಾಲರು ಹಾಗೂ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಎಂದು ಒತ್ತಾಯಿಸಿ ಹಾಗೂ ಪಿ.ಆರ್.ಸಿ. ಪ್ರಕ್ರಿಯೆ ಕೈಗೊಳ್ಳುತ್ತಿರುವ ಕರ್ನಾಟಕ ಸರ್ಕಾರದ ವಿರುದ್ಧ ಭಾರತೀಯ ಜನತಾ ಪಕ್ಷದ ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ಹೌದು ನಗರದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಎದುರು ಜಮಾಯಿಸಿದ ನೂರಾರು ಕಾರ್ಯಕರ್ತರು ಪಿ.ಆರ್.ಸಿ. ಜಾರಿ ಮಾಡುತ್ತಿರುವ ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿ ಅಸಮಾಧಾನ ಹೊರಹಾಕಿದರು. ನಂತರ ಜಿಲ್ಲಾಧಿಕಾರಿಗಳ ಮುಖಾಂತರ ರಾಜ್ಯಪಾಲರು ಹಾಗೂ ಕೇಂದ್ರ ಗೃಹ ಮಂತ್ರಾಲಯಕ್ಕೆ ಲಿಖಿತ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಅಕ್ರಮ ವಲಸಿಗರನ್ನು ರಕ್ಷಣೆ ಮಾಡಿ ತನ್ನ ಮತ ಬ್ಯಾಂಕ್ ಆಗಿ ಮಾಡಿಕೊಳ್ಳಲು ಕಾಂಗ್ರೆಸ್ ಈ ಷಡ್ಯಂತ್ರ ರೂಪಿಸಿದೆ, ರಾಜ್ಯದ ಆಂತರಿಕ ಭದ್ರತೆಯನ್ನೂ ಗಣನೆಗೆ ತೆಗೆದುಕೊಳ್ಳದೇ ಕುರ್ಚಿ ಆಸೆಗೆ ಇಷ್ಟೊಂದು ನೀಚ ಮಟ್ಟಕ್ಕೆ ಇಳಿದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮಾತನಾಡಿ, ಪಿಆರ್ ಸಿ ಜಾರಿಯಿಂದ ಅಕ್ರಮ ನಿವಾಸಿಗಳಿಗೆ ಅಧಿಕೃತ ಮುದ್ರೆ ದೊರಕಿ ಕಾನೂನು ಸುವ್ಯವಸ್ಥೆಯೂ ನಿಯಂತ್ರಣದಲ್ಲಿ ಇಲ್ಲದ ಪರಿಸ್ಥಿತಿ ಬರಲಿದೆ. ಭಾರತದ ಸಂವಿಧಾನವು ದೇಶಾದ್ಯಂತ ಎಲ್ಲಾ ನಾಗರಿಕರಿಗೆ ಒಂದೇ ಪೌರತ್ವವನ್ನು ಕಲ್ಪಿಸುತ್ತದೆ. ಆದರೆ, ಕರ್ನಾಟಕ ಸರ್ಕಾರವು ಶಾಶ್ವತ ನಿವಾಸ ಪ್ರಮಾಣಪತ್ರವನ್ನು ನೀಡುವುದು ಈ ಸಾಂವಿಧಾನಿಕ ಚೌಕಟ್ಟಿಗೆ ವಿರುದ್ಧವಾಗಿದೆ, ಇದು ಯಾವುದೇ ಸಾಂವಿಧಾನಿಕ ಅಥವಾ ಶಾಸನಬದ್ಧ ಅಧಿಕಾರವಿಲ್ಲದೆ ಶಾಶ್ವತ ನಿವಾಸಿಗಳು ಎಂಬ ಪ್ರತ್ಯೇಕ ವರ್ಗವನ್ನು ರಚಿಸಲು ಪ್ರಯತ್ನಿಸುತ್ತದೆ. ಅಂತಹಉಲ್ಲಂಘಿಸುತ್ತದೆ ಎಂದರು. ಪ್ರತಿಭಟನೆಯಲ್ಲಿ ಸಂಸದ ರಮೇಶ ಜಿಗಜಿಣಗಿ, ಮಾಜಿ ಸಚಿವ ಅಪ್ಪಾಸಾಹೇಬ ಪಟ್ಟಣಶೆಟ್ಟಿ, ಬಿಜೆಪಿ ಮುಖಂಡರಾದ ವಿಜುಗೌಡ ಪಾಟೀಲ, ಸಂಜಯ ಪಾಟೀಲ ಕನಮಡಿ, ಈರಣ್ಣ ರಾವೂರ, ಸಾಬು ಮಾಶ್ಯಾಳ, ಮಳುಗೌಡ ಪಾಟೀಲ, ಸಂದೀಪ ಪಾಟೀಲ,ಸ್ವಪ್ನಾ ಕಣಮುಚನಾಳ, ಸಂತೋಷ, ಪಾಟೀಲ್ ಡಂಬಳ ರವಿಕಾಂತ ಬಗಲಿ, ಹಣಮಂತಗೌಡ ಬಿರಾದಾರ, ಶ್ರೀ ಹರ್ಷಗೌಡ ಪಾಟೀಲ ಉಪಸ್ಥಿತರಿದ್ದರು.

